Volume : 9 | Issue : 202 | October : 31 : 2026 : Saturday
ಸಂಪುಟ : 9 | ಸಂಚಿಕೆ : 202 | ಅಕ್ಟೋಬರ್ : 31 : 2026 : ಶನಿವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

ವಿಕ್ರಮ ವಾಹಿನಿ

ಪುಟ 4 | ₹2 | ಕನ್ನಡ ದಿನಪತ್ರಿಕೆ

VIKRAMA VAHINI
PRGI NO: KARKAN/2018/78481

ಆಟೋಮೊಬೈಲ್ ಮತ್ತು ಫರ್ನಿಚರ್ ಎಕ್ಸ್‌ಪೋ 2026ರಲ್ಲಿ 'ಪ್ರೇಮದ ಊರಲಿ' ಚಿತ್ರದ ಯಶಸ್ಸಿನ ಸಂಭ್ರಮ ಹಂಚಿಕೊಂಡ ನಟ ಶ್ರೀರಾಮ್ ಮತ್ತು ನಟಿ ತಪಸ್ವಿನಿ. ಬೆಂಗಳೂರಿನ ಅರಮನೆ ಮೈದಾನದಲ್ಲಿ ನಡೆದ ಕಾರ್ಯಕ್ರಮದಲ್ಲಿ ಪ್ರೇಕ್ಷಕರ ಪ್ರೀತಿಗೆ ಕೃತಜ್ಞತೆ ಸಲ್ಲಿಸಿದರು.

ಸಿದ್ದು ವಿಡಿಯೋ ಪ್ರಕರಣ: ಪೊಲೀಸರ ತನಿಖೆ ಬಗ್ಗೆಯೇ ಅನುಮಾನ ಪುಟ 3

2047ರ ಕರ್ನಾಟಕ ಅಭಿವೃದ್ಧಿಗೆ ದೂರದೃಷ್ಟಿಯ ಮಹಾಯೋಜನೆ ಪುಟ 4

ಹೆಲಿಕಾಪ್ಟರ್ ಪತನ: ರಾಜ್ಯದ 6 ಮಂದಿ ಸಾವು

● ವಿಕ್ರಮ ವಾಹಿನಿ । ಡೆಹ್ರಾಡೂನ್

ಉತ್ತರಾಖಂಡದ ಬದರಿನಾಥದಿಂದ ಡೆಹ್ರಾಡೂನ್‌ಗೆ ತೆರಳುತ್ತಿದ್ದ ಹೆಲಿಕಾಪ್ಟರ್ ಶುಕ್ರವಾರ ಚಮೋಲಿ ಜಿಲ್ಲೆಯ ಜೋಶಿಮಠ ಸಮೀಪದ ಹಾಥಿ ಪರ್ವತ ಪ್ರದೇಶದಲ್ಲಿ ಪತನಗೊಂಡಿದ್ದು, ಬೆಂಗಳೂರಿನ ಐವರು ಪ್ರಯಾಣಿಕರು ಹಾಗೂ ಪೈಲಟ್ ಸೇರಿ ಆರು ಮಂದಿ ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ.

ಟ್ರಾನ್ಸ್ ಭಾರತ್ ಏವಿಯೇಷನ್ ಸಂಸ್ಥೆಗೆ ಸೇರಿದ ಹೆಲಿಕಾಪ್ಟರ್ ಬದರಿನಾಥದಿಂದ ಹೊರಟ ಬಳಿಕ ಸಂಪರ್ಕ ಕಳೆದುಕೊಂಡಿತ್ತು. ಜೋಶಿಮಠದ ಸಮೀಪದ ಚೈನ್ ಗ್ರಾಮದ ಬಳಿ ಅಪಘಾತ ಸಂಭವಿಸಿರುವ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ಭಾರತೀಯ ಸೇನೆ, ಚಮೋಲಿ ಜಿಲ್ಲಾಡಳಿತ ಹಾಗೂ ರಾಜ್ಯ ವಿಪತ್ತು ನಿರ್ವಹಣಾ ಪಡೆ (ಎಸ್‌ಡಿಆರ್‌ಎಫ್) ಶೋಧ ಮತ್ತು ರಕ್ಷಣಾ ಕಾರ್ಯಾಚರಣೆ ಆರಂಭಿಸಿವೆ.

ಮೃತರನ್ನು ಬೆಂಗಳೂರಿನ ಪ್ರತಾಪ್, ಸಿಸಿಬಿ ಇನ್‌ಸ್ಪೆಕ್ಟರ್ ಅರುಣ್ ಸಾಲಂಕೆ, ಶಂಕರ್ ಗೌಡ, ಸುಧೀರ್ ಕೆ. ಹಾಗೂ ಎಚ್.ಎಸ್. ನಟರಾಜ್ ಎಂದು ಗುರುತಿಸಲಾಗಿದೆ. ಹೆಲಿಕಾಪ್ಟರ್‌ನ್ನು ಕ್ಯಾಪ್ಟನ್ ಹಿಮಾಂಶು ಚಲಾಯಿಸುತ್ತಿದ್ದರು ಎಂದು ವರದಿಯಾಗಿದೆ. ಮೃತ ಅರುಣ್ ಸಾಲಂಕೆ ಅವರು ಪತ್ನಿ ಹಾಗೂ ಇಬ್ಬರು ಮಕ್ಕಳನ್ನು ಅಗಲಿದ್ದಾರೆ. ಇವರು ಇತರರೊಂದಿಗೆ ಚಾರ್‌ಧಾಮ್ ಯಾತ್ರೆಗೆ ತೆರಳಿದ್ದರು ಎನ್ನಲಾಗಿದೆ.

ಉತ್ತರಾಖಂಡ ಮುಖ್ಯಮಂತ್ರಿ ಪುಷ್ಕರ್ ಸಿಂಗ್ ಧಾಮಿ ಅವರು ಘಟನೆ ಕುರಿತು ಎಕ್ಸ್‌ನಲ್ಲಿ ಮಾಹಿತಿ ಹಂಚಿಕೊಂಡಿದ್ದು, ಹಾಥಿ ಪರ್ವತ ಪ್ರದೇಶದ ಬಳಿ ಹೆಲಿಕಾಪ್ಟರ್ ಪತನಗೊಂಡಿರುವ ದುರದೃಷ್ಟಕರ ಸುದ್ದಿ ಲಭ್ಯವಾಗಿದೆ. ಜಿಲ್ಲಾಡಳಿತ, ವಿಪತ್ತು ನಿರ್ವಹಣಾ ಇಲಾಖೆ ಹಾಗೂ ಎಸ್‌ಡಿಆರ್‌ಎಫ್ ತಂಡಗಳು ಜಂಟಿಯಾಗಿ ರಕ್ಷಣಾ ಕಾರ್ಯಾಚರಣೆ ನಡೆಸುತ್ತಿವೆ.

ಘಟನೆಯ ಮೇಲೆ ನಿರಂತರ ನಿಗಾ ಇರಿಸಿದ್ದು, ಗಾಯಾಳುಗಳಿದ್ದರೆ ಅವರನ್ನು ತಕ್ಷಣವೇ ವಿಮಾನದ ಮೂಲಕ ಉನ್ನತ ವೈದ್ಯಕೀಯ ಕೇಂದ್ರಗಳಿಗೆ ಕರೆದೊಯ್ಯುವಂತೆ ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

ಉತ್ತರಾಖಂಡ ನಾಗರಿಕ ವಿಮಾನಯಾನ ಅಭಿವೃದ್ಧಿ ಪ್ರಾಧಿಕಾರದ ಪ್ರಕಾರ, ವಿಟಿ–ಎಚ್‌ಸಿಎಕ್ಸ್ ನೋಂದಣಿ ಸಂಖ್ಯೆಯ ಹೆಲಿಕಾಪ್ಟರ್ ಜೋಶಿಮಠ ಕಣಿವೆಯ ಮೇಲೆ ಹಾರುತ್ತಿದ್ದಾಗ ಸಂಪರ್ಕ ಕಳೆದುಕೊಂಡಿತ್ತು. ಹಿಮಪಾತ ಮತ್ತು ದುರ್ಗಮ ಪರ್ವತ ಪ್ರದೇಶದಿಂದಾಗಿ ರಕ್ಷಣಾ ಕಾರ್ಯಾಚರಣೆಗೆ ಅಡಚಣೆ ಉಂಟಾಗಿದೆ. ಅಪಘಾತಕ್ಕೆ ನಿಖರ ಕಾರಣವೇನು ಎಂಬುದು ಇನ್ನೂ ತಿಳಿದುಬಂದಿಲ್ಲ. ಈ ಕುರಿತು ತನಿಖೆ ನಡೆಯಬೇಕಿದೆ.

ಉತ್ತರಾಖಂಡದ ಚಮೋಲಿ ಜಿಲ್ಲೆಯ ಜೋಶಿಮಠ ಸಮೀಪದ ಹಾಥಿ ಪರ್ವತ ಪ್ರದೇಶದಲ್ಲಿ ಸಂಭವಿಸಿದ ಹೆಲಿಕಾಪ್ಟರ್ ದುರಂತದಲ್ಲಿ ಬೆಂಗಳೂರಿನ ಐವರು ಪ್ರಯಾಣಿಕರು ಸೇರಿದಂತೆ ಆರು ಮಂದಿ ಮೃತಪಟ್ಟಿದ್ದಾರೆ. ಬದರಿನಾಥದಿಂದ ಡೆಹ್ರಾಡೂನ್‌ಗೆ ತೆರಳುತ್ತಿದ್ದ ಟ್ರಾನ್ಸ್ ಭಾರತ್ ಏವಿಯೇಷನ್ ಸಂಸ್ಥೆಯ ಹೆಲಿಕಾಪ್ಟರ್ ಸಂಪರ್ಕ ಕಳೆದುಕೊಂಡು ಪತನಗೊಂಡಿದೆ. ಮೃತರಲ್ಲಿ ಸಿಸಿಬಿ ಇನ್‌ಸ್ಪೆಕ್ಟರ್ ಅರುಣ್ ಸಾಲಂಕೆ ಕೂಡ ಸೇರಿದ್ದಾರೆ. ಹಿಮಪಾತ ಹಾಗೂ ದುರ್ಗಮ ಪರ್ವತ ಪ್ರದೇಶ ರಕ್ಷಣಾ ಕಾರ್ಯಾಚರಣೆಗೆ ಅಡ್ಡಿಯಾಗಿದ್ದು, ಭಾರತೀಯ ಸೇನೆ, ಜಿಲ್ಲಾಡಳಿತ ಮತ್ತು ಎಸ್‌ಡಿಆರ್‌ಎಫ್ ತಂಡಗಳು ಕಾರ್ಯಾಚರಣೆ ನಡೆಸಿವೆ. ಅಪಘಾತದ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ.

■ ಸುದ್ದಿ ಚುಟುಕು

ಅಸಭ್ಯ ಸಂದೇಶ: ಉಪನ್ಯಾಸಕನಿಗೆ ವಿದ್ಯಾರ್ಥಿನಿಯರ ಧರ್ಮದೇಟು

● ವಿಕ್ರಮ ವಾಹಿನಿ । ಮಂಡ್ಯ

ವಿದ್ಯಾರ್ಥಿನಿಯರಿಗೆ ಮೊಬೈಲ್ ಮೂಲಕ ಅಸಭ್ಯ ಸಂದೇಶ ಕಳುಹಿಸಿ ಕಿರುಕುಳ ನೀಡುತ್ತಿದ್ದ ಆರೋಪದ ಮೇಲೆ ಉಪನ್ಯಾಸಕನನ್ನು ವಿದ್ಯಾರ್ಥಿನಿಯರೇ ತರಾಟೆಗೆ ತೆಗೆದುಕೊಂಡ ಘಟನೆ ನಾಗಮಂಗಲ–ಮಂಡ್ಯ ರಸ್ತೆಯ ಪದವಿ ಕಾಲೇಜಿನಲ್ಲಿ ನಡೆದಿದೆ. ಗಂಗೂ ಎಂಬ ಉಪನ್ಯಾಸಕ ವಿದ್ಯಾರ್ಥಿನಿಯರ ಮೊಬೈಲ್ ಸಂಖ್ಯೆಯನ್ನು ಪಡೆದುಕೊಂಡು ನಿರಂತರವಾಗಿ ಚಾಟಿಂಗ್ ಮಾಡುತ್ತಿದ್ದ. ಅಲ್ಲದೆ, ಸಂದೇಶಗಳಲ್ಲಿ 'ಐ ಲವ್ ಯೂ', 'ಐ ಲೈಕ್ ಯೂ' ಎಂದು ಕಳುಹಿಸಿ ಮಾನಸಿಕ ಕಿರುಕುಳ ನೀಡುತ್ತಿದ್ದ ಎಂದು ವಿದ್ಯಾರ್ಥಿನಿಯರು ಆರೋಪಿಸಿದ್ದಾರೆ.

ಉಪನ್ಯಾಸಕನ ವರ್ತನೆಯಿಂದ ಬೇಸತ್ತ ವಿದ್ಯಾರ್ಥಿನಿಯರು ಕಾಲೇಜಿನ ಸಿಬ್ಬಂದಿ ಕೊಠಡಿಗೆ ತೆರಳಿ ಆತನನ್ನು ಪ್ರಶ್ನಿಸಿದ್ದಾರೆ. ಈ ವೇಳೆ ಆಕ್ರೋಶಗೊಂಡ ವಿದ್ಯಾರ್ಥಿನಿಯರು ಉಪನ್ಯಾಸಕನಿಗೆ ಥಳಿಸಿದ್ದಾರೆ ಎನ್ನಲಾಗಿದೆ. ವಿದ್ಯಾರ್ಥಿನಿಯರನ್ನು ಕಂಡು ಗಾಬರಿಗೊಂಡ ಉಪನ್ಯಾಸಕ ತನ್ನ ತಲೆಯನ್ನು ಚಚ್ಚಿಕೊಂಡು ಹೈಡ್ರಾಮಾ ಮಾಡಿದ್ದಾನೆ. ಬಳಿಕ ತನ್ನ ತಪ್ಪನ್ನು ಒಪ್ಪಿಕೊಂಡು ಕೈಮುಗಿದು ಕ್ಷಮೆಯಾಚಿಸಿದ್ದಾನೆ ಎಂದು ವರದಿಯಾಗಿದೆ.

ಘಟನೆಯ ಸುದ್ದಿ ಹರಡುತ್ತಿದ್ದಂತೆ ವಿದ್ಯಾರ್ಥಿನಿಯರ ಧೈರ್ಯದ ಬಗ್ಗೆ ಸಾರ್ವಜನಿಕ ವಲಯದಲ್ಲಿ ಚರ್ಚೆ ಆರಂಭವಾಗಿದೆ. ವಿದ್ಯಾರ್ಥಿನಿಯರಿಗೆ ಕಿರುಕುಳ ನೀಡಿದ ಆರೋಪದ ಕುರಿತು ಸೂಕ್ತ ತನಿಖೆ ನಡೆಸಿ, ಉಪನ್ಯಾಸಕನ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂಬ ಒತ್ತಾಯ ವ್ಯಕ್ತವಾಗಿದೆ.

ರಷ್ಯಾದ ತೈಲ ಘಟಕದ ಮೇಲೆ ಉಕ್ರೇನ್ ಡ್ರೋನ್ ದಾಳಿ

● ವಿಕ್ರಮ ವಾಹಿನಿ । ಮಾಸ್ಕೋ

ರಷ್ಯಾ ಮತ್ತು ಉಕ್ರೇನ್ ನಡುವಿನ ಯುದ್ಧ ಮತ್ತಷ್ಟು ತೀವ್ರಗೊಂಡಿದ್ದು, ರಷ್ಯಾದ ಪ್ರಮುಖ ತೈಲ ಸಂಸ್ಕರಣಾಗಾರದ ಮೇಲೆ ಉಕ್ರೇನ್ ಡ್ರೋನ್ ದಾಳಿ ನಡೆಸಿದೆ. ದಾಳಿಯ ಪರಿಣಾಮ ತೈಲ ಘಟಕದಲ್ಲಿ ಭಾರಿ ಅಗ್ನಿ ಅವಘಡ ಸಂಭವಿಸಿದ್ದು, ಆಕಾಶದೆತ್ತರಕ್ಕೆ ಕಪ್ಪು ಹೊಗೆ ಆವರಿಸಿರುವ ದೃಶ್ಯಗಳು ವೈರಲ್ ಆಗಿವೆ. ಉಕ್ರೇನ್ ಗಡಿಗೆ ಸಮೀಪದಲ್ಲಿರುವ ತೈಲ ಸಂಸ್ಕರಣಾಗಾರದ ಇಂಧನ ಶೇಖರಣಾ ಟ್ಯಾಂಕ್‌ಗಳನ್ನು ಗುರಿಯಾಗಿಸಿಕೊಂಡು ಡ್ರೋನ್ ದಾಳಿ ನಡೆಸಲಾಗಿದೆ ಎನ್ನಲಾಗಿದೆ. ದಾಳಿಯ ಬಳಿಕ ಸಂಸ್ಕರಣಾಗಾರದ ಹಲವು ಭಾಗಗಳಲ್ಲಿ ಬೆಂಕಿ ಕಾಣಿಸಿಕೊಂಡಿದ್ದು, ತೈಲ ಟ್ಯಾಂಕ್‌ಗಳು ಹೊತ್ತಿ ಉರಿದಿವೆ. ಕಿಲೋಮೀಟರ್‌ಗಳಷ್ಟು ದೂರಕ್ಕೆ ದಟ್ಟ ಕಪ್ಪು ಹೊಗೆ ಹರಡಿದೆ.

ಅಗ್ನಿ ಅವಘಡದಿಂದ ಸುತ್ತಮುತ್ತಲಿನ ಪ್ರದೇಶದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಸ್ಥಳೀಯ ನಿವಾಸಿಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲಾಗಿದೆ. ಅಗ್ನಿಶಾಮಕ ಸಿಬ್ಬಂದಿ ಬೆಂಕಿ ನಂದಿಸುವ ಕಾರ್ಯಾಚರಣೆ ಕೈಗೊಂಡಿದ್ದಾರೆ. ರಷ್ಯಾದ ಯುದ್ಧ ಚಟುವಟಿಕೆಗಳಿಗೆ ಇಂಧನ ಪೂರೈಸುವ ಪ್ರಮುಖ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ಉಕ್ರೇನ್ ದಾಳಿ ನಡೆಸುತ್ತಿದೆ ಎನ್ನಲಾಗಿದೆ. ಆದರೆ, ಈ ದಾಳಿಯಿಂದ ಉಂಟಾಗಿರುವ ನಿಖರ ಹಾನಿ ಹಾಗೂ ಸಂಭವನೀಯ ಸಾವು–ನೋವುಗಳ ಕುರಿತು ಸ್ಪಷ್ಟ ಮಾಹಿತಿ ಲಭ್ಯವಾಗಿಲ್ಲ.

ವಿಶ್ವ ಕುಸ್ತಿ ಚಾಂಪಿಯನ್‌ಷಿಪ್‌ನಲ್ಲಿ ಮನಿಷಾಗೆ ಚಿನ್ನ

● ವಿಕ್ರಮ ವಾಹಿನಿ । ನವದೆಹಲಿ

ಭಾರತದ ಕುಸ್ತಿಪಟು ಮನಿಷಾ ಭಾನ್ವಾಲಾ ವಿಶ್ವ ಕುಸ್ತಿ ಚಾಂಪಿಯನ್‌ಷಿಪ್‌ನಲ್ಲಿ ಚಿನ್ನದ ಪದಕ ಗೆಲ್ಲುವ ಮೂಲಕ ಇತಿಹಾಸ ಸೃಷ್ಟಿಸಿದ್ದಾರೆ.

ಕಜಕಸ್ತಾನದ ಅಸ್ತಾನಾದಲ್ಲಿ ನಡೆದ ಮಹಿಳೆಯರ 59 ಕೆ.ಜಿ. ವಿಭಾಗದ ಫೈನಲ್‌ನಲ್ಲಿ ಅಮೆರಿಕದ ಎಲಿಜಬೆತ್ ನೆಟ್ಟೆ ಅವರನ್ನು 8–6 ಅಂಕಗಳಿಂದ ಮಣಿಸಿ, ವಿಶ್ವ ಚಾಂಪಿಯನ್‌ಷಿಪ್‌ನಲ್ಲಿ ಚಿನ್ನ ಗೆದ್ದ ಭಾರತದ ಮೊದಲ ಮಹಿಳಾ ಕುಸ್ತಿಪಟು ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ಫೈನಲ್‌ನ ಮೊದಲಾರ್ಧದಲ್ಲಿ 1–5 ಅಂಕಗಳಿಂದ ಹಿನ್ನಡೆ ಅನುಭವಿಸಿದ್ದ 29 ವರ್ಷದ ಮನಿಷಾ, ದ್ವಿತೀಯಾರ್ಧದಲ್ಲಿ ಅದ್ಭುತ ಪ್ರದರ್ಶನ ನೀಡಿ ಗೆಲುವು ಸಾಧಿಸಿದರು. ಫೈನಲ್‌ಗೂ ಮುನ್ನ ಕೆನಡಾ, ಮಂಗೋಲಿಯಾ ಹಾಗೂ ಕಜಕಸ್ತಾನದ ಕುಸ್ತಿಪಟುಗಳನ್ನು ಸೋಲಿಸಿ ಪ್ರಶಸ್ತಿ ಸುತ್ತು ತಲುಪಿದ್ದರು.

ಇದೇ ಚಾಂಪಿಯನ್‌ಷಿಪ್‌ನಲ್ಲಿ ಭಾರತದ ನೀಲಂ ಸಿರೋಹಿ ಮತ್ತು ಕಾಜಲ್ ಧೋಚಕ್ ಬೆಳ್ಳಿ ಪದಕ ಗೆದ್ದಿದ್ದಾರೆ.

ವಿಷ್ಣು, ಸರೋಜಾದೇವಿಗೆ ಕರ್ನಾಟಕ ರತ್ನ ಗೌರವ

● ವಿಕ್ರಮ ವಾಹಿನಿ । ಬೆಂಗಳೂರು

ಕನ್ನಡ ಚಿತ್ರರಂಗದ ಮೇರು ನಟರಾದ ಸಾಹಸಸಿಂಹ ಡಾ. ವಿಷ್ಣುವರ್ಧನ್ ಹಾಗೂ ಹಿರಿಯ ನಟಿ ಬಿ. ಸರೋಜಾದೇವಿ ಅವರಿಗೆ ನವೆಂಬರ್ 19ರಂದು ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿ ಪ್ರದಾನ ಮಾಡಲು ರಾಜ್ಯ ಸರ್ಕಾರ ನಿರ್ಧರಿಸಿದೆ.

ವಿಧಾನಸೌಧದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಕನ್ನಡ ಮತ್ತು ಸಂಸ್ಕೃತಿ ಸಚಿವ ಶಿವರಾಜ್ ತಂಗಡಗಿ, ವಿಧಾನಸೌಧದ ಗ್ರ್ಯಾಂಡ್ ಸ್ಟೆಪ್ಸ್ ಮುಂಭಾಗ ನಡೆಯಲಿರುವ ಸಮಾರಂಭದಲ್ಲಿ ಇಬ್ಬರು ಕಲಾವಿದರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ತಿಳಿಸಿದರು. ಸಮಾರಂಭಕ್ಕೆ ತಮಿಳು ಚಿತ್ರರಂಗದ ಹಿರಿಯ ನಟ ರಜನಿಕಾಂತ್ ಅವರನ್ನು ಆಹ್ವಾನಿಸುವ ಚಿಂತನೆಯೂ ಇದೆ. ವಿಷ್ಣುವರ್ಧನ್ ಮತ್ತು ಸರೋಜಾದೇವಿ ಅವರೊಂದಿಗೆ ನಟಿಸಿದ ನಟಿಯರಾದ ಲಕ್ಷ್ಮಿ ಹಾಗೂ ಸುಹಾಸಿನಿ ಸೇರಿದಂತೆ ಸಮಕಾಲೀನ ಕಲಾವಿದರನ್ನು ಆಹ್ವಾನಿಸಲು ಉದ್ದೇಶಿಸಲಾಗಿದೆ ಎಂದರು.

2025ರ ಸೆಪ್ಟೆಂಬರ್ 11ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ವಿಷ್ಣುವರ್ಧನ್ ಮತ್ತು ಸರೋಜಾದೇವಿ ಅವರಿಗೆ ಮರಣೋತ್ತರವಾಗಿ ಕರ್ನಾಟಕ ರತ್ನ ಪ್ರಶಸ್ತಿ ನೀಡಲು ತೀರ್ಮಾನಿಸಲಾಗಿತ್ತು. ಇದೀಗ ಪ್ರಶಸ್ತಿ ಪ್ರದಾನಕ್ಕೆ ದಿನಾಂಕ ನಿಗದಿಪಡಿಸಲಾಗಿದೆ. ಪ್ರಶಸ್ತಿಗೆ ಇನ್ನೂ ಹಲವು ಮಂದಿ ಅರ್ಹರಿದ್ದು, ಮುಂದಿನ ದಿನಗಳಲ್ಲಿ ಅವರನ್ನು ಪರಿಗಣಿಸಲಾಗುವುದು ಎಂದು ಸಚಿವರು ಹೇಳಿದರು.

ಇದುವರೆಗೆ 10 ಸಾಧಕರಿಗೆ ಗೌರವ

ರಾಜ್ಯದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ ಕರ್ನಾಟಕ ರತ್ನವನ್ನು 1992ರಲ್ಲಿ ರಾಷ್ಟ್ರಕವಿ ಕುವೆಂಪು ಹಾಗೂ ಡಾ. ರಾಜಕುಮಾರ್ ಅವರಿಗೆ ಮೊದಲ ಬಾರಿಗೆ ಪ್ರದಾನ ಮಾಡಲಾಗಿತ್ತು.

ಬಳಿಕ ಎಸ್. ನಿಜಲಿಂಗಪ್ಪ, ಸಿ.ಎನ್.ಆರ್. ರಾವ್, ಡಾ. ದೇವಿ ಶೆಟ್ಟಿ, ಭೀಮಸೇನ ಜೋಶಿ, ಶಿವಕುಮಾರ ಸ್ವಾಮೀಜಿ, ದೇ. ಜವರೇಗೌಡ, ವೀರೇಂದ್ರ ಹೆಗ್ಗಡೆ ಹಾಗೂ ಪುನೀತ್ ರಾಜಕುಮಾರ್ ಅವರಿಗೆ ಈ ಗೌರವ ನೀಡಲಾಗಿದೆ. ವಿಷ್ಣುವರ್ಧನ್ ಅವರಿಗೆ ಕರ್ನಾಟಕ ರತ್ನ ನೀಡುವಂತೆ ಅವರ ಕುಟುಂಬದ ಸದಸ್ಯರು, ಅಭಿಮಾನಿಗಳ ಸಂಘಟನೆಗಳು ಹಾಗೂ ಚಿತ್ರರಂಗದ ಕಲಾವಿದರು ಹಲವು ಬಾರಿ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದರು.

ಭಾರತಿ ವಿಷ್ಣುವರ್ಧನ್, ಅನಿರುದ್ಧ ಸೇರಿದಂತೆ ಹಲವು ಗಣ್ಯರು ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳನ್ನು ಭೇಟಿ ಮಾಡಿ ಪ್ರಶಸ್ತಿ ನೀಡುವಂತೆ ಒತ್ತಾಯಿಸಿದ್ದರು. ನಟಿಯರಾದ ಜಯಮಾಲಾ, ಶ್ರುತಿ, ತಾರಾ ಅನುರಾಧ ಮತ್ತು ಮಾಳವಿಕಾ ಅವಿನಾಶ್ ಕೂಡ ಇಬ್ಬರು ಹಿರಿಯ ಕಲಾವಿದರಿಗೆ ಪ್ರಶಸ್ತಿ ನೀಡುವಂತೆ ಮನವಿ ಮಾಡಿದ್ದರು.

ಈರುಳ್ಳಿ ಬೆಲೆ ಕುಸಿತ: ಕಂಗಾಲಾದ ಅನ್ನದಾತರು

● ವಿಕ್ರಮ ವಾಹಿನಿ । ಬಳ್ಳಾರಿ

ಗ್ರಾಹಕರ ಕಣ್ಣಲ್ಲಿ ನೀರು ತರಿಸಿದ್ದ ಈರುಳ್ಳಿ ಇದೀಗ ಬೆಳೆಗಾರರ ಕಣ್ಣಲ್ಲಿ ಕಣ್ಣೀರು ತರಿಸುತ್ತಿದೆ. ಬಳ್ಳಾರಿ ಎಪಿಎಂಸಿ ಮಾರುಕಟ್ಟೆಯಲ್ಲಿ ಈರುಳ್ಳಿ ಬೆಲೆ ದಿಢೀರ್ ಕುಸಿದಿದ್ದು, ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಕ್ವಿಂಟಾಲ್‌ಗೆ ಕನಿಷ್ಠ 6 ಸಾವಿರ ರೂ. ಬೆಲೆ ನಿಗದಿಪಡಿಸುವಂತೆ ರೈತರು ಒತ್ತಾಯಿಸಿದ್ದಾರೆ.

ನಾಲ್ಕು ದಿನಗಳ ಹಿಂದಷ್ಟೇ ಕ್ವಿಂಟಾಲ್‌ಗೆ 5ರಿಂದ 6 ಸಾವಿರ ರೂ.ವರೆಗೆ ಮಾರಾಟವಾಗುತ್ತಿದ್ದ ಈರುಳ್ಳಿ ಬೆಲೆ ಈಗ 2,500ರಿಂದ 4,500 ರೂ.ಗೆ ಇಳಿಕೆಯಾಗಿದೆ. ಉತ್ತಮ ಬೆಲೆಯ ನಿರೀಕ್ಷೆಯಲ್ಲಿ ಮಾರುಕಟ್ಟೆಗೆ ಬೆಳೆ ತಂದಿದ್ದ ರೈತರಿಗೆ ದಿಢೀರ್ ಕುಸಿತ ಆಘಾತ ನೀಡಿದೆ. ಹವಾಮಾನ ವೈಪರೀತ್ಯದ ಜತೆಗೆ ದಲ್ಲಾಳಿಗಳ ಹಾವಳಿಯೇ ಬೆಲೆ ಇಳಿಕೆಗೆ ಕಾರಣ ಎಂದು ರೈತರು ಆರೋಪಿಸಿದ್ದಾರೆ.

ಈರುಳ್ಳಿ ಬೆಳೆಯಲು ಬಿತ್ತನೆ ಬೀಜ, ಗೊಬ್ಬರ, ಔಷಧ, ನೀರಾವರಿ ಹಾಗೂ ಕೂಲಿ ಕಾರ್ಮಿಕರಿಗಾಗಿ ಸಾವಿರಾರು ರೂಪಾಯಿ ಖರ್ಚು ಮಾಡಲಾಗಿದೆ. ಆದರೆ ಈಗಿನ ಬೆಲೆಗೆ ಮಾರಾಟ ಮಾಡಿದರೆ ಹಾಕಿದ ಬಂಡವಾಳವೂ ವಾಪಸ್ ಸಿಗದ ಪರಿಸ್ಥಿತಿ ನಿರ್ಮಾಣವಾಗಿದೆ. ಸಾಲ ಮಾಡಿ ಬೆಳೆ ಬೆಳೆದಿರುವ ರೈತರು ಸಾಲ ತೀರಿಸುವುದು ಹೇಗೆ ಎಂಬ ಚಿಂತೆಯಲ್ಲಿದ್ದಾರೆ.

ಮಾರುಕಟ್ಟೆಯಲ್ಲಿ ದಲ್ಲಾಳಿಗಳ ಹಾವಳಿ ಹೆಚ್ಚಿದ್ದರೂ ಎಪಿಎಂಸಿ ಅಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳುತ್ತಿಲ್ಲ. ಮಾರುಕಟ್ಟೆಗೆ ಭೇಟಿ ನೀಡಿ ರೈತರ ಸಮಸ್ಯೆ ಆಲಿಸುತ್ತಿಲ್ಲ ಎಂದು ಬೆಳೆಗಾರರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಕ್ವಿಂಟಾಲ್ ಈರುಳ್ಳಿಗೆ ಕನಿಷ್ಠ 6 ಸಾವಿರ ರೂ. ಬೆಲೆ ನಿಗದಿಪಡಿಸಬೇಕು. ದಲ್ಲಾಳಿಗಳ ಹಾವಳಿಗೆ ಕಡಿವಾಣ ಹಾಕಿ, ಎಪಿಎಂಸಿ ಅಧಿಕಾರಿಗಳು ತಕ್ಷಣ ಮಧ್ಯಪ್ರವೇಶಿಸಿ ರೈತರ ನೆರವಿಗೆ ಧಾವಿಸಬೇಕು. ಇಲ್ಲದಿದ್ದರೆ ಬೀದಿಗಿಳಿದು ಉಗ್ರ ಹೋರಾಟ ನಡೆಸಲಾಗುವುದು ಎಂದು ರೈತ ಮುಖಂಡರು ಎಚ್ಚರಿಕೆ ನೀಡಿದ್ದಾರೆ.

ಶಕ್ತಿ ಯೋಜನೆಯಿಂದ ಸಾರಿಗೆ ಇಲಾಖೆ ನಷ್ಟ: ಡಿಕೆಶಿ

● ವಿಕ್ರಮ ವಾಹಿನಿ । ಬೆಂಗಳೂರು

ಶಕ್ತಿ ಯೋಜನೆಯಿಂದ ಸಾರಿಗೆ ಇಲಾಖೆಗೆ ಹೆಚ್ಚಿನ ಆರ್ಥಿಕ ನಷ್ಟ ಉಂಟಾಗಿದ್ದು, ಕೆಎಸ್‌ಆರ್‌ಟಿಸಿ ಮತ್ತು ಬಿಎಂಟಿಸಿ ಬಸ್‌ಗಳಿಗೆ ಡೀಸೆಲ್ ಖರೀದಿಸಲೂ ಹಣದ ಕೊರತೆ ಎದುರಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಸಚಿವ ಸಂಪುಟ ಸಭೆಯ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯ ಕಲ್ಪಿಸುವ ಶಕ್ತಿ ಯೋಜನೆಯಿಂದ ಸಾರಿಗೆ ಸಂಸ್ಥೆಗಳ ಮೇಲೆ ಆರ್ಥಿಕ ಹೊರೆ ಹೆಚ್ಚಾಗಿದೆ. ಹೀಗಾಗಿ ಬಸ್ ಪ್ರಯಾಣ ದರ ಏರಿಕೆ ಕುರಿತು ನಿರ್ಧಾರ ಕೈಗೊಳ್ಳುವಂತೆ ಸಾರಿಗೆ ಇಲಾಖೆಗೆ ಸೂಚಿಸಲಾಗಿದೆ ಎಂದರು.

ಹಾಲಿನ ದರ ಏರಿಕೆ ಬಹುದಿನಗಳ ಬೇಡಿಕೆಯಾಗಿತ್ತು. ದರ ಹೆಚ್ಚಳದಿಂದ ಬರುವ ಹೆಚ್ಚುವರಿ ಹಣ ರೈತರಿಗೆ ತಲುಪಲಿದೆ. ಜನರು ಒಂದು ಲೀಟರ್ ನೀರಿಗೆ 30ರಿಂದ 35 ರೂ. ನೀಡುತ್ತಾರೆ. ನೆರೆಯ ಆಂಧ್ರಪ್ರದೇಶಕ್ಕೆ ಹೋಲಿಸಿದರೆ ರಾಜ್ಯದಲ್ಲಿ ಹಾಲಿನ ಬೆಲೆ ಕಡಿಮೆ ಇದೆ. ಈ ಕಾರಣದಿಂದ ನಂದಿನಿ ಹಾಲು ಆಂಧ್ರಪ್ರದೇಶ ಮತ್ತು ಮಹಾರಾಷ್ಟ್ರಕ್ಕೆ ಸಾಗಣೆಯಾಗುತ್ತಿತ್ತು. ಇದನ್ನು ತಡೆಯುವ ಅಗತ್ಯವಿದೆ ಎಂದು ಸಮರ್ಥಿಸಿಕೊಂಡರು.

ಬಸ್ ಪ್ರಯಾಣ ದರ ಏರಿಕೆ ಕುರಿತು ಸಂಪುಟ ಸಭೆಯಲ್ಲಿ ಚರ್ಚಿಸಲಾಗಿದ್ದು, ಅಂತಿಮ ನಿರ್ಧಾರವನ್ನು ಸಾರಿಗೆ ಇಲಾಖೆಗೆ ಬಿಡಲಾಗಿದೆ ಎಂದು ತಿಳಿಸಿದರು. ಸಾರಿಗೆ ಸಚಿವ ಭೈರತಿ ಸುರೇಶ್ ಕೂಡ ಈ ಹಿಂದೆ ಪ್ರಯಾಣ ದರ ಏರಿಕೆ ಮಾಡುವ ತೀರ್ಮಾನ ಕೈಗೊಂಡಿದ್ದರೂ, ದರ ನಿಗದಿ ಜವಾಬ್ದಾರಿಯನ್ನು ಇಲಾಖೆಗೆ ವಹಿಸಲಾಗಿದೆ ಎಂದು ಹೇಳಿದ್ದರು.

ದ್ವಾರಕನಾಥ್ ಗುರೂಜಿಗೆ ರಾಜ್ಯೋತ್ಸವ ಪ್ರಶಸ್ತಿ

● ವಿಕ್ರಮ ವಾಹಿನಿ । ಬೆಂಗಳೂರು

ಆಧ್ಯಾತ್ಮಿಕ ಚಿಂತನೆ ಹಾಗೂ ಜ್ಯೋತಿಷ್ಯ ಕ್ಷೇತ್ರದಲ್ಲಿನ ಸೇವೆಯನ್ನು ಗುರುತಿಸಿ ರಾಜಗುರು ದ್ವಾರಕಾನಾಥ್ ಗುರೂಜಿ ಅವರಿಗೆ 2026ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಘೋಷಿಸಲಾಗಿದೆ. ನಾಲ್ಕು ದಶಕಗಳಿಂದ ರಾಜಕೀಯ ಹಾಗೂ ಸಾರ್ವಜನಿಕ ವಲಯದ ಗಣ್ಯರಿಗೆ ಜ್ಯೋತಿಷ್ಯ ಮಾರ್ಗದರ್ಶನ ನೀಡುತ್ತಾ ಬಂದಿರುವ ಅವರು, ತಮ್ಮ ಭವಿಷ್ಯವಾಣಿಗಳಿಂದಲೂ ಗಮನ ಸೆಳೆದಿದ್ದಾರೆ.

ಕರ್ನಾಟಕದ ಆಧ್ಯಾತ್ಮಿಕ ಚಿಂತಕರಾದ ರಾಜಗುರು ದ್ವಾರಕಾನಾಥ್ ಗುರೂಜಿ ಅವರಿಗೆ 2026ನೇ ಸಾಲಿನ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಲಭಿಸಿದೆ.

ಅವರು ಈ ಹಿಂದೆ ಶ್ರೀಮತಿ ಇಂದಿರಾಗಾಂಧಿ ಅವರಿಗೆ ಭವಿಷ್ಯ ಹೇಳುವ ಮೂಲಕ ಗಮನ ಸೆಳೆದವರು. ಕರ್ನಾಟಕದ ಅತ್ಯಂತ ಪ್ರಸಿದ್ಧ ಆಧ್ಯಾತ್ಮಿಕ ಚಿಂತಕರು ಮತ್ತು ರಾಜಕೀಯ ಜ್ಯೋತಿಷಿಗಳಲ್ಲಿ ಒಬ್ಬರಾಗಿದ್ದಾರೆ. ಕರ್ನಾಟಕದ ಪ್ರಮುಖ ರಾಜಕಾರಣಿಗಳಿಗೆ ಜ್ಯೋತಿಷ್ಯ ಮಾರ್ಗದರ್ಶನ ನೀಡುವುದರಿಂದ ಇವರು "ರಾಜಗುರು" ಎಂದೇ ಹೆಚ್ಚು ಪರಿಚಿತರಾಗಿದ್ದಾರೆ.

ಬೆಂಗಳೂರಿನ ಆರ್.ಟಿ. ನಗರದಲ್ಲಿ ವಾಸವಾಗಿದ್ದು, ಅವರ ಬಳಿಗೆ ರಾಜ್ಯದ ಮೂಲೆ ಮೂಲೆಗಳಿಂದ ನಾಯಕರು, ಉದ್ಯಮಿಗಳು ಹಾಗೂ ಸಾರ್ವಜನಿಕರು ತಮ್ಮ ಜಾತಕ ಮತ್ತು ಭವಿಷ್ಯದ ಕುರಿತು ಸಲಹೆ ಪಡೆಯಲು ಆಗಮಿಸುತ್ತಿದ್ದಾರೆ.

ರಾಜಕೀಯ ಸ್ಥಿತ್ಯಂತರಗಳನ್ನು ಚೆನ್ನಾಗಿ ಬಲ್ಲ ಇವರು ತಮ್ಮ ಆಧ್ಯಾತ್ಮಿಕ ಪರಿಭಾಷೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ರಾಹುಲ್ ಗಾಂಧಿ ಹಾಗೂ ರಾಜ್ಯದ ಮುಖ್ಯಮಂತ್ರಿ ಬದಲಾವಣೆ ಪ್ರಕ್ರಿಯೆಗಳ ಕುರಿತು ಕಾಲಕಾಲಕ್ಕೆ ಸ್ಫೋಟಕ ಭವಿಷ್ಯಗಳನ್ನು ನುಡಿಯುತ್ತಾ, ರಾಜಕೀಯ ವಲಯದಲ್ಲಿ ಸಂಚಲನ ಮೂಡಿಸುತ್ತಿದ್ದಾರೆ. ಜ್ಯೋತಿಷ್ಯ ಒಂದು ಮೂಢ ನಂಬಿಕೆ ಎಂದು ಹೀಗಳೆಯುವವರಲ್ಲಿಯೂ ಕೂಡ ದ್ವಾರಕಾನಾಥ್ ಗುರೂಜಿ ಅವರು, ತಮ್ಮ ಅನುಭವದ ಮೂಲಕ ಜ್ಯೋತಿಷ್ಯವನ್ನು ನಂಬುವಂತೆ ಮಾಡುತ್ತಿದ್ದಾರೆ.

ದ್ವಾರಕಾನಾಥ್ ಗುರೂಜಿ ಅವರು ಹೇಳಿದ್ದೇ ವೇದವಾಕ್ಯವಾಗುತ್ತಿದೆ. ರಾಜ್ಯದ ಪ್ರಭಾವಿ ನಾಯಕ ಡಿಕೆ ಶಿವಕುಮಾರ್ ಅವರೊಂದಿಗೆ ಒಡನಾಟ ಇರಿಸಿಕೊಂಡಿದ್ದ ಅವರು, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಪರಮಾಪ್ತ ವೈಯಕ್ತಿಕ ಜ್ಯೋತಿಷಿ ಮತ್ತು ಆಧ್ಯಾತ್ಮಿಕ ಗುರುಗಳಾಗಿದ್ದಾರೆ. ಕಳೆದ 40 ವರ್ಷಗಳಿಂದಲೂ ಇವರು ಶಿವಕುಮಾರ್ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದಾರೆ.

ಡಿಕೆಶಿ ಯಾವುದೇ ಪ್ರಮುಖ ರಾಜಕೀಯ ನಿರ್ಧಾರ, ಚುನಾವಣೆ ಸ್ಪರ್ಧೆ, ಶುಭ ಕಾರ್ಯಗಳನ್ನು ಮಾಡುವ ಮುನ್ನ ದ್ವಾರಕಾನಾಥ್ ಗುರೂಜಿ ಅವರ ಸಲಹೆ ಮತ್ತು ಮುಹೂರ್ತವನ್ನು ಪಡೆದು ತಮ್ಮ ಕಾರ್ಯಕ್ರಮಗಳನ್ನು ನಿಗದಿ ಮಾಡಿಕೊಳ್ಳುತ್ತಾರೆ.

ರಾಜ್ಯ ಹಾಗೂ ರಾಷ್ಟ್ರ ರಾಜಕಾರಣದ ಬಗ್ಗೆ ಇವರು ನೀಡುವ ಭವಿಷ್ಯವಾಣಿಗಳು ಮಾಧ್ಯಮಗಳಲ್ಲಿ ಸದಾ ಚರ್ಚೆಗೆ ಗ್ರಾಸವಾಗುತ್ತವೆ. ಡಿ.ಕೆ. ಶಿವಕುಮಾರ್ ಅವರು ಮುಂದೆ ಮುಖ್ಯಮಂತ್ರಿಯಾಗುತ್ತಾರೆ ಎಂದು ದಶಕಗಳ ಹಿಂದೆಯೇ ಹೇಳಿದ್ದರು. ಆಗ ಇವರ ಮಾತನ್ನು ಮೂದಲಿಸಿದವರೆಷ್ಟೋ. ಆದರೆ, ಅವರು ಅಂದು ಆಡಿದ ಮಾತು 2026ರಲ್ಲಿ ನಿಜವಾಗಿದೆ. ಸುಮಾರು 40 ವರ್ಷಗಳ ಹಿಂದೆಯೇ ಇವರು ಭವಿಷ್ಯ ನುಡಿದಿದ್ದರು.

ಅವರ ಭವಿಷ್ಯ ವಾಣಿಯ ಹಿನ್ನೆಲೆಯಲ್ಲಿ ಅನೇಕ ಪತ್ರಿಕೆಗಳು, ಸುದ್ದಿ ವಾಹಿನಿಗಳು ಇದನ್ನು ಅನಾವರಣಗೊಳಿಸಿದ್ದೂ ಉಂಟು. ದ್ವಾರಕಾನಾಥ್ ಗುರೂಜಿ ಅವರು ರಾಜ್ಯ, ದೇಶ ಮತ್ತು ಜಾಗತಿಕ ಮಟ್ಟದ ಭವಿಷ್ಯಗಳನ್ನು ಸ್ಫುಟವಾಗಿ ಹೇಳುವ ಮೂಲಕ ಮುಂದೊದಗಬಹುದಾದ ಎಚ್ಚರಿಕೆಗಳು ಮತ್ತು ಪರಿಹಾರ ಕ್ರಮಗಳನ್ನೂ ಹೇಳುವುದುಂಟು.

ಇಂತಹ ದೃಷ್ಟಾಂತಗಳನ್ನು ಹೊಂದಿರುವ ದ್ವಾರಕಾನಾಥ್ ಗುರೂಜಿ ಅವರ ವಿಶೇಷ ಗುಣಗಳನ್ನು ಗಮನಿಸಿ ರಾಜ್ಯ ಸರ್ಕಾರ ಈ ಬಾರಿಯ ರಾಜ್ಯೋತ್ಸವ ಪ್ರಶಸ್ತಿ ನೀಡಿ ಗೌರವಿಸಲು ಮುಂದಾಗಿದೆ. ರಾಜಗುರುವಿಗೆ ಆ ಮೂಲಕ ಮನ್ನಣೆ ನೀಡಿದೆ.

PRGI NO: KARKAN/2018/78481

ಸವಿ ವಾಹಿನಿ

ಬದುಕಿನಲ್ಲಿ ಏರಿಳಿತಗಳು ಇರಲೇಬೇಕು. ಸಮುದ್ರದಲ್ಲಿ ಅಲೆಗಳು ಎದ್ದಾಗ ಮಾತ್ರ ನಾವಿಕ ನಿಪುಣನಾಗುತ್ತಾನೆ.

ದಿನ ಪಂಚಾಂಗ

ಅಕ್ಟೋಬರ್, 31-2026, ಶನಿವಾರ ಶರದ್ ಋತು, ಆಶ್ವಯುಜ ಮಾಸ, ಬಹುಳ ಪಕ್ಷ
ಷಷ್ಠಿ ತಿಥಿ ರಾ.9:20, ಆದ್ರಾ ನಕ್ಷತ್ರ ಮ.12:13
ರಾಹುಕಾಲ ಬೆ 9:06-10:34, ರಾಷ್ಟ್ರೀಯ ಏಕೀಕರಣ ದಿನ, ಲಾಲಾ ಲಜಪತರಾಯ್ ಪುಣ್ಯದಿನ

ಕಲಾವಿದರಿಗೆ ಪರಮ್ ಕಲ್ಚರ್‌ನಿಂದ ರೂ 2 ಲಕ್ಷ ಪ್ರೋತ್ಸಾಹಧನ

● ವಿಕ್ರಮ ವಾಹಿನಿ | ಬೆಂಗಳೂರು

ಭಾರತದ ಶ್ರೀಮಂತ ಇತಿಹಾಸ, ಸಾಂಸ್ಕೃತಿಕ ಪರಂಪರೆ ಹಾಗೂ ಮಹಾನ್ ಅರಸರ ಸಾಧನೆಗಳನ್ನು ನೃತ್ಯಕಲೆಯ ಮೂಲಕ ಇಂದಿನ ಪೀಳಿಗೆಗೆ ಪರಿಚಯಿಸುವ ಉದ್ದೇಶದಿಂದ ಪರಮ್ ಫೌಂಡೇಶನ್‌ನ ಪರಮ್ ಕಲ್ಚರ್ ವಿನೂತನ ಕಲಾ ಪ್ರೋತ್ಸಾಹ ಕಾರ್ಯಕ್ರಮ ಹಮ್ಮಿಕೊಂಡಿದೆ. ಇದರ ಭಾಗವಾಗಿ ರಾಜಾ ರಾಣಾ ಕುಂಭ ಮತ್ತು ರಾಜರಾಜ ಚೋಳರ ಜೀವನಗಾಥೆಯನ್ನು ಆಧರಿಸಿದ 'ಪುನರ್ನವ' ವಿಶೇಷ ನೃತ್ಯ-ರಂಗಪ್ರಸ್ತುತಿ ಅ.31ರಂದು ಸಂಜೆ 6 ಗಂಟೆಗೆ ನಗರದ ಕಲಾ ಸಂಭ್ರಮದಲ್ಲಿ ಪ್ರದರ್ಶನಗೊಳ್ಳಲಿದೆ.

ಕಲಾವಿದರ ಸೃಜನಶೀಲತೆ ಹಾಗೂ ಹೊಸ ಪ್ರಯೋಗಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ಫೌಂಡೇಶನ್‌ನ 'ಕಲಾ ಪ್ರಸ್ತುತಿ' ಯೋಜನೆಯಡಿ ಕಲಾವಿದರಿಂದ ಅರ್ಜಿ ಆಹ್ವಾನಿಸಲಾಗಿತ್ತು. ಸಲ್ಲಿಕೆಯಾದ ಸುಮಾರು 40 ಅರ್ಜಿಗಳ ಪೈಕಿ ಎಂಟು ಕಲಾವಿದರನ್ನು ಆಯ್ಕೆ ಮಾಡಿ ತಲಾ ರೂ 2 ಲಕ್ಷ ಪ್ರೋತ್ಸಾಹಧನ ನೀಡಲಾಗುತ್ತಿದೆ. ಅಲ್ಲದೆ, ಕಲಾ ಪ್ರದರ್ಶನಕ್ಕೆ ಅಗತ್ಯವಿರುವ ವೇದಿಕೆ, ತಾಲೀಮು ಸ್ಥಳ, ಧ್ವನಿ ಮತ್ತು ಬೆಳಕಿನ ವ್ಯವಸ್ಥೆ ಸೇರಿದಂತೆ ವಿವಿಧ ತಾಂತ್ರಿಕ ಸೌಲಭ್ಯಗಳನ್ನೂ ಉಚಿತವಾಗಿ ಒದಗಿಸಲಾಗುತ್ತಿದೆ.

ಇತಿಹಾಸಕ್ಕೆ 'ಪುನರ್ನವ' ನೃತ್ಯದ ಸ್ಪರ್ಶ: ಕಾರ್ಯಕ್ರಮದಲ್ಲಿ ಮೇವಾಡದ ಪ್ರಸಿದ್ಧ ಆಡಳಿತಗಾರ ರಾಜಾ ರಾಣಾ ಕುಂಭ ಅವರ ಸಾಹಸ, ಆಡಳಿತ ಮತ್ತು ಐತಿಹಾಸಿಕ ಕೊಡುಗೆಗಳನ್ನು ನವೀನ್ ಆರ್. ಹೆಗಡೆ ಅವರು ಕಥಕ್ ಹಾಗೂ ರಂಗಭೂಮಿಯ ಮೂಲಕ ಪ್ರಸ್ತುತಪಡಿಸಲಿದ್ದಾರೆ. ಚೋಳ ಸಾಮ್ರಾಜ್ಯದ ಪ್ರಸಿದ್ಧ ಚಕ್ರವರ್ತಿ ರಾಜರಾಜ ಚೋಳರ ಆಡಳಿತ, ಸಾಧನೆ ಮತ್ತು ಸಾಂಸ್ಕೃತಿಕ ಕೊಡುಗೆಗಳನ್ನು ಸಮುಧ್ಯತಾ ಭಟ್ ಅವರು ಭರತನಾಟ್ಯದ ಮೂಲಕ ಕಟ್ಟಿಕೊಡಲಿದ್ದಾರೆ.

ಈ ಎರಡೂ ನೃತ್ಯರೂಪಕಗಳಿಗೆ ಖ್ಯಾತ ಸಂಗೀತ ಕಲಾವಿದ ಪಂಡಿತ್ ಸಮೀರ್ ರಾವ್ ಅವರು ಮೂಲ ಸಂಗೀತ ಸಂಯೋಜನೆ ಮಾಡಿದ್ದಾರೆ. ಇತಿಹಾಸಕಾರರಾದ ಡಾ. ಅನುರಾಧಾ ವಿ. ಅವರು ಕಾರ್ಯಕ್ರಮದ ಸಂವಾದ ನಿರ್ವಹಿಸಲಿದ್ದಾರೆ.

ಕಲಾವಿದರ ಆರ್ಥಿಕ ಮತ್ತು ತಾಂತ್ರಿಕ ಸವಾಲುಗಳನ್ನು ನಿವಾರಿಸಿ, ಹೊಸ ಕಲಾ ಪ್ರಯೋಗಗಳಿಗೆ ಅವಕಾಶ ಕಲ್ಪಿಸುವುದು ಪರಮ್ ಕಲ್ಚರ್‌ನ ಪ್ರಮುಖ ಆಶಯವಾಗಿದೆ. ಭಾರತೀಯ ಇತಿಹಾಸದ ಕಡಿಮೆ ಪರಿಚಿತ ಕಥನಗಳನ್ನು ವಿಭಿನ್ನ ಕಲಾ ಪ್ರಕಾರಗಳ ಮೂಲಕ ಜನರಿಗೆ ತಲುಪಿಸುವ ಪ್ರಯತ್ನವಾಗಿ 'ಪುನರ್ನವ' ಮೂಡಿಬರಲಿದೆ.

ಆರೋಗ್ಯ

ಎರಡು ತಿಂಗಳ ಮಗುವಿನ ಹೊಟ್ಟೆಯಲ್ಲಿ ಭ್ರೂಣ ಪತ್ತೆ: ಯಶಸ್ವಿ ಶಸ್ತ್ರಚಿಕಿತ್ಸೆ

● ವಿಕ್ರಮ ವಾಹಿನಿ | ಬಳ್ಳಾರಿ

ವೈದ್ಯಕೀಯ ಲೋಕದಲ್ಲಿ ಅತ್ಯಂತ ಅಪರೂಪದ 'ಫೀಟಸ್ ಇನ್ ಫೀಟು' ಪ್ರಕರಣವೊಂದನ್ನು ಬಳ್ಳಾರಿಯ ಬಿಎಂಸಿಆರ್‌ಸಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆಯ ವೈದ್ಯರ ತಂಡ ಯಶಸ್ವಿಯಾಗಿ ನಿಭಾಯಿಸಿದೆ. ಎರಡು ತಿಂಗಳ ಗಂಡು ಮಗುವಿನ ಹೊಟ್ಟೆಯಲ್ಲಿದ್ದ ಭ್ರೂಣವನ್ನು ಸಂಕೀರ್ಣ ಶಸ್ತ್ರಚಿಕಿತ್ಸೆ ಮೂಲಕ ಹೊರತೆಗೆಯಲಾಗಿದೆ.

ಮಗು ತಾಯಿಯ ಗರ್ಭದಲ್ಲಿದ್ದಾಗಲೇ ಈ ಸಮಸ್ಯೆಯನ್ನು ಬಿಎಂಸಿಆರ್‌ಸಿಯ ವಿಕಿರಣಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ. ಸದಾಶಿವಗೌಡ ಅವರ ನೇತೃತ್ವದ ತಂಡ ಪತ್ತೆಹಚ್ಚಿತ್ತು. ಎರಡು ತಿಂಗಳ ಹಿಂದೆ ಇದೇ ಆಸ್ಪತ್ರೆಯಲ್ಲಿ ಮಗು ಜನಿಸಿತ್ತು. ಜನನದ ಬಳಿಕ ಅಗತ್ಯ ವೈದ್ಯಕೀಯ ತಪಾಸಣೆ ನಡೆಸಿ, ಶಸ್ತ್ರಚಿಕಿತ್ಸೆಗೆ ಸಿದ್ಧತೆ ಮಾಡಿಕೊಳ್ಳಲಾಗಿತ್ತು. ಮಕ್ಕಳ ಶಸ್ತ್ರಚಿಕಿತ್ಸಾ ವಿಭಾಗದ ಮುಖ್ಯಸ್ಥ ಡಾ. ಗಡ್ಡಿ ದಿವಾಕರ್ ಅವರ ನೇತೃತ್ವದಲ್ಲಿ ಕಾರ್ಯಾಚರಣೆ ಯಶಸ್ವಿಯಾಗಿ ನೆರವೇರಿತು.

ಐದು ಲಕ್ಷ ಜನನಗಳಲ್ಲಿ ಒಂದು ಪ್ರಕರಣ: 'ಫೀಟಸ್ ಇನ್ ಫೀಟು' ಅತ್ಯಂತ ಅಪರೂಪದ ಜನ್ಮಜಾತ ಸ್ಥಿತಿಯಾಗಿದ್ದು, ತಾಯಿಯ ಗರ್ಭದಲ್ಲಿ ಬೆಳವಣಿಗೆ ಹೊಂದದ ಅವಳಿ ಭ್ರೂಣವು ಮತ್ತೊಂದು ಮಗುವಿನ ದೇಹದೊಳಗೆ ಸೇರಿಕೊಳ್ಳುವುದರಿಂದ ಉಂಟಾಗುತ್ತದೆ. ವೈದ್ಯಕೀಯ ಅಂದಾಜಿನ ಪ್ರಕಾರ, ಸುಮಾರು ಐದು ಲಕ್ಷ ಜನನಗಳಲ್ಲಿ ಒಂದು ಪ್ರಕರಣದಲ್ಲಿ ಮಾತ್ರ ಈ ಸ್ಥಿತಿ ಕಂಡುಬರುತ್ತದೆ. ಸೂಕ್ತ ಸಮಯದಲ್ಲಿ ಸಮಸ್ಯೆಯನ್ನು ಪತ್ತೆಹಚ್ಚಿ ಶಸ್ತ್ರಚಿಕಿತ್ಸೆ ನಡೆಸುವುದು ಅತ್ಯಂತ ಮುಖ್ಯವಾಗಿದೆ.

ಶಸ್ತ್ರಚಿಕಿತ್ಸಾ ತಂಡದಲ್ಲಿ ಡಾ. ಸಂಜೀವ್ ಜೋಶಿ, ಡಾ. ರಾಮ್ ಮೋಹನ್, ಡಾ. ಅಶ್ವಿತಾ ಸೇರಿದಂತೆ ಅರಿವಳಿಕೆ ವಿಭಾಗದ ಮುಖ್ಯಸ್ಥ ಡಾ. ಬಾಲಸುಬ್ರಹ್ಮಣ್ಯ, ಡಾ. ಪರಿಮಳಾ, ಡಾ. ನಿಜಾಮುದ್ದೀನ್, ಡಾ. ರಘುನಾಥ್, ಡಾ. ಮಧುಶ್ರೀ ಹಾಗೂ ಶುಶ್ರೂಷಕರಾದ ಪುಷ್ಪಲತಾ ಮತ್ತು ಸಲೀಂ ಪಾಷಾ ಸಹಕರಿಸಿದರು.

ಮಕ್ಕಳ ಸುಧಾರಿತ ಶಸ್ತ್ರಚಿಕಿತ್ಸೆ ಕ್ಷೇತ್ರದಲ್ಲಿ ಡಾ. ಗಡ್ಡಿ ದಿವಾಕರ್ ಅವರು ಕಳೆದ 22 ವರ್ಷಗಳಿಂದ ಸೇವೆ ಸಲ್ಲಿಸುತ್ತಿದ್ದು, 2008ರಲ್ಲಿಯೂ ವಿಮ್ಸ್ ಆಸ್ಪತ್ರೆಯಲ್ಲಿ ಇಂತಹದ್ದೇ ಪ್ರಕರಣವನ್ನು ಯಶಸ್ವಿಯಾಗಿ ನಿಭಾಯಿಸಿದ್ದರು ಎಂದು ಆಸ್ಪತ್ರೆ ತಿಳಿಸಿದೆ.

ಆಸ್ಪತ್ರೆಯ ಡೀನ್ ಮತ್ತು ನಿರ್ದೇಶಕ ಡಾ. ಮರಿರಾಜ್, ಪ್ರಾಂಶುಪಾಲ ಡಾ. ಮಲ್ಲಿಕಾರ್ಜುನ ಎಂ., ವೈದ್ಯಕೀಯ ಅಧೀಕ್ಷಕ ಡಾ. ಅರುಣ್, ಮುಖ್ಯ ಆಡಳಿತಾಧಿಕಾರಿ ಡಾ. ನಯನಾ ಹಾಗೂ ಹಣಕಾಸು ಸಲಹೆಗಾರ ಮಹೇಶ್ ಅವರ ಸಹಕಾರಕ್ಕೆ ವೈದ್ಯರ ತಂಡ ಕೃತಜ್ಞತೆ ಸಲ್ಲಿಸಿದೆ.

ಈ ಪ್ರಕರಣದಲ್ಲಿ ಮಗು ತಾಯಿಯ ಗರ್ಭದಲ್ಲಿದ್ದಾಗಲೇ ಭ್ರೂಣದ ಅಸಹಜ ಬೆಳವಣಿಗೆಯನ್ನು ಗುರುತಿಸಿರುವುದು ಚಿಕಿತ್ಸೆಯ ದೃಷ್ಟಿಯಿಂದ ಮಹತ್ವದ್ದಾಗಿದೆ. ಆರಂಭಿಕ ಹಂತದಲ್ಲೇ ಸಮಸ್ಯೆ ಪತ್ತೆಯಾದ ಕಾರಣ, ಮಗುವಿನ ಜನನದ ಬಳಿಕ ಹೆಚ್ಚಿನ ಜಾಗರೂಕತೆಯಿಂದ ತಪಾಸಣೆ ನಡೆಸಿ ಶಸ್ತ್ರಚಿಕಿತ್ಸೆಗೆ ಮುಂದಾಗಲು ವೈದ್ಯರಿಗೆ ಸಾಧ್ಯವಾಗಿದೆ. ಇಂತಹ ಅಪರೂಪದ ಪ್ರಕರಣಗಳಲ್ಲಿ ನಿಖರ ರೋಗನಿರ್ಣಯ ಮತ್ತು ಸೂಕ್ತ ಚಿಕಿತ್ಸಾ ಯೋಜನೆ ಅತ್ಯಂತ ನಿರ್ಣಾಯಕವಾಗಿರುತ್ತದೆ.

ಮಗುವಿನ ಆರೋಗ್ಯ ಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಕಾರ್ಯಾಚರಣೆಯನ್ನು ಯೋಜಿಸಲಾಗಿದ್ದು, ವೈದ್ಯರು ಹಾಗೂ ಶುಶ್ರೂಷಕರ ತಂಡ ಒಟ್ಟಾಗಿ ಕಾರ್ಯನಿರ್ವಹಿಸಿದೆ. ಅಪರೂಪದ ವೈದ್ಯಕೀಯ ಸವಾಲನ್ನು ಸಮರ್ಥವಾಗಿ ಎದುರಿಸಿದ ತಂಡದ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.

'ಸನಾತನ ಪಂಚಾಂಗ 2027' ಕನ್ನಡ ಆ್ಯಪ್ ಲೋಕಾರ್ಪಣೆ

● ವಿಕ್ರಮ ವಾಹಿನಿ | ಗೋಕರ್ಣ

ಶ್ರೀ ಗೋಕರ್ಣ ಪರ್ತಗಾಳಿ ಜೀವೋತ್ತಮ ಮಠದ ಮಠಾಧೀಶರಾದ ಶ್ರೀಮದ್ ವಿದ್ಯಾಧೀಶ ತೀರ್ಥ ಶ್ರೀಪಾದ ವಡೇರ ಸ್ವಾಮೀಜಿ ಅವರು 'ಸನಾತನ ಪಂಚಾಂಗ 2027'ರ ಕನ್ನಡ ಆಪ್ ಅನ್ನು ಮಠದಲ್ಲಿ ಲೋಕಾರ್ಪಣೆಗೊಳಿಸಿದರು.

ಈ ಸಂದರ್ಭದಲ್ಲಿ ಆಪ್‌ಗೆ ಆಶೀರ್ವಾದ ನೀಡಿದ ಸ್ವಾಮೀಜಿಯವರಿಗೆ, ಪಂಚಾಂಗವು ಕನ್ನಡ ಸೇರಿದಂತೆ ಒಟ್ಟು ಏಳು ಭಾಷೆಗಳಲ್ಲಿ ಲಭ್ಯವಿರುವ ಬಗ್ಗೆ ಮಾಹಿತಿ ನೀಡಲಾಯಿತು. ಅಲ್ಲದೆ, ಆಂಡ್ರಾಯ್ಡ್ ಆವೃತ್ತಿಯಲ್ಲಿ 40 ಲಕ್ಷಕ್ಕೂ ಅಧಿಕ ಡೌನ್‌ಲೋಡ್‌ಗಳನ್ನು ಹೊಂದಿರುವುದನ್ನು ತಿಳಿದು ಸ್ವಾಮೀಜಿ ಸಂತಸ ವ್ಯಕ್ತಪಡಿಸಿ, ಆಪ್‌ನ ಕಾರ್ಯವನ್ನು ಶ್ಲಾಘಿಸಿದರು. ಕಾರ್ಯಕ್ರಮದಲ್ಲಿ 'ಸನಾತನ ಪಂಚಾಂಗ' ಸಮೂಹದ ಪ್ರತಿನಿಧಿ ಸಂಗಮ ಬೋರ್ಕರ್ ಉಪಸ್ಥಿತರಿದ್ದರು.

ಏಳು ಭಾಷೆಗಳಲ್ಲಿ ಲಭ್ಯ: 'ಸನಾತನ ಪಂಚಾಂಗ' ಆಪ್ ಕನ್ನಡ, ಮರಾಠಿ, ಹಿಂದಿ, ಇಂಗ್ಲಿಷ್, ಗುಜರಾತಿ, ತೆಲುಗು ಹಾಗೂ ತಮಿಳು ಭಾಷೆಗಳಲ್ಲಿ ಆಂಡ್ರಾಯ್ಡ್ ಮತ್ತು ಐಒಎಸ್ ವ್ಯವಸ್ಥೆಗಳಲ್ಲಿ ಲಭ್ಯವಿದೆ. ಆಂಡ್ರಾಯ್ಡ್ ಆವೃತ್ತಿಯನ್ನು 40 ಲಕ್ಷಕ್ಕೂ ಅಧಿಕ ಮಂದಿ ಹಾಗೂ ಐಒಎಸ್ ಆವೃತ್ತಿಯನ್ನು 7 ಲಕ್ಷಕ್ಕೂ ಅಧಿಕ ಮಂದಿ ಡೌನ್‌ಲೋಡ್ ಮಾಡಿಕೊಂಡಿದ್ದಾರೆ. ಆಪ್‌ನಲ್ಲಿ ದೈನಂದಿನ ಶುಭ ಮುಹೂರ್ತ, ಹಬ್ಬ-ಹರಿದಿನಗಳು, ಧಾರ್ಮಿಕ ಮಾಹಿತಿ, ಧರ್ಮಶಿಕ್ಷಣ, ಆರೋಗ್ಯ ಸಲಹೆಗಳು ಹಾಗೂ ಸುವಿಚಾರಗಳು ಲಭ್ಯವಿವೆ. ಸಂಕಷ್ಟ ಚತುರ್ಥಿ, ಏಕಾದಶಿ ಸೇರಿದಂತೆ ಪ್ರಮುಖ ತಿಥಿಗಳ ಮುನ್ಸೂಚನೆ, ದಿನವಿಶೇಷ, ಹೋಮ್‌ಸ್ಕ್ರೀನ್ ವಿಜೆಟ್ ಮತ್ತು ಜ್ಞಾಪನೆ (ರಿಮೈಂಡರ್) ಸೌಲಭ್ಯಗಳನ್ನೂ ಒದಗಿಸಲಾಗಿದೆ.

ಭಾರತೀಯ ಸಂಸ್ಕೃತಿ ಮತ್ತು ಧಾರ್ಮಿಕ ಪರಂಪರೆಯ ಮಾಹಿತಿಯನ್ನು ಜನರಿಗೆ ಸುಲಭವಾಗಿ ತಲುಪಿಸುವ ಉದ್ದೇಶದಿಂದ ಈ ಆಪ್ ರೂಪಿಸಲಾಗಿದೆ. ಆಸಕ್ತರು Sanatanpanchang.com/download-apps/ ಮೂಲಕ ಆಪ್ ಡೌನ್‌ಲೋಡ್ ಮಾಡಿಕೊಳ್ಳಬಹುದು.

ರಾಷ್ಟ್ರಮಟ್ಟದ ಯೋಗಾಸನ ಸ್ಪರ್ಧೆಗೆ ವರ್ಷಿಣಿ ಆಯ್ಕೆ

● ವಿಕ್ರಮ ವಾಹಿನಿ | ಬೆಂಗಳೂರು

ಪ್ರತಿಭಾವಂತ ಯೋಗಪಟು ಕುಮಾರಿ ವರ್ಷಿಣಿ ಜೆ. ಅವರು ರಾಷ್ಟ್ರಮಟ್ಟದ ಯೋಗಾಸನ ಕ್ರೀಡಾಕೂಟಕ್ಕೆ ಕರ್ನಾಟಕ ರಾಜ್ಯ ತಂಡವನ್ನು ಪ್ರತಿನಿಧಿಸಲು ಆಯ್ಕೆಯಾಗಿದ್ದಾರೆ.

ಕರ್ನಾಟಕ ರಾಜ್ಯ ಯೋಗಾಸನ ಸ್ಪೋರ್ಟ್ಸ್ ಅಸೋಸಿಯೇಷನ್ (ಕೆಎಸ್‌ವೈಎಸ್‌ಎ) ಆಯೋಜಿಸಿರುವ 7ನೇ ಎನ್‌ವೈಎಸ್‌ಎಫ್ ರಾಷ್ಟ್ರಮಟ್ಟದ ಯೋಗಾಸನ ಕ್ರೀಡಾ ಚಾಂಪಿಯನ್‌ಷಿಪ್‌ನಲ್ಲಿ ಭಾಗವಹಿಸಲು ವರ್ಷಿಣಿ ಅರ್ಹತೆ ಪಡೆದಿದ್ದಾರೆ. ಇವರು ಎಸ್‌ಎಸ್‌ಎಂ ಪಬ್ಲಿಕ್ ಶಾಲೆಯ ವಿದ್ಯಾರ್ಥಿನಿಯಾಗಿದ್ದು, ರಾಷ್ಟ್ರೀಯ ಮಟ್ಟದಲ್ಲಿ ರಾಜ್ಯವನ್ನು ಪ್ರತಿನಿಧಿಸುವ ಅವಕಾಶ ಗಳಿಸಿದ್ದಾರೆ.

ಎಚ್.ಎಸ್. ರಮ್ಯಾ ಮತ್ತು ಆರ್. ಜಗದೀಶ್ ದಂಪತಿಯ ಪುತ್ರಿಯಾದ ವರ್ಷಿಣಿ ಅವರ ಸಾಧನೆಯ ಹಿಂದೆ ಯೋಗ ತರಬೇತುದಾರರಾದ ದೀಪಕ್ ಹಾಗೂ ಅಭಿಷೇಕ್ ಟಿ. ಅವರ ಮಾರ್ಗದರ್ಶನ ಮತ್ತು ಕಠಿಣ ತರಬೇತಿ ಪ್ರಮುಖ ಪಾತ್ರ ವಹಿಸಿದೆ. ವರ್ಷಿಣಿ ಅವರ ನಿರಂತರ ಪರಿಶ್ರಮವೂ ಈ ಸಾಧನೆಗೆ ಕಾರಣವಾಗಿದೆ.

ವರ್ಷಿಣಿ ಅವರ ಸಾಧನೆಗೆ ಶಾಲೆಯ ಆಡಳಿತ ಮಂಡಳಿ, ಶಿಕ್ಷಕರು, ತರಬೇತುದಾರರು ಹಾಗೂ ಕ್ರೀಡಾಭಿಮಾನಿಗಳು ಅಭಿನಂದನೆ ಸಲ್ಲಿಸಿದ್ದು, ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಉತ್ತಮ ಪ್ರದರ್ಶನ ನೀಡಿ ರಾಜ್ಯಕ್ಕೆ ಕೀರ್ತಿ ತರಲಿ ಎಂದು ಶುಭ ಹಾರೈಸಿದ್ದಾರೆ.

ನವೆಂಬರ್ 2ರ ವರೆಗೆ ಪಕ್ಷಿ ಗಣತಿ: ಸಮಗ್ರ ಮಾಹಿತಿಗೆ ರಾಮಲಿಂಗಾ ರೆಡ್ಡಿ ಸೂಚನೆ

● ವಿಕ್ರಮ ವಾಹಿನಿ | ಬೆಂಗಳೂರು

ದೀಪಾವಳಿಯ ಸಂದರ್ಭದಲ್ಲಿ ಪರಿಸರ ಸ್ನೇಹಿ ಪಟಾಕಿಗಳನ್ನು ಬಳಸಬೇಕು ಮತ್ತು ಸುಪ್ರೀಂಕೋರ್ಟ್‌ನ ನಿರ್ದೇಶಗಳನ್ನು ಪಾಲಿಸಬೇಕೆಂದು ಪರಿಸರ ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಸೂಚಿಸಿದ್ದಾರೆ.



ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸುಪ್ರೀಂಕೋರ್ಟ್‌ನ ನಿರ್ದೇಶನದ ಪ್ರಕಾರ ರಾತ್ರಿ 8 ರಿಂದ 10ಗಂಟೆ ನಡುವೆ ಮಾತ್ರ ಪಟಾಕಿ ಸಿಡಿಸಬೇಕು. ಹಸಿರು ಪಟಾಕಿಗಳನ್ನೆ ತಯಾರಿಸಬೇಕು, ಮಾರಾಟ ಮಾಡಬೇಕು ಮತ್ತು ಬಳಸಬೇಕು ಎಂದು ಸೂಚಿಸಿದರು.

ಈ ಬಗ್ಗೆ ಮುಂಜಾಗ್ರತೆ ವಹಿಸುವಂತೆ ಅಪಾರ ಮುಖ್ಯ ಕಾರ್ಯದರ್ಶಿಯವರಿಗೆ ಸೂಚಿಸಿದ್ದು ಅವರು ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಪೊಲೀಸರಿಗೆ ನಿರ್ದೇಶಗಳನ್ನು ನೀಡಲಿದ್ದಾರೆ. ಪರಿಸರ ರಕ್ಷಣೆ, ಪ್ರಾಣಿ ಪಕ್ಷಗಳಿಗೆ ಹಾನಿಯಾಗುವುದು, ತಡೆಯುವುದು ಸೇರಿದಂತೆ ಸುಮಾರು 10 ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಸೂಚಿಸಿರುವುದಾಗಿ ಹೇಳಿದರು.

ದೀಪಾವಳಿ ಹಿಂದೂಗಳ ಹಬ್ಬ. ಅಲ್ಲಿ ಪಟಾಕಿಗಳನ್ನು ಹೊಡೆಯುವುದನ್ನು ನಿರ್ಬಂಧಿಸಲಾಗುವುದಿಲ್ಲ. ಆದರೆ ಕಡಿಮೆ ಪ್ರಮಾಣದ ಪಟಾಕಿ ಹೊಡೆಯಬೇಕು ಮತ್ತು ಪರಿಸರ ರಕ್ಷಣೆಗೆ ಆದ್ಯತೆ ನೀಡಬೇಕೆಂದು ಸಲಹೆ ನೀಡಿದರು.ಗಣೇಶೋತ್ಸವ ಸಂದರ್ಭಲ್ಲಿ ಪ್ಲಾಸ್ಟ್ ಆಫ್ ಪ್ಯಾರಿಸ್ ಗಣೇಶ ಮೂರ್ತಿಗಳ ತಯಾರಿಕೆಗೆ ಕಡಿವಾಣ ಹಾಕಲಾಗಿತ್ತು. ಮುಂದಿನ ವರ್ಷದಿಂದ ಪರಿಸರ ಮಾಲಿನ್ಯ ನಿಯಂತ್ರಣದಿಂದಲೇ ಪರಿಸರ ಸ್ನೇಹಿ ಗಣೇಶ ಮೂರ್ತಿಗಳನ್ನು ವಿತರಿಸುವುದಾಗಿ ಹೇಳಿದರು.

ದೇಶಾದ್ಯಂತ ನವೆಂಬರ್ 2ರಿಂದ ಪಕ್ಷಿಗಳ ಗಣತಿಕಾರ್ಯ ನಡೆಯಲಿದೆ. ಬರ್ಡ್ ಕೌಂಟ್ ಇಂಡಿಯಾ (ಬಿಸಿಐ) ಹಾಗೂ ಕೆಬಿಎಂಎನ್ (ಕೆಬಿಎಂಎನ್) ಸಹಭಾಗಿತ್ವದಲ್ಲಿ ಈ ಗಣತಿ ಕಾರ್ಯ ನಡೆಯಲಿದೆ. ಪಕ್ಷಿ ವೀಕ್ಷಕರ ಗುಂಪುಗಳು, ಸಂಶೋಧಕರು ಹಾಗೂ ಸಂರಕ್ಷಣಾ ಸಂಸ್ಥೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದರು.

ರಾಜ್ಯದಲ್ಲಿ ಎಷ್ಟು ಪಕ್ಷಿಗಳಿವೆ ಹಾಗೂ ಯಾವೆಲ್ಲ ಪ್ರಭೇದದ ಪಕ್ಷಿಗಳು ಕಂಡುಬರುತ್ತವೆ ಎಂಬುದನ್ನು ಗುರುತಿಸುವುದು ಈ ಗಣತಿಯ ಪ್ರಮುಖ ಉದ್ದೇಶವಾಗಿದೆ. ಗಣತಿ ಪೂರ್ಣಗೊಳ್ಳುವ ಮುನ್ನ ರಾಜ್ಯದಲ್ಲಿರುವ ಪಕ್ಷಿಗಳ ನಿಖರ ಸಂಖ್ಯೆಯನ್ನು ಹೇಳಲು ಸಾಧ್ಯವಿಲ್ಲ. ಸದ್ಯಕ್ಕೆ ಅಂದಾಜಿನ ಆಧಾರದ ಮೇಲೆ ಮಾತ್ರ ಮಾಹಿತಿ ನೀಡಬಹುದು ಎಂದು ಸ್ಪಷ್ಟಪಡಿಸಿದರು.

ಇಂದಿನಿಂದ ಆರಂಭವಾಗಿರುವ ಗಣತಿ ಕಾರ್ಯ ನವೆಂಬರ್ 2ರವರೆಗೆ ಮುಂದುವರಿಯಲಿದೆ. ಈ ಅವಧಿಯಲ್ಲಿ ಪಕ್ಷಿಗಳ ಸಂಖ್ಯೆ, ಅವುಗಳ ಪ್ರಭೇದಗಳು ಸೇರಿದಂತೆ ವಿವಿಧ ಮಾಹಿತಿಗಳನ್ನು ಸಂಗ್ರಹಿಸಲಾಗುತ್ತದೆ. ಗಣತಿ ಪೂರ್ಣಗೊಂಡ ಬಳಿಕ ಸಂಗ್ರಹಿಸಿದ ಮಾಹಿತಿಯನ್ನು ಅಧಿಕೃತವಾಗಿ ಹಂಚಿಕೊಳ್ಳಲಾಗುವುದು ಎಂದು ತಿಳಿಸಿದರು.

ರಾಜ್ಯದ ಪರಿಸರ ವ್ಯವಸ್ಥೆಯಲ್ಲಿ ಪಕ್ಷಿಗಳು ಮಹತ್ವದ ಪಾತ್ರ ವಹಿಸುತ್ತವೆ. ಪಕ್ಷಿಗಳ ಪ್ರಭೇದ ಹಾಗೂ ಅವುಗಳ ಅಸ್ತಿತ್ವದ ಕುರಿತು ಮಾಹಿತಿ ಸಂಗ್ರಹಿಸುವುದರಿಂದ ಜೀವವೈವಿಧ್ಯದ ಸ್ಥಿತಿಗತಿಯನ್ನು ತಿಳಿದುಕೊಳ್ಳಲು ಮತ್ತು ಪಕ್ಷಿಗಳ ಸಂರಕ್ಷಣೆಗೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ನೆರವಾಗಲಿದೆ.ರಾಜ್ಯೋತ್ಸವದ ಸಂದರ್ಭದಲ್ಲಿ ನಾಡಿನ ನೈಸರ್ಗಿಕ ಸಂಪತ್ತು ಹಾಗೂ ಪರಿಸರದ ಮಹತ್ವವನ್ನು ಜನರಿಗೆ ಪರಿಚಯಿಸುವ ನಿಟ್ಟಿನಲ್ಲಿ ಈ ಪಕ್ಷಿ ಗಣತಿ ಕಾರ್ಯಕ್ರಮ ಮಹತ್ವ ಪಡೆದಿದೆ.

ಮಗನ ಆತ್ಮಶಾಂತಿಗಾಗಿ ವಿದೇಶಿ ದಂಪತಿಯಿಂದ ನಾರಾಯಣ ಬಲಿ ಪೂಜೆ

● ವಿಕ್ರಮ ವಾಹಿನಿ | ವಿಜಯನಗರ

ಕಾರು ಅಪಘಾತದಲ್ಲಿ ಮೃತಪಟ್ಟ 21 ವರ್ಷದ ಮಗನ ಆತ್ಮಕ್ಕೆ ಶಾಂತಿ ಹಾಗೂ ಸದ್ಗತಿ ದೊರೆಯಲಿ ಎಂಬ ಉದ್ದೇಶದಿಂದ ಇಂಗ್ಲೆಂಡ್‌ನಿಂದ ಆಗಮಿಸಿದ ದಂಪತಿ ಐತಿಹಾಸಿಕ ಹಂಪಿಯ ತುಂಗಭದ್ರಾ ನದಿ ತೀರದಲ್ಲಿ ನಾರಾಯಣ ಬಲಿ ಪೂಜೆ ನೆರವೇರಿಸಿದರು.

ಮಗನ ಅಕಾಲಿಕ ಸಾವಿನಿಂದ ದುಃಖಿತರಾಗಿದ್ದ ದಂಪತಿ, ಪಂಪಾಕ್ಷೇತ್ರದ ಪುರೋಹಿತರ ಮಾರ್ಗದರ್ಶನದಲ್ಲಿ ಧಾರ್ಮಿಕ ವಿಧಿವಿಧಾನಗಳನ್ನು ನಡೆಸಿದರು. ಐದು ಕಲಶಗಳನ್ನು ಪ್ರತಿಷ್ಠಾಪಿಸಿ, ಬ್ರಹ್ಮ, ವಿಷ್ಣು, ರುದ್ರ, ಯಮ ಹಾಗೂ ಅಗಲಿದ ಆತ್ಮವನ್ನು ಆವಾಹನೆ ಮಾಡುವ ಪೂಜೆ ನೆರವೇರಿಸಲಾಯಿತು.

ಬಳಿಕ ಸಾಲಗ್ರಾಮಕ್ಕೆ ಅಭಿಷೇಕ, ಪಿಂಡಪ್ರದಾನ, ತರ್ಪಣ ಹಾಗೂ ಹೋಮ ಸೇರಿದಂತೆ ವಿವಿಧ ಧಾರ್ಮಿಕ ಕೈಂಕರ್ಯಗಳನ್ನು ಶ್ರದ್ಧಾಭಕ್ತಿಯಿಂದ ನಡೆಸಿದರು. ಅಕಾಲಿಕವಾಗಿ ಮೃತಪಟ್ಟವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ಕೋರಿ ನಾರಾಯಣ ಬಲಿ ಪೂಜೆ ಸಲ್ಲಿಸುವ ಸಂಪ್ರದಾಯದಂತೆ ದಂಪತಿ ಈ ವಿಧಿವಿಧಾನ ನೆರವೇರಿಸಿದರು. ವಿದೇಶದಿಂದ ಆಗಮಿಸಿ ಹಂಪಿಯಲ್ಲಿ ಪೂಜೆ ಸಲ್ಲಿಸಿರುವುದು ಸ್ಥಳೀಯರ ಗಮನ ಸೆಳೆಯಿತು.

ಪೂಜೆಯ ಅಂಗವಾಗಿ ದಂಪತಿ ತಮ್ಮ ಮಗನ ಹೆಸರಿನಲ್ಲಿ ಸಂಕಲ್ಪ ಮಾಡಿ, ಆತನ ಆತ್ಮಕ್ಕೆ ಮೋಕ್ಷ ಪ್ರಾಪ್ತಿಯಾಗಲಿ ಎಂದು ಪ್ರಾರ್ಥಿಸಿದರು. ಪುರೋಹಿತರು ನಾರಾಯಣ ಬಲಿ ಪೂಜೆಯ ಮಹತ್ವ ಹಾಗೂ ಅದರ ಧಾರ್ಮಿಕ ವಿಧಿವಿಧಾನಗಳನ್ನು ವಿವರಿಸಿ, ಶಾಸ್ತ್ರೋಕ್ತವಾಗಿ ಪೂಜಾ ಕಾರ್ಯಗಳನ್ನು ನೆರವೇರಿಸಿದರು.

ಹಂಪಿಯ ಪಂಪಾಕ್ಷೇತ್ರವು ಧಾರ್ಮಿಕ ಆಚರಣೆಗಳಿಗೆ ಪ್ರಸಿದ್ಧವಾಗಿದ್ದು, ದೇಶ-ವಿದೇಶಗಳಿಂದ ಭಕ್ತರು ಇಲ್ಲಿಗೆ ಆಗಮಿಸುತ್ತಾರೆ. ಮಗನ ಅಗಲಿಕೆಯ ನೋವಿನಲ್ಲಿದ್ದ ವಿದೇಶಿ ದಂಪತಿ, ಆತನ ಸದ್ಗತಿಗಾಗಿ ದೂರದ ಇಂಗ್ಲೆಂಡ್‌ನಿಂದ ಬಂದು ಪೂಜೆ ಸಲ್ಲಿಸಿರುವುದು ವಿಶೇಷವಾಗಿತ್ತು.

ಸಾಮಾಜಿಕ ಹೊಣೆಗಾರಿಕೆ ಮರೆಯದಿರಲಿ ಮಾಧ್ಯಮ: ಪ್ರೊ. ಬಿ.ಕೆ. ರವಿ

● ವಿಕ್ರಮ ವಾಹಿನಿ | ಬೆಂಗಳೂರು

ವಾಣಿಜ್ಯೀಕರಣದ ಭರಾಟೆಯ ನಡುವೆಯೂ ಮಾಧ್ಯಮಗಳು ಸಾಮಾಜಿಕ ಹೊಣೆಗಾರಿಕೆಯಿಂದ ವಿಮುಖವಾಗಬಾರದು ಎಂದು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಬಿ.ಕೆ. ರವಿ ಹೇಳಿದರು.

ಡಾ. ಮನಮೋಹನ್ ಸಿಂಗ್ ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸಮೂಹ ಸಂವಹನ ಮತ್ತು ಪತ್ರಿಕೋದ್ಯಮ ವಿಭಾಗವು ಕರ್ನಾಟಕ ಪತ್ರಕರ್ತೆಯರ ಸಂಘ ಹಾಗೂ ಕರ್ನಾಟಕ ಡಿಜಿಟಲ್ ನ್ಯೂಸ್ ಮೀಡಿಯಾ ಅಸೋಸಿಯೇಷನ್ ಸಹಯೋಗದಲ್ಲಿ ಸೆಂಟ್ರಲ್ ಕಾಲೇಜು ಆವರಣದಲ್ಲಿ ಆಯೋಜಿಸಿದ್ದ 'ಮಾಧ್ಯಮ ಮಂಥನ' ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು. ಮಾಧ್ಯಮ ಕ್ಷೇತ್ರದಲ್ಲಿ ಭಾಷಾ ಪ್ರೌಢಿಮೆ ಮತ್ತು ಭಾಷಾಂತರದ ಗುಣಮಟ್ಟ ಹೆಚ್ಚಿಸಬೇಕು. ಡಿಜಿಟಲ್ ಯುಗದಲ್ಲೂ ಮುದ್ರಣ ಮಾಧ್ಯಮ ತನ್ನ ಅಸ್ತಿತ್ವ ಉಳಿಸಿಕೊಂಡಿರುವುದು ಮಹತ್ವದ ಸಂಗತಿ ಎಂದು ತಿಳಿಸಿದರು.



ಅಧ್ಯಕ್ಷತೆ ವಹಿಸಿದ್ದ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ. ರಮೇಶ್ ಬಿ. ಮಾತನಾಡಿ, ಪತ್ರಿಕೋದ್ಯಮ ವಿದ್ಯಾರ್ಥಿಗಳು ಸಾಮಾಜಿಕ ಬದ್ಧತೆ ಮತ್ತು ನೈತಿಕ ಮೌಲ್ಯಗಳನ್ನು ರೂಢಿಸಿಕೊಳ್ಳಬೇಕು. ಪಠ್ಯಕ್ರಮ ಪರಿಷ್ಕರಣೆಯೊಂದಿಗೆ ಅನುಭವಿ ಪತ್ರಕರ್ತರ ಸಂವಾದ ಹಾಗೂ ತಾಂತ್ರಿಕ ತರಬೇತಿ ನೀಡಲಾಗುವುದು ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಸುದ್ದಿಗಳ ನಡುವೆ ನೈಜ ಸುದ್ದಿಯನ್ನು ಗುರುತಿಸುವುದು ಮತ್ತು ಮಾಹಿತಿಯ ನಿಖರತೆ ಖಚಿತಪಡಿಸುವುದು ಪತ್ರಕರ್ತರ ಮುಂದಿರುವ ದೊಡ್ಡ ಸವಾಲು ಎಂದರು.

ಹಿರಿಯ ಪತ್ರಕರ್ತರಾದ ರಮಾಕಾಂತ್ ಎ.ಎಸ್., ಭಾಸ್ಕರ ಹೆಗಡೆ, ಡಾ. ತಾಂಡವಗೌಡ, ಡಾ. ಆರ್. ಪೂರ್ಣಿಮಾ, ಹನುಮೇಶ್ ಕೆ. ಯಾವಗಲ್ ಸೇರಿದಂತೆ ಹಲವು ಗಣ್ಯರು ಹಾಗೂ ಪತ್ರಿಕೋದ್ಯಮ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಸೌಜನ್ಯಾ ಪ್ರಕರಣ: ಎಸ್‌ಐಟಿ ಮುಖ್ಯಸ್ಥರಾಗಿ ಚೇತನ್ ಸಿಂಗ್ ನೇಮಕ

● ವಿಕ್ರಮ ವಾಹಿನಿ | ಮಂಗಳೂರು

ಸೌಜನ್ಯಾ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಮರುತನಿಖೆಗಾಗಿ ರಚಿಸಿರುವ ವಿಶೇಷ ತನಿಖಾ ತಂಡದ (ಎಸ್‌ಐಟಿ) ನೂತನ ಮುಖ್ಯಸ್ಥರಾಗಿ ಸಿಐಡಿ ಐಜಿಪಿ ಚೇತನ್ ಸಿಂಗ್ ರಾಥೋಡ್ ಅವರನ್ನು ರಾಜ್ಯ ಸರ್ಕಾರ ನೇಮಕ ಮಾಡಿದೆ. ಈ ಹಿಂದೆ ಮುಖ್ಯಸ್ಥರಾಗಿದ್ದ ಐಜಿಪಿ ಎನ್. ಶಶಿಕುಮಾರ್ ಅವರನ್ನು ಜವಾಬ್ದಾರಿಯಿಂದ ಬಿಡುಗಡೆಗೊಳಿಸುವಂತೆ ಅವರು ಸರ್ಕಾರಕ್ಕೆ ಪತ್ರ ಬರೆದಿದ್ದರು. ಹೆಚ್ಚುವರಿ ಪೊಲೀಸ್ ಅಧೀಕ್ಷಕ ವೆಂಕಟೇಶ್ ಪ್ರಸನ್ನ ಅವರನ್ನು ಕೂಡ ಎಸ್‌ಐಟಿಯಿಂದ ಬದಲಾಯಿಸಿ, ಅವರ ಸ್ಥಾನಕ್ಕೆ ಹಾಸನದ ಎಎಸ್‌ಪಿ ಶ್ರೀನಿಧಿ ಅವರನ್ನು ನೇಮಿಸಲಾಗಿದೆ. ತಂಡದಲ್ಲಿ ಡಿಐಜಿ ಸಿ.ಎಚ್. ಸುಧೀರ್ ಕುಮಾರ್ ರೆಡ್ಡಿ, ನಿಶಾ ಜೇಮ್ಸ್ ಮತ್ತು ಲೋಕೇಶ್ ಜಗಲಾಸರ್ ಸದಸ್ಯರಾಗಿ ಮುಂದುವರಿದಿದ್ದಾರೆ.

2012ರ ಅಕ್ಟೋಬರ್‌ನಲ್ಲಿ ಉಜಿರೆಯಲ್ಲಿ ನಡೆದಿದ್ದ 17 ವರ್ಷದ ಸೌಜನ್ಯಾ ಅತ್ಯಾಚಾರ ಮತ್ತು ಕೊಲೆ ಪ್ರಕರಣದ ಮರುತನಿಖೆಗೆ ಸುಪ್ರೀಂ ಕೋರ್ಟ್ ಸೆಪ್ಟೆಂಬರ್ 21ರಂದು ಆದೇಶಿಸಿತ್ತು. ಪ್ರಕರಣದ ಏಕೈಕ ಆರೋಪಿಯಾಗಿದ್ದ ಸಂತೋಷ್ ರಾವ್ ಅವರನ್ನು 2023ರಲ್ಲಿ ವಿಚಾರಣಾ ನ್ಯಾಯಾಲಯ ಖುಲಾಸೆಗೊಳಿಸಿತ್ತು.

'ಬೆಂಗಳೂರು ಮೂಲಸೌಕರ್ಯಕ್ಕೆ ದೀರ್ಘಕಾಲೀನ ಮಹಾಯೋಜನೆ ರೂಪಿಸಿ'

● ವಿಕ್ರಮ ವಾಹಿನಿ | ಬೆಂಗಳೂರು

ವೇಗವಾಗಿ ಬೆಳೆಯುತ್ತಿರುವ ಬೆಂಗಳೂರು ನಗರಕ್ಕೆ ಸಮರ್ಪಕ ಕುಡಿಯುವ ನೀರು, ರಸ್ತೆ ಸಂಪರ್ಕ ಹಾಗೂ ಒಳಚರಂಡಿ ವ್ಯವಸ್ಥೆ ಕಲ್ಪಿಸಲು ದೀರ್ಘಕಾಲೀನ ಸಮಗ್ರ ಮಹಾಯೋಜನೆ ರೂಪಿಸುವಂತೆ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಗರದ ವಿಕಾಸಸೌಧದಲ್ಲಿ ಶುಕ್ರವಾರ ನಡೆದ ಬೆಂಗಳೂರು ಪ್ರಾಧಿಕಾರದ ನಾಲ್ಕನೇ ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯಷ್ಟೇ ಅಲ್ಲದೆ, ಹೊರವಲಯದ ಪ್ರದೇಶಗಳ ಬೆಳವಣಿಗೆಯನ್ನೂ ಪರಿಗಣಿಸಿ ಯೋಜನೆ ಸಿದ್ಧಪಡಿಸಬೇಕು. ಮುಂದಿನ ಅಗತ್ಯಗಳನ್ನು ಅಂದಾಜಿಸಿ ಕುಡಿಯುವ ನೀರು, ಒಳಚರಂಡಿ ಹಾಗೂ ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಹಂತ ಹಂತವಾಗಿ ಕೈಗೆತ್ತಿಕೊಳ್ಳಬೇಕು ಎಂದು ನಿರ್ದೇಶಿಸಿದರು.

ಕೊಳಚೆ ನೀರಿನ ಮರುಬಳಕೆಗೆ ಆದ್ಯತೆ: ನಗರದಲ್ಲಿ ಉತ್ಪತ್ತಿಯಾಗುವ ಕೊಳಚೆ ನೀರನ್ನು ಆಧುನಿಕ ತಂತ್ರಜ್ಞಾನದ ಮೂಲಕ ಸಂಸ್ಕರಿಸಿ ಮರುಬಳಕೆ ಮಾಡುವ ಯೋಜನೆಗಳಿಗೆ ಆದ್ಯತೆ ನೀಡಬೇಕು ಎಂದರು. ಈಗಾಗಲೇ ಕೆ.ಸಿ. ವ್ಯಾಲಿ, ಎಚ್.ಎನ್. ವ್ಯಾಲಿ ಹಾಗೂ ವೃಷಭಾವತಿ ವ್ಯಾಲಿ ಯೋಜನೆಗಳ ಮೂಲಕ ಸಂಸ್ಕರಿಸಿದ ನೀರನ್ನು ವಿವಿಧ ಜಿಲ್ಲೆಗಳ ಕೆರೆಗಳಿಗೆ ಹರಿಸಲಾಗುತ್ತಿದೆ. ಯಲಹಂಕ ಮತ್ತು ಜಕ್ಕೂರು ಕೆರೆಗಳ ಮರುಪೂರಣದಿಂದ ಅಂತರ್ಜಲ ಮಟ್ಟ ಹೆಚ್ಚಿರುವುದು ಸಾಬೀತಾಗಿದೆ. ಇದೇ ಮಾದರಿಯಲ್ಲಿ ಮುಂದಿನ ದಿನಗಳಲ್ಲೂ ದೀರ್ಘಕಾಲೀನ ಯೋಜನೆಗಳನ್ನು ರೂಪಿಸಿ ಜಾರಿಗೊಳಿಸಬೇಕು ಎಂದು ತಿಳಿಸಿದರು.

ರಸ್ತೆ ಅಗೆದವರೇ ಮರುನಿರ್ಮಾಣ ಮಾಡಬೇಕು: ವಿವಿಧ ಇಲಾಖೆಗಳು ಹಾಗೂ ಸಂಸ್ಥೆಗಳು ಕಾಮಗಾರಿಗಳಿಗಾಗಿ ರಸ್ತೆಗಳನ್ನು ಅಗೆದು, ನಂತರ ಸಮರ್ಪಕವಾಗಿ ಮರುನಿರ್ಮಾಣ ಮಾಡದಿರುವುದರಿಂದ ಸಾರ್ವಜನಿಕರಿಗೆ ತೊಂದರೆಯಾಗುತ್ತಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಯಾವ ಸಂಸ್ಥೆ ರಸ್ತೆ ಅಗೆಯುತ್ತದೆಯೋ, ಅದೇ ಸಂಸ್ಥೆ ರಸ್ತೆಯನ್ನು ಸಂಪೂರ್ಣವಾಗಿ ಪುನಶ್ಚೇತನಗೊಳಿಸುವ ಜವಾಬ್ದಾರಿ ಹೊರಬೇಕು ಎಂದು ಸಚಿವರು ಸ್ಪಷ್ಟಪಡಿಸಿದರು.

ರಸ್ತೆ ಮರುನಿರ್ಮಾಣದ ಗುಣಮಟ್ಟ, ವೆಚ್ಚದ ಹೊಣೆಗಾರಿಕೆ, ನಿಯಮ ಉಲ್ಲಂಘನೆಗೆ ದಂಡ ಹಾಗೂ ಕಾಮಗಾರಿಗಳ ಪುನರಾವರ್ತನೆ ತಡೆಯುವ ನಿಟ್ಟಿನಲ್ಲಿ ಎಲ್ಲ ಇಲಾಖೆಗಳಿಗೂ ಅನ್ವಯವಾಗುವ ಏಕರೂಪ ನೀತಿ ಮತ್ತು ಕಾರ್ಯವಿಧಾನ ಜಾರಿಗೆ ತರಲು ನಿರ್ಧರಿಸಲಾಗಿದೆ ಎಂದರು.

ಮೆಟ್ರೋಗೆ ಫೀಡರ್ ಬಸ್ ಸಂಪರ್ಕ: ಸಾರ್ವಜನಿಕ ಸಾರಿಗೆ ವ್ಯವಸ್ಥೆ ಬಲಪಡಿಸಿ ಖಾಸಗಿ ವಾಹನಗಳ ಬಳಕೆ ಕಡಿಮೆ ಮಾಡಲು ಮೆಟ್ರೋ ನಿಲ್ದಾಣಗಳ ಸುತ್ತಮುತ್ತ 2ರಿಂದ 3 ಕಿ.ಮೀ. ವ್ಯಾಪ್ತಿಯಲ್ಲಿ ಬಿಎಂಟಿಸಿ ವತಿಯಿಂದ ಜಿಪಿಎಸ್ ಆಧಾರಿತ ಫೀಡರ್ ಬಸ್ ಸೇವೆ ಆರಂಭಿಸಬೇಕು ಎಂದು ಸೂಚಿಸಿದರು. ಈ ಬಸ್‌ಗಳಿಗೆ ನಿಗದಿತ ಮಾರ್ಗ ರೂಪಿಸಿ, ಮಾರ್ಗ ಬದಲಾವಣೆಗೆ ಅವಕಾಶ ನೀಡಬಾರದು. ವಿಶೇಷವಾಗಿ ಹೊರವರ್ತುಲ ರಸ್ತೆಗಳಲ್ಲಿ ಮೊದಲ ಮತ್ತು ಕೊನೆಯ ಹಂತದ ಸಂಪರ್ಕ ವ್ಯವಸ್ಥೆ ಸುಧಾರಿಸಬೇಕು ಎಂದರು.

ಇತ್ತೀಚೆಗೆ ಬಿಡುಗಡೆಯಾದ 'ಬಿಎಂಟಿಸಿ 2.0' ಆಪ್ ಮೂಲಕ ಮೆಟ್ರೋ ಮತ್ತು ಬಿಎಂಟಿಸಿ ಪ್ರಯಾಣಕ್ಕೆ ಒಂದೇ ವೇದಿಕೆಯಲ್ಲಿ ಟಿಕೆಟ್ ಕಾಯ್ದಿರಿಸುವ ಸೌಲಭ್ಯವಿದೆ. ಮುಂದಿನ ದಿನಗಳಲ್ಲಿ ಖಾಸಗಿ ಆಟೋ ಮತ್ತು ಟ್ಯಾಕ್ಸಿ ಸೇವೆಗಳನ್ನೂ ಇದರೊಂದಿಗೆ ಸಂಯೋಜಿಸುವ ಯೋಜನೆ ಇದೆ ಎಂದು ತಿಳಿಸಿದರು.

9 ಹೊಸ ಅಗ್ನಿಶಾಮಕ ಠಾಣೆಗಳಿಗೆ ಅನುಮತಿ: ನಗರದ ಸುರಕ್ಷತೆ ದೃಷ್ಟಿಯಿಂದ ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ಪ್ರಸ್ತುತ ಇರುವ 20 ಅಗ್ನಿಶಾಮಕ ಘಟಕಗಳ ಜೊತೆಗೆ ಹೆಚ್ಚುವರಿಯಾಗಿ ಒಂಬತ್ತು ಹೊಸ ಅಗ್ನಿಶಾಮಕ ಠಾಣೆಗಳ ಸ್ಥಾಪನೆಗೆ ಅನುಮತಿ ನೀಡಲಾಗಿದೆ. ವಸತಿ, ವಾಣಿಜ್ಯ ಹಾಗೂ ಅಪಾಯಕಾರಿ ಪ್ರದೇಶಗಳನ್ನು ಗುರುತಿಸಿ ನಕ್ಷೆ ಸಿದ್ಧಪಡಿಸಬೇಕು.

ಭವಿಷ್ಯದ ಅಗತ್ಯಕ್ಕೆ ಅನುಗುಣವಾಗಿ ಮತ್ತಷ್ಟು ಠಾಣೆಗಳ ಸ್ಥಾಪನೆಗೆ ಸಮಗ್ರ ಪ್ರಸ್ತಾವನೆ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಬಿಎ ಮುಖ್ಯ ಆಯುಕ್ತ ಮಹೇಶ್ವರ್ ರಾವ್, ವಿಶೇಷ ಆಯುಕ್ತರಾದ ಮುನೀಶ್ ಮೌದ್ಗಿಲ್, ಶಿಲ್ಪಾ ನಾಗ್, ನಿತಿಶ್, ಜಲಮಂಡಳಿ ಅಧ್ಯಕ್ಷೆ ಮಂಜುಳಾ, ಬಿಎಂಟಿಸಿ ವ್ಯವಸ್ಥಾಪಕ ನಿರ್ದೇಶಕ ರಘುನಂದನ್ ಮೂರ್ತಿ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ
ವಿಕ್ರಮ ವಾಹಿನಿ
ಅಕ್ಟೋಬರ್, 31- 2026
ಶನಿವಾರ

www.VIKRAMAVAHINI.com
|| ಕನ್ನಡ ದಿನಪತ್ರಿಕೆ ||
PRGI NO: KARKAN/2018/78481

71 ಸಾಧಕರಿಗೆ ರಾಜ್ಯೋತ್ಸವ ಪ್ರಶಸ್ತಿ ಪ್ರಕಟ

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯ ಸರ್ಕಾರದ ಪ್ರತಿಷ್ಠಿತ ರಾಜ್ಯೋತ್ಸವ ಪ್ರಶಸ್ತಿಗೆ 2026ನೇ ಸಾಲಿನಲ್ಲಿ ವಿವಿಧ ಕ್ಷೇತ್ರಗಳ 71 ಸಾಧಕರನ್ನು ಆಯ್ಕೆ ಮಾಡಲಾಗಿದೆ. ಜಾನಪದ, ಸಂಗೀತ, ನೃತ್ಯ, ಚಲನಚಿತ್ರ, ರಂಗಭೂಮಿ, ಸಾಹಿತ್ಯ, ಶಿಕ್ಷಣ, ಸಮಾಜಸೇವೆ, ವೈದ್ಯಕೀಯ, ವಿಜ್ಞಾನ–ತಂತ್ರಜ್ಞಾನ, ಕ್ರೀಡೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಪ್ರಶಸ್ತಿಗೆ ಪರಿಗಣಿಸಲಾಗಿದೆ.

ಸಮಾಜಸೇವೆ ಕ್ಷೇತ್ರದಲ್ಲಿ ಮಾಜಿ ಸಚಿವ ಕಾಗೋಡು ತಿಮ್ಮಪ್ಪ, ಪೂಜ್ಯ ಜಗದ್ಗುರು ಡಾ. ಅನ್ನದಾನೀಶ್ವರ ಮಹಾಶಿವಯೋಗಿ, ಬಸವರಾಜು, ಡಾ. ಎಸ್.ಎಂ. ಎಲಿ, ಡಾ. ಜಿ.ಎಸ್. ಚಂದ್ರಶೇಖರ್, ಡಾ. ಶಿವಾನಂದ ಮಹಾಸ್ವಾಮಿ ಸೇರಿದಂತೆ 10 ಮಂದಿಗೆ ಪ್ರಶಸ್ತಿ ಲಭಿಸಿದೆ.

ಸಾಹಿತ್ಯ ಕ್ಷೇತ್ರದಲ್ಲಿ ಡಾ. ಇಂದಿರಾ ಹೆಗಡೆ, ವೀರಹನುಮಾನ್, ಪ್ರೊ. ನಾರಾಯಣಘಟ್ಟ, ಸಿ. ಮಹೇಶ್ವರಪ್ಪ ಚಟ್ನಳ್ಳಿ, ಡಾ. ಕರೀಗೌಡ ಬೀಚನಹಳ್ಳಿ ಹಾಗೂ ಡಾ. ಸಿದ್ಧರಾಮ ಹೊನ್ಕಲ್ ಆಯ್ಕೆಯಾಗಿದ್ದಾರೆ. ಶಿಕ್ಷಣ ಕ್ಷೇತ್ರದಲ್ಲಿ ಫಾ. ಜೋಸೆಫ್, ಶಾಂತಪ್ಪ ದಶವಂತ, ಸಂಗೀತಾ ಎನ್. ಕಟ್ಟಿಮನಿ ಹಾಗೂ ಡಾ. ಎನ್.ಎಸ್. ರಂಗರಾಜು ಅವರಿಗೆ ಪ್ರಶಸ್ತಿ ಘೋಷಿಸಲಾಗಿದೆ.

ಜಾನಪದ ಕ್ಷೇತ್ರದಲ್ಲಿ ದಾವಲಸಾಬ ಅತ್ತಾರ, ಗೌರಮ್ಮ, ಪಾಂಡಪ್ಪ ದೇವಲಪ್ಪ ಲಮಾಣಿ, ಎ.ಆರ್. ಸತ್ಯನಾರಾಯಣ, ಈರಣ್ಣ ರುದ್ರಾಕ್ಷಿ, ಶಿವಲಿಂಗಪ್ಪ ಹಾಗೂ ಸುರೇಶ್ ರಾಮಚಂದ್ರ ಜೋಶಿ ಪ್ರಶಸ್ತಿಗೆ ಭಾಜನರಾಗಿದ್ದಾರೆ.

ಸಂಗೀತ ಕ್ಷೇತ್ರದಲ್ಲಿ ಡಾ. ಸಿ.ಎ. ಶ್ರೀಧರ್, ಡಾ. ಎ. ನಾರಾಯಣ ಸ್ವಾಮಿ ಹಾಗೂ ಬಿ. ಮುರುಳಿ, ನೃತ್ಯ ಕ್ಷೇತ್ರದಲ್ಲಿ ಡಾ. ಸತ್ಯನಾರಾಯಣ ರಾಜು ಆಯ್ಕೆಯಾಗಿದ್ದಾರೆ. ಚಲನಚಿತ್ರ ಕ್ಷೇತ್ರದಲ್ಲಿ ಬಾಬಜೀ ವೆಂಕಟರಮಣ ಮತ್ತು ಅಶೋಕ್, ಕಿರುತೆರೆ ಕ್ಷೇತ್ರದಲ್ಲಿ ಕೆ.ಎಸ್. ರವೀಂದ್ರನಾಥ್ ಹಾಗೂ ಯಕ್ಷಗಾನ ಕ್ಷೇತ್ರದಲ್ಲಿ ಗೋಪಾಲ ಗಾಣಿಗ ಪ್ರಶಸ್ತಿ ಪಡೆದಿದ್ದಾರೆ.

ರಂಗಭೂಮಿ ಕ್ಷೇತ್ರದಲ್ಲಿ ಡಿ. ಕೆಂಪಣ್ಣ, ಕೆ. ಜಯಲಕ್ಷ್ಮಿ ಪಾಟೀಲ್, ಜಿ.ಡಿ. ತಿಮ್ಮಯ್ಯ, ಕೆ.ಆರ್. ಸುಮತಿ, ಹೆಚ್.ವಿ. ಪುಟ್ಟವೀರಪ್ಪ ಹಾಗೂ ಹೊನ್ನ ನಾಯಕ್ ಅವರನ್ನು ಆಯ್ಕೆ ಮಾಡಲಾಗಿದೆ. ಶಿಲ್ಪಕಲೆಯಲ್ಲಿ ಜಿ.ವಿ. ಹಂಸಾನಂದ ಆಚಾರ್ಯ ಮತ್ತು ಕಾಡಪ್ಪ, ಚಿತ್ರಕಲೆಯಲ್ಲಿ ಸಿ.ಬಿ. ಸೋಮಶೆಟ್ಟಿ ಹಾಗೂ ಕರಕುಶಲ ಕ್ಷೇತ್ರದಲ್ಲಿ ಶಾಂತಾಬಾಯಿ ಮೋಹನ್ ಕಾಂಬಳೆ ಅವರಿಗೆ ಗೌರವ ಲಭಿಸಿದೆ.

ಕೃಷಿ ಕ್ಷೇತ್ರದಲ್ಲಿ ಹೆಚ್.ಕೆ. ಶ್ರೀಕಂಠು ಮತ್ತು ಬಿ.ಎ. ಚನ್ನಪ್ಪಗೌಡ, ಪರಿಸರ ಕ್ಷೇತ್ರದಲ್ಲಿ ಡಾ. ಸ್ವಾಮಿ ಆನಂದ್. ಆರ್., ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಪ್ರೊ. ರಾಜಾಸಾಬ್ ಎ.ಎಚ್. ಹಾಗೂ ಕೆನಡಾದಲ್ಲಿರುವ ಡಾ. ರಾಜಶೇಖರ ಮೂರ್ತಿ ಆಯ್ಕೆಯಾಗಿದ್ದಾರೆ.

ಮಾಧ್ಯಮ ಕ್ಷೇತ್ರದಲ್ಲಿ ಉಮಾಪತಿ, ಎಂ.ಪಿ. ಸುಶೀಲ ಹಾಗೂ ವಿಶ್ವನಾಥ್ ಸುವರ್ಣ ಪ್ರಶಸ್ತಿಗೆ ಭಾಜನರಾಗಿದ್ದಾರೆ. ವೈದ್ಯಕೀಯ ಕ್ಷೇತ್ರದಲ್ಲಿ ಡಾ. ವಿಜಯೇಂದ್ರ ಹೊನ್ನೂರಪ್ಪ ಮತ್ತು ಡಾ. ಸುಜಾತ ಮಲ್ಲಿಕಾರ್ಜುನ ಜಾಲಿ, ಆಡಳಿತ ಕ್ಷೇತ್ರದಲ್ಲಿ ತೆರೆಸಾ ಭಟ್ಟಾಚಾರ್ಯ ಹಾಗೂ ಡಾ. ಕೆ.ಎಸ್. ಸೋಮಶೇಖರ್, ಇಂಜಿನಿಯರಿಂಗ್ ಕ್ಷೇತ್ರದಲ್ಲಿ ಡಾ. ಕೆ.ಎನ್. ವೆಂಕಟಕೃಷ್ಣರಾವ್ ಆಯ್ಕೆಯಾಗಿದ್ದಾರೆ.

ಇದಲ್ಲದೆ, ಸಂಕೀರ್ಣ ಕ್ಷೇತ್ರದಲ್ಲಿ 11 ಸಾಧಕರು, ನ್ಯಾಯಾಂಗ ಕ್ಷೇತ್ರದಲ್ಲಿ ಬಿ.ವಿ. ಆಚಾರ್ಯ, ಹೊರನಾಡು/ಹೊರದೇಶ ವಿಭಾಗದಲ್ಲಿ ರಮೇಶ್ ಗೌಡ, ಕ್ರೀಡಾ ಕ್ಷೇತ್ರದಲ್ಲಿ ಜಿಮ್ ರವಿ, ಡಾ. ಎ.ಬಿ. ಸುಬ್ಬಯ್ಯ ಮತ್ತು ಎಂ. ಗಿರೀಶ್ ಅವರಿಗೆ ಪ್ರಶಸ್ತಿ ಘೋಷಿಸಲಾಗಿದೆ.

ವಿವಿಧ ಜಿಲ್ಲೆಗಳ ಸಾಧಕರ ಜೊತೆಗೆ ಹೊರದೇಶದಲ್ಲಿ ನೆಲೆಸಿದ್ದು, ತಮ್ಮ ಕ್ಷೇತ್ರಗಳಲ್ಲಿ ಗಮನಾರ್ಹ ಕೊಡುಗೆ ನೀಡಿರುವವರನ್ನೂ ಪ್ರಶಸ್ತಿಗೆ ಆಯ್ಕೆ ಮಾಡಿರುವುದು ವಿಶೇಷವಾಗಿದೆ.

ಔಷಧಗಳ ಮೂಲ ದರ ಪ್ರಕಟಣೆ ಕಡ್ಡಾಯವಲ್ಲ: ಸರ್ಕಾರ

● ವಿಕ್ರಮ ವಾಹಿನಿ । ಬೆಂಗಳೂರು

ಔಷಧಗಳು, ವೈದ್ಯಕೀಯ ಉಪಕರಣಗಳು ಹಾಗೂ ಬಳಕೆಯ ವಸ್ತುಗಳ ಮೂಲ ಖರೀದಿ ದರವನ್ನು ರೋಗಿಗಳ ಬಿಲ್‌ನಲ್ಲಿ ಪ್ರಕಟಿಸುವಂತೆ ಆಸ್ಪತ್ರೆಗಳಿಗೆ ಸೂಚಿಸಿ ಹೊರಡಿಸಿರುವ ಸುತ್ತೋಲೆಯನ್ನು ಕಡ್ಡಾಯವಾಗಿ ಜಾರಿಗೊಳಿಸುವಂತೆ ಒತ್ತಾಯಿಸುವುದಿಲ್ಲ ಎಂದು ರಾಜ್ಯ ಸರ್ಕಾರ ಹೈಕೋರ್ಟ್‌ಗೆ ತಿಳಿಸಿದೆ.

ಖಾಸಗಿ ಆಸ್ಪತ್ರೆಗಳ ಸಂಘಟನೆ ಹಾಗೂ ಪ್ರಿಸ್ಟೈನ್ ಆಸ್ಪತ್ರೆ ಸಲ್ಲಿಸಿರುವ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸಿ.ಎಂ. ಪೂಣಚ್ಚ ಅವರ ಏಕಸದಸ್ಯ ಪೀಠಕ್ಕೆ ಸರ್ಕಾರ ಈ ಭರವಸೆ ನೀಡಿದೆ. ಸುತ್ತೋಲೆಯಲ್ಲಿನ ಕಾನೂನು ನಿಬಂಧನೆಗಳಿಗೆ ಆಕ್ಷೇಪ ವ್ಯಕ್ತವಾಗಿರುವ ಹಿನ್ನೆಲೆಯಲ್ಲಿ, ಅದನ್ನು ಹಿಂಪಡೆದು ಹೊಸ ಸುತ್ತೋಲೆ ಹೊರಡಿಸುವ ಸಾಧ್ಯತೆಯೂ ಇದೆ ಎಂದು ಸರ್ಕಾರದ ಪರ ಹೆಚ್ಚುವರಿ ಅಡ್ವೊಕೇಟ್ ಜನರಲ್ ಬಿ.ವಿ. ಭಾನುಪ್ರಕಾಶ್ ತಿಳಿಸಿದರು.

ನವೆಂಬರ್ 1ರಿಂದ ಸುತ್ತೋಲೆ ಜಾರಿಗೆ ಬರಬೇಕಿದ್ದರೂ, ಅರ್ಜಿದಾರರ ವಿರುದ್ಧ ಯಾವುದೇ ಆತುರದ ಕ್ರಮ ಕೈಗೊಳ್ಳುವುದಿಲ್ಲ ಎಂದು ಸರ್ಕಾರ ಸ್ಪಷ್ಟಪಡಿಸಿತು. ಈ ಹೇಳಿಕೆಯನ್ನು ದಾಖಲಿಸಿಕೊಂಡ ನ್ಯಾಯಪೀಠ ವಿಚಾರಣೆಯನ್ನು ನವೆಂಬರ್ 12ಕ್ಕೆ ಮುಂದೂಡಿತು.

ಅಕ್ಟೋಬರ್ 1ರಂದು ಹೊರಡಿಸಿರುವ ಸುತ್ತೋಲೆಯಂತೆ, ರೋಗಿಗಳ ಬಿಲ್‌ನಲ್ಲಿ ಔಷಧಗಳ ಖರೀದಿ ದರ ನಮೂದಿಸುವುದು ಕಡ್ಡಾಯವಾಗಲಿದೆ. ಆದರೆ, ಇಂತಹ ಆದೇಶ ಹೊರಡಿಸಲು ಇಲಾಖೆಗೆ ಅಧಿಕಾರವಿಲ್ಲ. ಔಷಧಗಳ ಖರೀದಿ ದರವು ಜಿಎಸ್‌ಟಿ, ರಿಯಾಯಿತಿ ಹಾಗೂ ಬ್ಯಾಚ್‌ಗಳಿಗೆ ಅನುಗುಣವಾಗಿ ಬದಲಾಗುವುದರಿಂದ ಸ್ಪಷ್ಟ ಲೆಕ್ಕಾಚಾರದ ಮಾನದಂಡಗಳಿಲ್ಲ. ಸರಬರಾಜುದಾರರೊಂದಿಗಿನ ಗೌಪ್ಯ ವಾಣಿಜ್ಯ ಒಪ್ಪಂದದ ದರ ಬಹಿರಂಗಪಡಿಸುವುದು ಆಸ್ಪತ್ರೆಗಳ ಹಕ್ಕಿಗೆ ಧಕ್ಕೆ ತರುತ್ತದೆ ಎಂದು ಅರ್ಜಿದಾರರು ಆಕ್ಷೇಪಿಸಿದ್ದಾರೆ. ಸುತ್ತೋಲೆ ರದ್ದುಗೊಳಿಸುವಂತೆ ಹಾಗೂ ಅದರ ಜಾರಿಗೆ ಮಧ್ಯಂತರ ತಡೆ ನೀಡುವಂತೆ ಮನವಿ ಮಾಡಿದ್ದಾರೆ.

ನ.1ರಿಂದ ರಾಜ್ಯಾದ್ಯಂತ ‘ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ’ ಅಭಿಯಾನ

ಎಸ್‌ಐಆರ್ ಕುರಿತು ಯುವಜನರಿಗೆ ಅರಿವು; ನ.5ರಂದು ಬೆಂಗಳೂರಿನಲ್ಲಿ ಕಾರ್ಯಕ್ರಮ: ಸುನೀಲ್‌ಕುಮಾರ್

● ವಿಕ್ರಮ ವಾಹಿನಿ । ಬೆಂಗಳೂರು

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತು ಯುವಜನರಿಗೆ ಸೂಕ್ತ ಮಾಹಿತಿ ನೀಡುವ ಹಾಗೂ ಕಾಂಗ್ರೆಸ್‌ನ ಅರಾಜಕತೆ ಸೃಷ್ಟಿಸುವ ಮನಸ್ಥಿತಿಯನ್ನು ಬಯಲು ಮಾಡುವ ಉದ್ದೇಶದಿಂದ ನ.1ರಿಂದ 30ರವರೆಗೆ ರಾಜ್ಯಾದ್ಯಂತ ‘ಪ್ರಜಾಪ್ರಭುತ್ವ ಉಳಿಸಿ, ಅರಾಜಕತೆ ಅಳಿಸಿ’ ಅಭಿಯಾನ ಹಮ್ಮಿಕೊಳ್ಳಲಾಗುವುದು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಶಾಸಕ ಸುನೀಲ್‌ಕುಮಾರ್ ತಿಳಿಸಿದರು.

ನಗರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಲೇಜು ವಿದ್ಯಾರ್ಥಿಗಳು ಮತ್ತು ಯುವಜನರನ್ನು ಗುರಿಯಾಗಿಸಿಕೊಂಡು ರಾಜ್ಯದ ವಿವಿಧೆಡೆ ಸಂವಾದ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು. ಎಸ್‌ಐಆರ್ ವಿಚಾರದಲ್ಲಿ ಕಾಂಗ್ರೆಸ್ ಯುವಜನರನ್ನು ತಪ್ಪು ದಾರಿಗೆ ಎಳೆಯುವ ಮತ್ತು ಸಂಘರ್ಷಕ್ಕೆ ಪ್ರಚೋದಿಸುವ ಪ್ರಯತ್ನ ಮಾಡುತ್ತಿದೆ ಎಂದು ಆರೋಪಿಸಿದರು.

ಮೋದಿಯಿಂದ ಯುವಜನರಿಗೆ ಹಲವು ಯೋಜನೆ

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಯುವಜನರ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಏಳು ಹೊಸ ಐಐಟಿಗಳು, 16 ಟ್ರಿಬಲ್ ಐಐಟಿಗಳು ಹಾಗೂ ಎಂಟು ಕೇಂದ್ರೀಯ ವಿದ್ಯಾಲಯಗಳನ್ನು ಆರಂಭಿಸಲಾಗಿದೆ. 2014ಕ್ಕೂ ಮುನ್ನ ದೇಶದಲ್ಲಿ 387 ವೈದ್ಯಕೀಯ ಕಾಲೇಜುಗಳಿದ್ದರೆ, ನಂತರದ 12 ವರ್ಷಗಳಲ್ಲಿ 431 ಹೊಸ ವೈದ್ಯಕೀಯ ಕಾಲೇಜುಗಳನ್ನು ಸ್ಥಾಪಿಸಲಾಗಿದೆ ಎಂದು ವಿವರಿಸಿದರು.

ಕೌಶಲ್ಯಾಭಿವೃದ್ಧಿಗಾಗಿ ಪ್ರತ್ಯೇಕ ಸಚಿವಾಲಯ ಆರಂಭಿಸಲಾಗಿದ್ದು, ದೇಶದಲ್ಲಿ 2,12,283 ಸ್ಟಾರ್ಟ್‌ಅಪ್‌ಗಳು ಸ್ಥಾಪನೆಯಾಗಿವೆ. ಈ ಪೈಕಿ 21,601 ಸ್ಟಾರ್ಟ್‌ಅಪ್‌ಗಳು ಕರ್ನಾಟಕದಲ್ಲಿವೆ. ಕ್ರೀಡಾ ಕ್ಷೇತ್ರದಲ್ಲೂ ಯುವಜನರಿಗೆ ಹಲವು ಅವಕಾಶಗಳನ್ನು ಕಲ್ಪಿಸಲಾಗಿದೆ ಎಂದರು.

ಕಾಂಗ್ರೆಸ್‌ಗೆ ಎಸ್‌ಐಆರ್ ವಿರೋಧವೇಕೆ?: ಮತದಾರರ ಪಟ್ಟಿ ಪರಿಷ್ಕರಣೆ ಚುನಾವಣಾ ಆಯೋಗದ ಕಾನೂನುಬದ್ಧ ಪ್ರಕ್ರಿಯೆಯಾಗಿದೆ. ಈ ಹಿಂದೆ ದೇಶದಲ್ಲಿ 12 ಬಾರಿ ಮತದಾರರ ಪಟ್ಟಿ ಪರಿಷ್ಕರಣೆ ನಡೆದಿದ್ದು, ಅದರಲ್ಲಿ 10 ಬಾರಿ ಕಾಂಗ್ರೆಸ್ ಅಧಿಕಾರದಲ್ಲಿದ್ದಾಗಲೇ ನಡೆದಿದೆ. 2004ರ ಬಳಿಕ ಸುಮಾರು ಎರಡು ದಶಕಗಳ ನಂತರ ಎಸ್‌ಐಆರ್ ನಡೆಯುತ್ತಿದೆ. ಆದರೂ ಕಾಂಗ್ರೆಸ್ ಇದಕ್ಕೆ ವಿರೋಧ ವ್ಯಕ್ತಪಡಿಸುತ್ತಿರುವುದು ಏಕೆ ಎಂದು ಪ್ರಶ್ನಿಸಿದರು.

ಇವಿಎಂ, ಮತಪತ್ರ ಹಾಗೂ ಮತದಾರರ ಪಟ್ಟಿಯ ವಿಚಾರದಲ್ಲಿ ಕಾಂಗ್ರೆಸ್ ನಿರಂತರವಾಗಿ ಆಕ್ಷೇಪ ವ್ಯಕ್ತಪಡಿಸುತ್ತಿದೆ. ಎಸ್‌ಐಆರ್ ನೆಪದಲ್ಲಿ ಯುವಜನರನ್ನು ರಾಜಕೀಯ ಸಂಘರ್ಷಕ್ಕೆ ಬಳಸಿಕೊಳ್ಳುವುದು ಸರಿಯಲ್ಲ. ದೇಶದಲ್ಲಿ ಅರಾಜಕತೆ ಸೃಷ್ಟಿಸುವ ಪ್ರಯತ್ನ ಯಶಸ್ವಿಯಾಗುವುದಿಲ್ಲ ಎಂದು ಹೇಳಿದರು.

ನ.3ರಂದು ಹುಬ್ಬಳ್ಳಿಯಲ್ಲಿ ಹಾಗೂ ನ.5ರಂದು ಬೆಂಗಳೂರಿನಲ್ಲಿ ಅಭಿಯಾನದ ಪ್ರಮುಖ ಕಾರ್ಯಕ್ರಮಗಳು ನಡೆಯಲಿದ್ದು, ರಾಜ್ಯದ ವಿವಿಧ ಕಾಲೇಜುಗಳಲ್ಲೂ ಹಂತ ಹಂತವಾಗಿ ಸಂವಾದ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದರು.

ರೈತರಿಗೆ ಪರಿಹಾರ ನೀಡಲು ಷರತ್ತು ಬೇಡ: ಬರ ಪರಿಹಾರವಾಗಿ ರೈತರಿಗೆ 2,500 ನೀಡುವ ವಿಚಾರದಲ್ಲಿ ವಿಧಾನಮಂಡಲದಲ್ಲಿ ಸರ್ಕಾರ ಒಪ್ಪಿಕೊಂಡಿದ್ದ ನಿಲುವಿಗೆ ವಿರುದ್ಧವಾಗಿ 17 ಷರತ್ತುಗಳನ್ನು ವಿಧಿಸಿ ಆದೇಶ ಹೊರಡಿಸಲಾಗಿದೆ ಎಂದು ಸುನೀಲ್‌ಕುಮಾರ್ ಆಕ್ಷೇಪಿಸಿದರು. ರೈತರಿಗೆ ಪರಿಹಾರ ನೀಡುವಾಗ ವಿಧಿಸಿರುವ ಷರತ್ತುಗಳನ್ನು ಸರ್ಕಾರ ಹಿಂಪಡೆಯಬೇಕು ಎಂದು ಆಗ್ರಹಿಸಿದರು. ಹಾಲಿನ ದರ ಏರಿಕೆ ವಿಚಾರವಾಗಿ ಮಾತನಾಡಿದ ಅವರು, ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಲೀಟರ್ ಹಾಲಿನ ದರ 17 ಹೆಚ್ಚಳವಾಗಿದೆ. ರೈತರಿಗೆ ನೀಡಬೇಕಾದ 1,200 ಕೋಟಿಗೂ ಅಧಿಕ ಹಾಲಿನ ಸಬ್ಸಿಡಿ ಬಾಕಿ ಉಳಿಸಿಕೊಳ್ಳಲಾಗಿದೆ ಎಂದು ಆರೋಪಿಸಿದರು. ವಿದ್ಯಾರ್ಥಿಗಳ ಪ್ರವೇಶ ಶುಲ್ಕ, ಮುದ್ರಾಂಕ ಶುಲ್ಕ ಹಾಗೂ ಕಂದಾಯ ಇಲಾಖೆಯ ವಿವಿಧ ಅರ್ಜಿಗಳ ದರವನ್ನೂ ಹೆಚ್ಚಿಸಲಾಗಿದೆ ಎಂದು ಟೀಕಿಸಿದರು.

ಖಜಾನೆ ತುಂಬಿಸಿಕೊಳ್ಳಲು ಜನರ ಮೇಲೆ ಆರ್ಥಿಕ ಹೊರೆ ಹೇರುತ್ತಿರುವ ಸರ್ಕಾರ ಗ್ಯಾರಂಟಿ ಸರ್ಕಾರವಲ್ಲ, ರಾಬರಿ ಸರ್ಕಾರ ಎಂದು ವಾಗ್ದಾಳಿ ನಡೆಸಿದರು.

ಸುದ್ದಿಗೋಷ್ಠಿಯಲ್ಲಿ ಸಂಸದ ಕ್ಯಾಪ್ಟನ್ ಬೃಜೇಶ್ ಚೌಟ ಹಾಗೂ ಬಿಜೆಪಿ ಯುವ ಮೋರ್ಚಾ ರಾಜ್ಯಾಧ್ಯಕ್ಷ, ಶಾಸಕ ಧೀರಜ್ ಮುನಿರಾಜು ಉಪಸ್ಥಿತರಿದ್ದರು.

ಬೆಂಗಳೂರು-ಮುಂಬೈ ನಡುವೆ ವಂದೇ ಭಾರತ್ ಸ್ಲೀಪರ್ ರೈಲು ಸೇವೆ ಆರಂಭ

● ವಿಕ್ರಮ ವಾಹಿನಿ । ಬೆಂಗಳೂರು

ಬೆಂಗಳೂರು ಮತ್ತು ಮುಂಬೈ ನಡುವಿನ ರೈಲು ಸಂಪರ್ಕವನ್ನು ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಭಾರತೀಯ ರೈಲ್ವೆ ವಂದೇ ಭಾರತ್ ಸ್ಲೀಪರ್ ಎಕ್ಸ್‌ಪ್ರೆಸ್ ರೈಲು ಸೇವೆ ಆರಂಭಿಸಲು ಸಜ್ಜಾಗಿದೆ. ಈ ಎರಡು ಮಹಾನಗರಗಳ ನಡುವೆ ಆರಾಮದಾಯಕ ರಾತ್ರಿ ಪ್ರಯಾಣದ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ 16 ಬೋಗಿಗಳ ರೈಲನ್ನು ಪರಿಚಯಿಸಲಾಗುತ್ತಿದೆ.

ನ.1ರಂದು ರೈಲು ಸಂಖ್ಯೆ 06503 ಎಸ್‌ಎಂವಿಟಿ ಬೆಂಗಳೂರು–ಸಿಎಸ್‌ಎಂಟಿ ಮುಂಬೈ ಉದ್ಘಾಟನಾ ವಿಶೇಷ ರೈಲು ಸಂಚರಿಸಲಿದೆ. ಅಂದು ಮಧ್ಯಾಹ್ನ 12.15ಕ್ಕೆ ಬೆಂಗಳೂರಿನಿಂದ ಹೊರಡುವ ರೈಲು, ನ.2ರಂದು ಬೆಳಿಗ್ಗೆ 6.15ಕ್ಕೆ ಮುಂಬೈ ತಲುಪಲಿದೆ. ಮಾರ್ಗಮಧ್ಯೆ ಹಿಂದೂಪುರ, ಧರ್ಮಾವರಂ, ಅನಂತಪುರ, ಗುಂತಕಲ್, ರಾಯಚೂರು, ಕೃಷ್ಣ, ಯಾದಗಿರಿ, ಕಲಬುರಗಿ, ಸೋಲಾಪುರ, ಪುಣೆ, ಲೋನಾವಾಲ ಮತ್ತು ಕಲ್ಯಾಣ್ ನಿಲ್ದಾಣಗಳಲ್ಲಿ ನಿಲುಗಡೆ ಇರಲಿದೆ.

ವಾರದಲ್ಲಿ ಆರು ದಿನ ಸಂಚಾರ: ಉದ್ಘಾಟನಾ ಸಂಚಾರದ ಬಳಿಕ ನ.3ರಿಂದ ಬೆಂಗಳೂರು–ಮುಂಬೈ ನಡುವೆ ರೈಲು ಸಂಖ್ಯೆ 27652ರ ನಿಯಮಿತ ಸೇವೆ ಆರಂಭವಾಗಲಿದೆ. ಸೋಮವಾರ ಹೊರತುಪಡಿಸಿ ವಾರದಲ್ಲಿ ಆರು ದಿನ ರಾತ್ರಿ 7.45ಕ್ಕೆ ಎಸ್‌ಎಂವಿಟಿ ಬೆಂಗಳೂರಿನಿಂದ ಹೊರಡುವ ರೈಲು, ಮರುದಿನ ಬೆಳಿಗ್ಗೆ 11.55ಕ್ಕೆ ಮುಂಬೈನ ಛತ್ರಪತಿ ಶಿವಾಜಿ ಮಹಾರಾಜ್ ಟರ್ಮಿನಸ್ ತಲುಪಲಿದೆ.

ಹಿಂತಿರುಗುವ ರೈಲು ಸಂಖ್ಯೆ 27651 ನ.2ರಿಂದ ಸಂಚಾರ ಆರಂಭಿಸಲಿದ್ದು, ಮಂಗಳವಾರ ಹೊರತುಪಡಿಸಿ ವಾರದಲ್ಲಿ ಆರು ದಿನ ಕಾರ್ಯನಿರ್ವಹಿಸಲಿದೆ. ರಾತ್ರಿ 8.10ಕ್ಕೆ ಮುಂಬೈನಿಂದ ಹೊರಡುವ ರೈಲು ಮರುದಿನ ಮಧ್ಯಾಹ್ನ 12 ಗಂಟೆಗೆ ಬೆಂಗಳೂರಿಗೆ ಆಗಮಿಸಲಿದೆ. ಎರಡೂ ಮಾರ್ಗಗಳಲ್ಲಿ ಅನಂತಪುರ, ಗುಂತಕಲ್, ರಾಯಚೂರು, ಯಾದಗಿರಿ, ಕಲಬುರಗಿ, ಸೋಲಾಪುರ, ಪುಣೆ ಮತ್ತು ಕಲ್ಯಾಣ್ ಪ್ರಮುಖ ನಿಲುಗಡೆಗಳಾಗಿವೆ.

16 ಬೋಗಿಗಳ ರೈಲು: ವಂದೇ ಭಾರತ್ ಸ್ಲೀಪರ್ ರೈಲಿನಲ್ಲಿ ಒಟ್ಟು 16 ಬೋಗಿಗಳಿದ್ದು, ಎಂಟು ಮೋಟಾರ್ ಕಾರ್, ನಾಲ್ಕು ಟ್ರೇಲರ್ ಕಾರ್, ಎರಡು ನಾನ್–ಡ್ರೈವಿಂಗ್ ಟ್ರೇಲರ್ ಕಾರ್ ಹಾಗೂ ಎರಡು ಡ್ರೈವಿಂಗ್ ಟ್ರೇಲರ್ ಕಾರ್ ಬೋಗಿಗಳನ್ನು ಒಳಗೊಂಡಿದೆ. ಈ ಹೊಸ ರೈಲು ಸೇವೆಯಿಂದ ಬೆಂಗಳೂರು ಮತ್ತು ಮುಂಬೈ ನಡುವಿನ ಪ್ರಯಾಣಿಕರಿಗೆ ರಾತ್ರಿ ವೇಳೆ ಆರಾಮದಾಯಕ ಪ್ರಯಾಣದ ಅವಕಾಶ ದೊರೆಯಲಿದ್ದು, ಕರ್ನಾಟಕ ಮತ್ತು ಮಹಾರಾಷ್ಟ್ರ ನಡುವಿನ ರೈಲು ಸಂಪರ್ಕವೂ ಮತ್ತಷ್ಟು ಸುಧಾರಿಸಲಿದೆ.

ಪತ್ರಿಕಾ ವಿತರಕರ ಕ್ಷೇಮನಿಧಿ ಸ್ಥಾಪನೆಗೆ ಸಿಎಂ ಗಮನ ಸೆಳೆಯುವೆ: ತ್ಯಾಗರಾಜ್

● ವಿಕ್ರಮ ವಾಹಿನಿ । ಬೆಂಗಳೂರು

ಪತ್ರಿಕಾ ವಿತರಕರ ಸಾಮಾಜಿಕ ಮತ್ತು ಆರ್ಥಿಕ ಭದ್ರತೆಗಾಗಿ ಕ್ಷೇಮನಿಧಿ ಸ್ಥಾಪಿಸುವಂತೆ ಮುಖ್ಯಮಂತ್ರಿಗಳ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳಲು ಪ್ರಯತ್ನಿಸುವುದಾಗಿ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ತ್ಯಾಗರಾಜ್ ಭರವಸೆ ನೀಡಿದರು.

ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟದ ನಿಯೋಗವು ತ್ಯಾಗರಾಜ್ ಅವರನ್ನು ಭೇಟಿ ಮಾಡಿ, ಪತ್ರಿಕಾ ವಿತರಕರ ವಿವಿಧ ಬೇಡಿಕೆಗಳ ಕುರಿತು ಚರ್ಚಿಸಿತು. ಈ ಸಂದರ್ಭದಲ್ಲಿ ಬೆಳಗಾವಿಯಲ್ಲಿ ನಡೆಯಲಿರುವ ಒಕ್ಕೂಟದ 6ನೇ ರಾಜ್ಯ ಸಮ್ಮೇಳನದ ಅಧಿಕೃತ ಲಾಂಛನವನ್ನು ಅವರು ಬಿಡುಗಡೆಗೊಳಿಸಿದರು.

ಒಕ್ಕೂಟದ ರಾಜ್ಯ ಉಪಾಧ್ಯಕ್ಷ ಪ್ರಶಾಂತ್ ಕುಮಾರ್ ಎನ್. ಮಾತನಾಡಿ, ಪತ್ರಿಕಾ ವಿತರಕರ ಸಾಮಾಜಿಕ ಮತ್ತು ಆರ್ಥಿಕ ಭದ್ರತೆಗಾಗಿ ಕ್ಷೇಮನಿಧಿ ಸ್ಥಾಪಿಸುವಂತೆ ಕಳೆದ ಆರು ವರ್ಷಗಳಿಂದ ಮನವಿ ಮಾಡಲಾಗುತ್ತಿದೆ. ಈ ಬಾರಿಯಾದರೂ ಸರ್ಕಾರ ಬೇಡಿಕೆಯನ್ನು ಈಡೇರಿಸಬೇಕು ಎಂದು ಒತ್ತಾಯಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಕ್ಷೇಮನಿಧಿ ಸ್ಥಾಪನೆಯ ಅಗತ್ಯವನ್ನು ವಿವರಿಸಿದರು. ಅನಾರೋಗ್ಯದಿಂದ ಬಳಲುತ್ತಿರುವ ಒಕ್ಕೂಟದ ರಾಜ್ಯಾಧ್ಯಕ್ಷ ಕೆ. ಶಂಭುಲಿಂಗ ಅವರಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ಆರ್ಥಿಕ ನೆರವು ನೀಡುವಂತೆಯೂ ಮನವಿ ಮಾಡಿದರು.

ನಿಯೋಗದ ಮನವಿಗೆ ಸ್ಪಂದಿಸಿದ ತ್ಯಾಗರಾಜ್, "ನಾನೂ ಮನೆಮನೆಗೆ ಪತ್ರಿಕೆ ಹಾಕಿ ಈ ಹಂತಕ್ಕೆ ಬಂದವನು. ಪತ್ರಿಕಾ ವಿತರಕರ ಕಷ್ಟಗಳು ನನಗೆ ತಿಳಿದಿವೆ. ನಿಮ್ಮ ಬೇಡಿಕೆಗಳನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಅಗತ್ಯ ಕ್ರಮ ಕೈಗೊಳ್ಳಲು ಪ್ರಯತ್ನಿಸುತ್ತೇನೆ. ಬೆಳಗಾವಿಯಲ್ಲಿ ನಡೆಯುವ ರಾಜ್ಯ ಸಮ್ಮೇಳನದಲ್ಲಿಯೂ ಭಾಗವಹಿಸುತ್ತೇನೆ" ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಸುರೇಶ್, ಕಾರ್ಯದರ್ಶಿಗಳಾದ ಜಗದೀಶ್ ಮತ್ತು ಗೋಪಾಲ್ ಉಪಸ್ಥಿತರಿದ್ದರು.

ಸಿದ್ದು ವಿಡಿಯೋ ಪ್ರಕರಣ: ಪೊಲೀಸರ ತನಿಖೆ ಬಗ್ಗೆಯೇ ಅನುಮಾನ

● ವಿಕ್ರಮ ವಾಹಿನಿ । ಬೆಂಗಳೂರು

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧದ ವಿವಾದಾತ್ಮಕ ವಿಡಿಯೋ ಪ್ರಕರಣವನ್ನು ಪೊಲೀಸರು ಕಟ್ಟುಕಥೆ ಎಂದು ಹೇಳಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ವಿಡಿಯೋದಲ್ಲಿ ಕಾಣಿಸಿಕೊಂಡಿರುವ ವ್ಯಕ್ತಿಗಳು ಹಾಗೂ ಅದನ್ನು ಸೃಷ್ಟಿಸಿದವರ ವಿರುದ್ಧ ಕ್ರಮ ಕೈಗೊಳ್ಳದಿರುವುದು ಸಾರ್ವಜನಿಕ ವಲಯದಲ್ಲಿ ಪ್ರಶ್ನೆಗಳನ್ನು ಹುಟ್ಟುಹಾಕಿದೆ.

ಸಿಸಿಬಿ ಸೈಬರ್ ಕ್ರೈಂ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣ ಸಂಖ್ಯೆ 56/2026ರ ತನಿಖೆಯಲ್ಲಿ ಸಂಗ್ರಹಿಸಿದ ಸಾಕ್ಷ್ಯಗಳು ಮತ್ತು ದಾಖಲಿಸಿಕೊಂಡ ಹೇಳಿಕೆಗಳ ಆಧಾರದಲ್ಲಿ ವಿಡಿಯೋದಲ್ಲಿನ ಆರೋಪಗಳು ಸುಳ್ಳು ಹಾಗೂ ಉದ್ದೇಶಪೂರ್ವಕವಾಗಿ ಸೃಷ್ಟಿಸಿದ ನಿರೂಪಣೆ ಎಂದು ಪೊಲೀಸರು ತಿಳಿಸಿದ್ದಾರೆ. ವಿಡಿಯೋದಲ್ಲಿ ಕಾಣಿಸಿಕೊಂಡ ಎಲ್ಲ ವ್ಯಕ್ತಿಗಳನ್ನು ಗುರುತಿಸಿ ವಿಚಾರಣೆ ನಡೆಸಲಾಗಿದೆ. ಕೆಲವರನ್ನು ಒಂದಕ್ಕಿಂತ ಹೆಚ್ಚು ಬಾರಿ ವಿಚಾರಣೆಗೊಳಪಡಿಸಲಾಗಿದೆ. ಈವರೆಗಿನ ತನಿಖೆಯಲ್ಲಿ ವಿಡಿಯೋದಲ್ಲಿ ಬಿಂಬಿಸಿರುವ ರೀತಿಯ ಯಾವುದೇ ಘಟನೆ ನಡೆದಿರುವುದಕ್ಕೆ ಸಾಕ್ಷ್ಯಗಳು ಲಭ್ಯವಾಗಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಆದರೆ, ವಿಡಿಯೋದಲ್ಲಿ ಮಾತನಾಡಿರುವ ಮತ್ತು ಅದನ್ನು ಚಿತ್ರೀಕರಿಸಿದ ವ್ಯಕ್ತಿಗಳ ವಿರುದ್ಧ ಏಕೆ ಕಾನೂನು ಕ್ರಮ ಕೈಗೊಂಡಿಲ್ಲ ಎಂಬ ಪ್ರಶ್ನೆ ಎದುರಾಗಿದೆ. ವಿಡಿಯೋದಲ್ಲಿನ ಸಂತ್ರಸ್ತ ಮಹಿಳೆಯನ್ನು ಪತ್ತೆಹಚ್ಚಿ ಹೇಳಿಕೆ ದಾಖಲಿಸಿಕೊಂಡಿದ್ದರೂ, ಆಕೆ ಸುಳ್ಳು ಹೇಳಿದ್ದರೆ ಅವರ ವಿರುದ್ಧ ಕ್ರಮ ಏಕೆ ಇಲ್ಲ ಎಂಬ ಅನುಮಾನವೂ ವ್ಯಕ್ತವಾಗಿದೆ.

ವಿಡಿಯೋ ಪ್ರಕರಣದ ಪ್ರಮುಖ ಸೂತ್ರಧಾರಿ ಎನ್ನಲಾದ ಕೃಪಾ ಆಳ್ವ ವಿದೇಶಕ್ಕೆ ತೆರಳಿರುವುದು, ಮಾಧ್ಯಮ ಸಂಸ್ಥೆಯ ಮುಖ್ಯಸ್ಥ ರಾಕೇಶ್ ಶೆಟ್ಟಿ ನಿರೀಕ್ಷಣಾ ಜಾಮೀನು ಪಡೆದಿರುವುದು ಹಾಗೂ ಅವರ ಜಾಮೀನು ಅರ್ಜಿಗೆ ಪೊಲೀಸರು ಪ್ರಬಲ ವಿರೋಧ ವ್ಯಕ್ತಪಡಿಸದಿರುವುದು ಕೂಡ ಚರ್ಚೆಗೆ ಗ್ರಾಸವಾಗಿದೆ.

2011ರಲ್ಲಿ ಸಿದ್ದರಾಮಯ್ಯ ವಿರುದ್ಧ ಸ್ಟಿಂಗ್ ಆಪರೇಷನ್ ನಡೆದಿತ್ತೇ ಅಥವಾ ಇಲ್ಲವೇ ಎಂಬುದನ್ನು ಪೊಲೀಸರು ಸ್ಪಷ್ಟಪಡಿಸಬೇಕಿದೆ. ಪ್ರಸ್ತುತ ಪ್ರಸಾರವಾಗಿರುವ ವಿಡಿಯೋವನ್ನು 2023ರಲ್ಲಿ ಚಿತ್ರೀಕರಿಸಲಾಗಿದೆ ಎನ್ನಲಾಗಿದ್ದು, ಅದನ್ನು ಚಿತ್ರೀಕರಿಸಿದ ಉದ್ದೇಶವೇನು? ಇಷ್ಟು ವರ್ಷಗಳ ಬಳಿಕ ಪ್ರಸಾರವಾಗಲು ಕಾರಣವೇನು? ಇದರ ಹಿಂದೆ ಯಾರಿದ್ದಾರೆ ಎಂಬುದರ ಕುರಿತು ಸಮಗ್ರ ತನಿಖೆ ನಡೆಯಬೇಕಿದೆ.

ಯೂಟ್ಯೂಬ್‌ನಲ್ಲಿ ವಿಡಿಯೋ ಅಪ್‌ಲೋಡ್ ಮಾಡಿದವರ ವಿರುದ್ಧ ಮಾತ್ರ ಕ್ರಮ ಕೈಗೊಳ್ಳುವುದರಿಂದ ಪ್ರಕರಣದ ಪೂರ್ಣ ಸತ್ಯ ಹೊರಬರುವುದಿಲ್ಲ.

ವಿಡಿಯೋ ಸೃಷ್ಟಿಸಿದವರು, ಚಿತ್ರೀಕರಣದಲ್ಲಿ ಭಾಗಿಯಾದವರು ಹಾಗೂ ಅದರ ಪ್ರಸಾರದ ಹಿಂದಿರುವವರ ಪಾತ್ರವನ್ನೂ ತನಿಖೆಗೊಳಪಡಿಸಬೇಕು ಎಂಬ ಒತ್ತಾಯ ಕೇಳಿಬಂದಿದೆ. ಪೊಲೀಸರ ತನಿಖಾ ವರದಿ ಸಿದ್ದರಾಮಯ್ಯ ಅವರ ವಿರುದ್ಧದ ಆರೋಪಗಳನ್ನು ತಳ್ಳಿಹಾಕಿದ್ದರೂ, ತನಿಖೆಯ ಪೂರ್ಣತೆ ಮತ್ತು ಪೊಲೀಸರ ಕ್ರಮಗಳ ಕುರಿತು ಇನ್ನಷ್ಟು ಸ್ಪಷ್ಟನೆ ಅಗತ್ಯವಾಗಿದೆ.

ರಾಜ್ಯೋತ್ಸವ ಹಿನ್ನೆಲೆಯಲ್ಲಿ ದೆಹಲಿ ಪ್ರತಿಭಟನೆಗೆ ಸಿಎಂ ಗೈರು

● ವಿಕ್ರಮ ವಾಹಿನಿ । ಬೆಂಗಳೂರು

ಕರ್ನಾಟಕ ರಾಜ್ಯೋತ್ಸವದ ಹಿನ್ನೆಲೆಯಲ್ಲಿ ನವೆಂಬರ್ 1ರಂದು ದೆಹಲಿಯಲ್ಲಿ ನಡೆಯಲಿರುವ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ವಿರುದ್ಧದ ಪ್ರತಿಭಟನೆಯಲ್ಲಿ ತಾವು ಹಾಗೂ ಸಚಿವ ಸಂಪುಟದ ಸಹೋದ್ಯೋಗಿಗಳು ಪಾಲ್ಗೊಳ್ಳುತ್ತಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಮಾತನಾಡಿದ ಅವರು, ರಾಜ್ಯೋತ್ಸವದಂದು ಜಿಲ್ಲಾ ಉಸ್ತುವಾರಿ ಸಚಿವರು ಆಯಾ ಜಿಲ್ಲೆಗಳಲ್ಲಿ ಧ್ವಜಾರೋಹಣ ನೆರವೇರಿಸಲಿದ್ದು, ಶಾಸಕರು ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ. ಪಕ್ಷದ ವತಿಯಿಂದ ಜಿಲ್ಲಾ ಮತ್ತು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಕಾರ್ಯಕರ್ತರು ದೆಹಲಿ ಪ್ರತಿಭಟನೆಯಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದರು.

ಗೃಹ ಸಚಿವ ಡಾ.ಜಿ. ಪರಮೇಶ್ವರ್ ಅನಾರೋಗ್ಯದಿಂದ ವಿಶ್ರಾಂತಿ ಪಡೆಯುತ್ತಿರುವ ಹಿನ್ನೆಲೆಯಲ್ಲಿ, ಅವರ ಬದಲಿಗೆ ಸಚಿವ ಕೃಷ್ಣ ಬೈರೇಗೌಡ ಧ್ವಜಾರೋಹಣ ನೆರವೇರಿಸಲಿದ್ದಾರೆ ಎಂದು ತಿಳಿಸಿದರು.

ವಾಟಾಳ್‌ಗೆ ರಾಜ್ಯೋತ್ಸವ ಪ್ರಶಸ್ತಿ ನೀಡುವ ಆಸೆ: ರಾಜ್ಯೋತ್ಸವ ಪ್ರಶಸ್ತಿಗಳನ್ನು ಆಚರಿಸುತ್ತಿರುವ ವರ್ಷದ ಸಂಖ್ಯೆಗೆ ಅನುಗುಣವಾಗಿ ನೀಡುವ ಸಂಪ್ರದಾಯವನ್ನು ಮುಂದುವರಿಸಲಾಗುವುದು. ಕನ್ನಡ ಹೋರಾಟಗಾರ ವಾಟಾಳ್ ನಾಗರಾಜ್ ಅವರ ಹೆಸರನ್ನು ಈ ಬಾರಿ ಪ್ರಶಸ್ತಿಗೆ ಅಂತಿಮಗೊಳಿಸಲಾಗಿತ್ತು.

ಹಾಲಿನ ದರ ಏರಿಕೆಯ 7 ರೂ. ರೈತರಿಗೆ: ಹಾಲಿನ ದರವನ್ನು 12 ರೂ. ಹೆಚ್ಚಿಸುವ ಬೇಡಿಕೆ ಇತ್ತು. ಆದರೆ, ಸರ್ಕಾರ 8 ರೂ. ಹೆಚ್ಚಿಸಿದೆ. ಇದರಲ್ಲಿ 1 ರೂ. ಒಕ್ಕೂಟಗಳ ನಿರ್ವಹಣೆಗೆ ಮೀಸಲಾಗಿದ್ದು, ಉಳಿದ 7 ರೂ. ರೈತರಿಗೆ ನೀಡಲಾಗುತ್ತಿದೆ. ನೆರೆಯ ರಾಜ್ಯಗಳಲ್ಲಿ ಹಾಲಿನ ದರ ಹೆಚ್ಚಿರುವುದರಿಂದ ಕರ್ನಾಟಕದ ಹಾಲು ಅಲ್ಲಿಗೆ ಸರಬರಾಜಾಗುತ್ತಿತ್ತು ಎಂದು ಸಮರ್ಥಿಸಿಕೊಂಡರು.

ಬೆಳೆ ಪರಿಹಾರಕ್ಕೆ ಸಂಬಂಧಿಸಿದಂತೆ ಸರ್ಕಾರದ ವ್ಯಾಪ್ತಿಯಲ್ಲಿರುವ ಎಲ್ಲ ಅವಕಾಶಗಳನ್ನು ಬಳಸಿಕೊಂಡು ರೈತರಿಗೆ ನೆರವು ನೀಡಲಾಗುವುದು. ಕಬ್ಬಿನ ಬೆಲೆ ವಿಚಾರದಲ್ಲಿ ಕೇಂದ್ರ ಸರ್ಕಾರ ಕೈಗೊಳ್ಳುವ ನಿರ್ಧಾರಕ್ಕೆ ಬದ್ಧರಾಗೋಣ. ರೈತರು, ಕಾರ್ಖಾನೆ ಮಾಲೀಕರು ತಾಳ್ಮೆಯಿಂದ ಸಹಕರಿಸಬೇಕು. ಸರ್ಕಾರ ರೈತರ ಪರವಾಗಿದೆ ಎಂದು ತಿಳಿಸಿದರು.

ಕುಡಿಯುವ ನೀರಿನ 12 ಘಟಕಗಳಿಗೆ ಬೀಗ

ಕಳಪೆ ಗುಣಮಟ್ಟದ ಕುಡಿಯುವ ನೀರು ಪೂರೈಕೆ ತಡೆಗೆ ರಾಜ್ಯಾದ್ಯಂತ ಆರೋಗ್ಯ ಇಲಾಖೆ ಕಾರ್ಯಾಚರಣೆ ಚುರುಕುಗೊಳಿಸಿದೆ. ಎರಡು ದಿನಗಳಲ್ಲಿ 102 ಘಟಕಗಳ ತಪಾಸಣೆ ನಡೆಸಿ, ಗಂಭೀರ ಲೋಪಗಳ ಹಿನ್ನೆಲೆಯಲ್ಲಿ 12 ಘಟಕಗಳಿಗೆ ಬೀಗ ಹಾಕಲಾಗಿದೆ. 53 ಘಟಕಗಳಿಗೆ ನೋಟಿಸ್ ಜಾರಿಗೊಳಿಸಲಾಗಿದೆ.

● ವಿಕ್ರಮ ವಾಹಿನಿ । ಬೆಂಗಳೂರು

ರಾಜ್ಯಾದ್ಯಂತ ಪ್ಯಾಕೇಜ್ಡ್ ಕುಡಿಯುವ ನೀರಿನ ಘಟಕಗಳ ವಿರುದ್ಧ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ನಡೆಸುತ್ತಿರುವ ವಿಶೇಷ ತಪಾಸಣಾ ಕಾರ್ಯಾಚರಣೆ ಮುಂದುವರಿದಿದ್ದು, ಎರಡು ದಿನಗಳಲ್ಲಿ 102 ಘಟಕಗಳನ್ನು ಪರಿಶೀಲಿಸಲಾಗಿದೆ. ಗಂಭೀರ ಲೋಪಗಳು ಕಂಡುಬಂದ 12 ಘಟಕಗಳನ್ನು ಮುಚ್ಚಿಸಲಾಗಿದ್ದು, 53 ಘಟಕಗಳಿಗೆ ನೋಟಿಸ್ ಜಾರಿ ಮಾಡಲಾಗಿದೆ.

ಆರೋಗ್ಯ ಸಚಿವ ಯು.ಟಿ. ಖಾದರ್ ಅವರ ಸೂಚನೆಯ ಮೇರೆಗೆ ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ವಿಭಾಗದ ಅಧಿಕಾರಿಗಳು ತಪಾಸಣೆ ನಡೆಸುತ್ತಿದ್ದಾರೆ. ಈ ಸಂದರ್ಭದಲ್ಲಿ ಒಟ್ಟು 69 ಕುಡಿಯುವ ನೀರಿನ ಮಾದರಿಗಳನ್ನು ಸಂಗ್ರಹಿಸಿ, ಗುಣಮಟ್ಟ ಪರಿಶೀಲನೆಗಾಗಿ ಸರ್ಕಾರಿ ಆಹಾರ ಪ್ರಯೋಗಾಲಯಗಳಿಗೆ ಕಳುಹಿಸಲಾಗಿದೆ.

ಹಾಸನದ ಸಂತೇಪೇಟೆಯ ಎಸ್.ಪಿ. ಫುಡ್ ಅಂಡ್ ಬೆವರೇಜಸ್, ಬೆಂಗಳೂರು ನಗರ ಜಿಲ್ಲೆಯ ಕುದುರೆಗೆರೆಯ ಅವಂತಿ ಇಂಡಸ್ಟ್ರೀಸ್ ಹಾಗೂ ಬೀದರಿನ ಸಾಯಿ ರಾಮ್ ಫುಡ್ ಬೆವರೇಜಸ್ ಘಟಕಗಳಲ್ಲಿ ತೀವ್ರ ಅನೈರ್ಮಲ್ಯ ಕಂಡುಬಂದ ಹಿನ್ನೆಲೆಯಲ್ಲಿ ಮುಚ್ಚಲಾಗಿದೆ. ಓಂ ಶಕ್ತಿ ಮಿನರಲ್ಸ್,

ಮೈಸೂರು ಗ್ರಾಮಾಂತರ ಜಿಲ್ಲೆಯ ಡಾಲಿಯಾ ಬೆವರೇಜಸ್ ಹಾಗೂ ಕಲಬುರಗಿ ಜಿಲ್ಲೆಯ ಆಕ್ವಾ ರಿಫ್ರೆಶ್ ಘಟಕಗಳಲ್ಲಿ ಪರವಾನಗಿ ಕೊರತೆ ಮತ್ತು ತನಿಖೆಗೆ ಅಸಹಕಾರ ಸೇರಿದಂತೆ ವಿವಿಧ ಕಾರಣಗಳಿಂದ ಕ್ರಮ ಕೈಗೊಳ್ಳಲಾಗಿದೆ. ನಂದಿ ಫುಡ್ ಅಂಡ್ ಬೆವರೇಜಸ್ ಘಟಕದಲ್ಲಿಯೂ ಅನೈರ್ಮಲ್ಯ ಹಾಗೂ ಪರವಾನಗಿ ಕೊರತೆ ಕಂಡುಬಂದಿದೆ.

ದೇವನಹಳ್ಳಿ ತಾಲೂಕಿನ ವಿಜಯಪುರದ ಎಂ.ಎಸ್. ಫುಡ್ ಅಂಡ್ ಬೆವರೇಜಸ್ ಘಟಕದಲ್ಲಿ ಲೇಬಲಿಂಗ್ ದೋಷ ಪತ್ತೆಯಾದ ಹಿನ್ನೆಲೆಯಲ್ಲಿ 1 ಲೀಟರ್ ಸಾಮರ್ಥ್ಯದ ಪ್ಯಾಕೇಜ್ಡ್ ನೀರಿನ 82 ಕೇಸುಗಳನ್ನು ವಶಪಡಿಸಿಕೊಳ್ಳಲಾಗಿದೆ. ಇವುಗಳ ಮೌಲ್ಯ 7,380 ರೂ. ಎಂದು ಇಲಾಖೆ ತಿಳಿಸಿದೆ.

ತಪಾಸಣೆ ವೇಳೆ ಕೆಲವು ಘಟಕಗಳಲ್ಲಿ ಸ್ವಚ್ಛತೆಯ ಕೊರತೆ, ಆಹಾರ ನಿರ್ವಹಣಾ ಸಿಬ್ಬಂದಿಗೆ ಅಗತ್ಯ ವೈದ್ಯಕೀಯ ಪ್ರಮಾಣಪತ್ರ ಇಲ್ಲದಿರುವುದು, ಲೇಬಲಿಂಗ್ ದೋಷ, ವಿಶ್ಲೇಷಣಾ ವರದಿ ಹಾಗೂ ಕೀಟ ನಿಯಂತ್ರಣ ಪ್ರಮಾಣಪತ್ರಗಳ ಕೊರತೆ ಕಂಡುಬಂದಿದೆ.

ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆ–2006 ಹಾಗೂ ಸಂಬಂಧಿತ ನಿಯಮಗಳ ಉಲ್ಲಂಘನೆಗೆ ಸಂಬಂಧಿಸಿದಂತೆ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು. ಸಾರ್ವಜನಿಕ ಆರೋಗ್ಯದ ಹಿತದೃಷ್ಟಿಯಿಂದ ಇಂತಹ ಘಟಕಗಳ ವಿರುದ್ಧ ನಿರಂತರ ತಪಾಸಣೆ ನಡೆಸಿ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ ಇಲಾಖೆ ಆಯುಕ್ತರು ತಿಳಿಸಿದ್ದಾರೆ.

ನಿಯಮಬಾಹಿರವಾಗಿ ಕಾರ್ಯನಿರ್ವಹಿಸುವ ಘಟಕಗಳ ವಿರುದ್ಧ ಯಾವುದೇ ಮುಲಾಜಿಲ್ಲದೆ ಕ್ರಮ ಜರುಗಿಸಲಾಗುವುದು ಎಂದು ಇಲಾಖೆ ಎಚ್ಚರಿಕೆ ನೀಡಿದೆ.

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

2047ರ ಕರ್ನಾಟಕ ಅಭಿವೃದ್ಧಿಗೆ ದೂರದೃಷ್ಟಿಯ ಮಹಾಯೋಜನೆ: ಸಿಎಂ

2047ರ ಸಮಗ್ರ ಅಭಿವೃದ್ಧಿಗೆ ದೂರದೃಷ್ಟಿಯ ಯೋಜನೆ ರೂಪಿಸಲಾಗಿದ್ದು, ನಗರಗಳ ಆರ್ಥಿಕ ಬೆಳವಣಿಗೆಯ ಲಾಭ ಗ್ರಾಮೀಣ ಪ್ರದೇಶಗಳಿಗೂ ತಲುಪಿಸುವುದು ಸರ್ಕಾರದ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಸ್ಥಳೀಯ ಮಟ್ಟದಲ್ಲೇ ಉದ್ಯೋಗ ಸೃಷ್ಟಿ, ಕೈಗಾರಿಕೆಗಳ ವಿಸ್ತರಣೆ ಹಾಗೂ ಕೃಷಿ ಉತ್ಪನ್ನಗಳ ರಫ್ತಿಗೆ ಆದ್ಯತೆ ನೀಡುವ ಮೂಲಕ ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಗೆ ಯೋಜನೆ ರೂಪಿಸಲಾಗುತ್ತಿದೆ ಎಂದರು.

● ವಿಕ್ರಮ ವಾಹಿನಿ | ಬೆಂಗಳೂರು

ಬೆಂಗಳೂರು ಸೇರಿದಂತೆ ರಾಜ್ಯದ ಎಲ್ಲ ನಗರಗಳು ಆರ್ಥಿಕವಾಗಿ ಬಲಿಷ್ಠವಾಗಬೇಕು. ನಗರಗಳ ಬೆಳವಣಿಗೆಯಿಂದ ಪಟ್ಟಣಗಳು ಅಭಿವೃದ್ಧಿಯಾಗಬೇಕು, ಪಟ್ಟಣಗಳ ಅಭಿವೃದ್ಧಿಯಿಂದ ಗ್ರಾಮೀಣ ಪ್ರದೇಶಗಳ ಬದುಕು ಸಮೃದ್ಧವಾಗಬೇಕು ಎಂಬುದು ಸರ್ಕಾರದ ಅಭಿವೃದ್ಧಿಯ ಚಿಂತನೆಯಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಶುಕ್ರವಾರ 'ಕರ್ನಾಟಕ ರಾಜ್ಯ ಪ್ರಾದೇಶಿಕ ನಗರೀಕರಣ ಯೋಜನೆ-2047'ರ ವರದಿ ಬಿಡುಗಡೆ ಮಾಡಿ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದ ಅವರು, ಮುಂದಿನ ಪೀಳಿಗೆಯ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ರಾಜ್ಯದ ಸಮಗ್ರ ಅಭಿವೃದ್ಧಿಗೆ ದೂರದೃಷ್ಟಿಯ ಯೋಜನೆ ರೂಪಿಸುವ ಅಗತ್ಯವಿದೆ ಎಂದರು.

ರಾಜ್ಯದ ಜನಸಂಖ್ಯೆ ಪ್ರಸ್ತುತ ಸುಮಾರು 6.9 ಕೋಟಿಯಿದ್ದು, 2047ರ ವೇಳೆಗೆ 7.7ರಿಂದ 7.8 ಕೋಟಿಗೆ ಏರಿಕೆಯಾಗುವ ನಿರೀಕ್ಷೆಯಿದೆ. ಸದ್ಯ ಶೇ.46ರಷ್ಟಿರುವ ನಗರವಾಸಿಗಳ ಪ್ರಮಾಣ 2047ರ ವೇಳೆಗೆ ಶೇ.70ಕ್ಕೆ ತಲುಪಬಹುದು. ಇದಕ್ಕೆ ಈಗಿನಿಂದಲೇ ಸಿದ್ಧತೆ ಮಾಡಿಕೊಳ್ಳದಿದ್ದರೆ ನಗರಗಳ ಮೇಲೆ ಮೂಲಸೌಕರ್ಯದ ಒತ್ತಡ ಹೆಚ್ಚಾಗಲಿದೆ ಎಂದು ಎಚ್ಚರಿಸಿದರು.

ಸ್ಥಳೀಯವಾಗಿಯೇ ಉದ್ಯೋಗ ಸೃಷ್ಟಿ: ಶಿಕ್ಷಣ ಮತ್ತು ಉದ್ಯೋಗಕ್ಕಾಗಿ ಗ್ರಾಮೀಣ ಪ್ರದೇಶಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ನಗರಗಳಿಗೆ ವಲಸೆ ಬರುತ್ತಿದ್ದಾರೆ. ಎಲ್ಲರೂ ಬೆಂಗಳೂರಿನತ್ತ ಮುಖ ಮಾಡಿದರೆ ನಗರದ ಜನಸಂಖ್ಯೆ, ಸಂಚಾರ ದಟ್ಟಣೆ ಹಾಗೂ ವಸತಿ ಸಮಸ್ಯೆಗಳು ಹೆಚ್ಚಾಗುತ್ತವೆ. ಹೀಗಾಗಿ ಜನರು ತಮ್ಮ ಊರು, ತಾಲೂಕು ಮತ್ತು ಜಿಲ್ಲೆಗಳಲ್ಲಿಯೇ ಉದ್ಯೋಗ ಪಡೆಯುವ ವಾತಾವರಣ ನಿರ್ಮಿಸಬೇಕು. ರಾಜ್ಯದ ಎಲ್ಲ ಪ್ರದೇಶಗಳಲ್ಲೂ ಕೈಗಾರಿಕೆ ಮತ್ತು ಉದ್ಯೋಗಾವಕಾಶಗಳನ್ನು ಹೆಚ್ಚಿಸುವುದು ಯೋಜನೆಯ ಪ್ರಮುಖ ಉದ್ದೇಶವಾಗಿದೆ ಎಂದರು.



ಬೆಂಗಳೂರು ನಗರವೊಂದರ ಜನಸಂಖ್ಯೆ ಹಿಂದೆ ಸುಮಾರು 70 ಲಕ್ಷವಿದ್ದರೆ, ಈಗ 1.40 ಕೋಟಿಗೆ ಏರಿಕೆಯಾಗಿದೆ. ವಾಹನಗಳ ಸಂಖ್ಯೆಯೂ ಸುಮಾರು 1.35 ಕೋಟಿಯಷ್ಟಿದೆ. ಆದರೆ ಜನಸಂಖ್ಯೆ ಮತ್ತು ವಾಹನಗಳ ಬೆಳವಣಿಗೆಗೆ ಅನುಗುಣವಾಗಿ ರಸ್ತೆ ಸೇರಿದಂತೆ ಮೂಲಸೌಕರ್ಯ ವಿಸ್ತರಣೆಯಾಗಿಲ್ಲ. ರಾಜ್ಯದಲ್ಲಿ ರಸ್ತೆ ಪ್ರಮಾಣ ಶೇ.8ರಷ್ಟಿದ್ದು, ಸಾಮಾನ್ಯವಾಗಿ ಶೇ.18ರಷ್ಟು ಇರಬೇಕೆಂಬ ಹೋಲಿಕೆಯಿದೆ ಎಂದು ತಿಳಿಸಿದರು.

ನಗರಗಳ ಆದಾಯ ಗ್ರಾಮೀಣ ಅಭಿವೃದ್ಧಿಗೆ ಬಳಕೆ

ಬೆಂಗಳೂರು ಐಟಿ, ಬಿಟಿ ಸೇರಿದಂತೆ ವಿವಿಧ ಉದ್ಯಮಗಳ ಪ್ರಮುಖ ಕೇಂದ್ರವಾಗಿದೆ. ನಗರ ಪ್ರದೇಶಗಳಲ್ಲಿ ಆದಾಯ ತೆರಿಗೆ, ಜಿಎಸ್‌ಟಿ ಸೇರಿದಂತೆ ವಿವಿಧ ಮೂಲಗಳಿಂದ ಸೃಷ್ಟಿಯಾಗುವ ಆರ್ಥಿಕ ಸಂಪನ್ಮೂಲವನ್ನು ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೂ ಬಳಸಬೇಕು. ನಗರಗಳ ಆರ್ಥಿಕ ಬೆಳವಣಿಗೆಯ ಲಾಭ ಇಡೀ ರಾಜ್ಯಕ್ಕೆ ತಲುಪಬೇಕು ಎಂದರು.

ನಗರವಾರು ಕೈಗಾರಿಕೆಗಳಿಗೆ ಆದ್ಯತೆ: ಪ್ರತಿಯೊಂದು ಪ್ರದೇಶದ ಸಾಮರ್ಥ್ಯಕ್ಕೆ ಅನುಗುಣವಾಗಿ ಕೈಗಾರಿಕೆಗಳನ್ನು ಬೆಳೆಸುವ ಉದ್ದೇಶವಿದೆ. ಬಳ್ಳಾರಿಯಲ್ಲಿ ಕಬ್ಬಿಣದ ಅದಿರು ಆಧಾರಿತ ಉಕ್ಕು ಉದ್ಯಮ, ಹುಬ್ಬಳ್ಳಿ-ಧಾರವಾಡದಲ್ಲಿ ವಿದ್ಯುತ್ ವಾಹನಗಳ ಉತ್ಪಾದನೆ ಹಾಗೂ ಮಂಗಳೂರಿನಲ್ಲಿ ದತ್ತಾಂಶ ಕೇಂದ್ರ ಸ್ಥಾಪನೆಗೆ ಅವಕಾಶ ಕಲ್ಪಿಸುವ ಚಿಂತನೆಯಿದೆ. ಕರಾವಳಿ ಮತ್ತು ಮಲೆನಾಡು ಪ್ರದೇಶಗಳಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಹೊಸ ನೀತಿ ರೂಪಿಸಲಾಗುತ್ತಿದೆ ಎಂದು ಹೇಳಿದರು.

ಕೃಷಿ ಮತ್ತು ತೋಟಗಾರಿಕೆ ಉತ್ಪನ್ನಗಳಿಗೆ ಜಾಗತಿಕ ಮಾರುಕಟ್ಟೆ ಕಲ್ಪಿಸುವ ಅಗತ್ಯವಿದೆ. ಹಣ್ಣು, ತರಕಾರಿ, ಹೂವು, ಕಾಫಿ, ರೇಷ್ಮೆ ಸೇರಿದಂತೆ ವಿವಿಧ ಉತ್ಪನ್ನಗಳ ಸಂಸ್ಕರಣೆ, ಮೌಲ್ಯವರ್ಧನೆ, ಸಂಗ್ರಹಣೆ ಮತ್ತು ರಫ್ತಿಗೆ ಸೂಕ್ತ ವ್ಯವಸ್ಥೆ ರೂಪಿಸಬೇಕು ಎಂದರು.

ವಿದ್ಯುತ್ ಬೇಡಿಕೆ ಶೇ.10-12ರಷ್ಟು ಹೆಚ್ಚಳ

ರಾಜ್ಯದಲ್ಲಿ ಪ್ರತಿ ವರ್ಷ ವಿದ್ಯುತ್ ಬೇಡಿಕೆ ಶೇ.10ರಿಂದ 12ರಷ್ಟು ಹೆಚ್ಚುತ್ತಿದೆ. ಇಂಧನ ಸಚಿವರಾಗಿದ್ದ ಸಂದರ್ಭದಲ್ಲಿ ಸುಮಾರು 12 ಸಾವಿರ ಮೆಗಾವಾಟ್ ವಿದ್ಯುತ್ ಸಾಮರ್ಥ್ಯ ಹೆಚ್ಚಿಸುವ ಪ್ರಯತ್ನ ಮಾಡಲಾಗಿತ್ತು. ಪಾವಗಡದಲ್ಲಿ ರೈತರ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳದೆ ಗುತ್ತಿಗೆ ಆಧಾರದಲ್ಲಿ ಪಡೆದು ಸೋಲಾರ್ ಪಾರ್ಕ್ ನಿರ್ಮಿಸಲಾಗಿದ್ದು, ರೈತರಿಗೆ ಆದಾಯ ಹಾಗೂ ಸರ್ಕಾರಕ್ಕೆ ವಿದ್ಯುತ್ ಲಭ್ಯವಾಗುತ್ತಿದೆ ಎಂದು ವಿವರಿಸಿದರು.

ಅಧಿಕಾರಿಗಳು ವೈಯಕ್ತಿಕ ಹಿತಾಸಕ್ತಿಗಿಂತ ಸಮಾಜದ ಹಿತಕ್ಕೆ ಆದ್ಯತೆ ನೀಡಬೇಕು. ಜನರು ತಮ್ಮ ಸಮಸ್ಯೆಗಳಿಗೆ ಪರಿಹಾರ ಕೋರಿ ಸರ್ಕಾರಿ ಕಚೇರಿಗಳಿಗೆ ಬರುತ್ತಾರೆ. ಅವರ ಸಮಸ್ಯೆಗಳನ್ನು ಮಾನವೀಯವಾಗಿ ಆಲಿಸಿ, ನೆಮ್ಮದಿಯಿಂದ ಹಿಂದಿರುಗುವಂತೆ ಪರಿಹಾರ ಒದಗಿಸಬೇಕು.

ಸರ್ಕಾರಿ ಕೆಲಸವನ್ನು ಸಮಾಜಕ್ಕೆ ಸೇವೆ ಸಲ್ಲಿಸುವ ಅವಕಾಶವೆಂದು ಪರಿಗಣಿಸಬೇಕು ಎಂದು ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಸಚಿವ ಯತೀಂದ್ರ ಸಿದ್ದರಾಮಯ್ಯ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಸಿಬಿಎಸ್‌ಇ 9, 10ನೇ ತರಗತಿ ಪಠ್ಯಕ್ರಮದಲ್ಲಿ ಬದಲಾವಣೆ

● ವಿಕ್ರಮ ವಾಹಿನಿ | ನವದೆಹಲಿ

ಕೇಂದ್ರೀಯ ಪ್ರೌಢಶಿಕ್ಷಣ ಮಂಡಳಿ (ಸಿಬಿಎಸ್‌ಇ) 2026-27ನೇ ಶೈಕ್ಷಣಿಕ ವರ್ಷದಿಂದ 9 ಮತ್ತು 10ನೇ ತರಗತಿಗಳ ಪಠ್ಯಕ್ರಮದಲ್ಲಿ ಮಹತ್ವದ ಬದಲಾವಣೆಗಳನ್ನು ಪ್ರಕಟಿಸಿದೆ. ಪ್ರಸ್ತುತ 9ನೇ ತರಗತಿಯಲ್ಲಿರುವ ವಿದ್ಯಾರ್ಥಿಗಳಿಗೆ 'ಇಂಡಿವಿಜುವಲ್ಸ್ ಇನ್ ಸೊಸೈಟಿ' ಮತ್ತು 'ಸಿಟಿ ಅಂಡ್ ಎಐ' ವಿಷಯಗಳನ್ನು ಕೈಬಿಡಲಾಗಿದ್ದು, ಮುಂದಿನ ವರ್ಷ 10ನೇ ತರಗತಿಗೆ ಬಂದಾಗ 'ಪರಿಸರ ಶಿಕ್ಷಣ' ವಿಷಯವೂ ಇರುವುದಿಲ್ಲ ಎಂದು ಮಂಡಳಿ ಸುತ್ತೋಲೆಯಲ್ಲಿ ತಿಳಿಸಿದೆ.

ಈ ಬದಲಾವಣೆಗಳು 2026-27ನೇ ಶೈಕ್ಷಣಿಕ ವರ್ಷದಲ್ಲಿ 9ನೇ ತರಗತಿಯಲ್ಲಿರುವ ಹಾಗೂ 2027-28ರಲ್ಲಿ 10ನೇ ತರಗತಿಗೆ ಪ್ರವೇಶ ಪಡೆಯಲಿರುವ ವಿದ್ಯಾರ್ಥಿಗಳಿಗೆ ಅನ್ವಯಿಸಲಿವೆ. ಪಠ್ಯಕ್ರಮದ ಪರಿಷ್ಕರಣೆಯ ಹಿನ್ನೆಲೆಯಲ್ಲಿ ಈ ಮೂರು ವಿಷಯಗಳನ್ನು ಕೈಬಿಡಲು ನಿರ್ಧರಿಸಲಾಗಿದೆ.

ಆದರೆ, ವೃತ್ತಿಪರ ಶಿಕ್ಷಣವನ್ನು ಕಡ್ಡಾಯವಾಗಿ ಮುಂದುವರಿಸಲಾಗಿದೆ. ವಿದ್ಯಾರ್ಥಿಗಳು 'ಕೌಶಲ್ಯ ಅಭಿವೃದ್ಧಿ' ವಿಷಯ ಅಥವಾ ಮಂಡಳಿ ಸೂಚಿಸಿರುವ 22 ಕೌಶಲ್ಯ ಆಧಾರಿತ ವಿಷಯಗಳಲ್ಲಿ ಒಂದನ್ನು ಆಯ್ಕೆ ಮಾಡಿಕೊಳ್ಳಬೇಕು.

ಮೌಲ್ಯಮಾಪನದಲ್ಲಿ ವ್ಯತ್ಯಾಸ: ಕೌಶಲ್ಯ ಅಭಿವೃದ್ಧಿ ವಿಷಯ ಆಯ್ಕೆ ಮಾಡಿಕೊಂಡವರಿಗೆ ಶಾಲಾ ಮಟ್ಟದಲ್ಲೇ ಆಂತರಿಕ ಮೌಲ್ಯಮಾಪನ ನಡೆಯಲಿದೆ. ಇದಕ್ಕೆ ಪ್ರತ್ಯೇಕ ಮಂಡಳಿ ಪರೀಕ್ಷೆ ಇರುವುದಿಲ್ಲ. 22 ಕೌಶಲ್ಯ ಆಧಾರಿತ ವಿಷಯಗಳಲ್ಲಿ ಒಂದನ್ನು ಆಯ್ಕೆ ಮಾಡಿಕೊಂಡವರು 10ನೇ ತರಗತಿಯ ಮಂಡಳಿ ಪರೀಕ್ಷೆಯಲ್ಲಿ ಅದಕ್ಕೆ ಸಂಬಂಧಿಸಿದ ಪರೀಕ್ಷೆ ಬರೆಯಬೇಕಾಗುತ್ತದೆ.

2025-26ನೇ ಶೈಕ್ಷಣಿಕ ಯೋಜನೆಯಲ್ಲಿ ಸೇರಿಸಲಾಗಿರುವ ಇತರ ಎಲ್ಲ ಐಚ್ಛಿಕ ವಿಷಯಗಳು 9 ಮತ್ತು 10ನೇ ತರಗತಿಗಳಿಗೆ ಹಿಂದಿನಂತೆಯೇ ಮುಂದುವರಿಯಲಿವೆ. ಹೊಸ ಬದಲಾವಣೆಗಳ ಕುರಿತು ವಿದ್ಯಾರ್ಥಿಗಳು, ಪೋಷಕರು ಹಾಗೂ ಶಿಕ್ಷಕರಿಗೆ ಮಾಹಿತಿ ನೀಡುವಂತೆ ಸಿಬಿಎಸ್‌ಇ ತನ್ನ ವ್ಯಾಪ್ತಿಯ ಎಲ್ಲ ಶಾಲೆಗಳ ಪ್ರಾಂಶುಪಾಲರಿಗೆ ಸೂಚಿಸಿದೆ. ಪಠ್ಯಕ್ರಮ ಮತ್ತು ಮೌಲ್ಯಮಾಪನದ ಹೆಚ್ಚಿನ ವಿವರಗಳಿಗಾಗಿ ಅಧ್ಯಯನ ಯೋಜನೆ ಹಾಗೂ ಪದೇಪದೆ ಕೇಳಲಾಗುವ ಪ್ರಶ್ನೆಗಳ ದಾಖಲೆಯನ್ನು ಪರಿಶೀಲಿಸುವಂತೆಯೂ ತಿಳಿಸಿದೆ.

ಬಿಡದಿ ಟೌನ್‌ಶಿಪ್: 7,351 ಎಕರೆಗೆ ಅಂತಿಮ ಅಧಿಸೂಚನೆ

● ವಿಕ್ರಮ ವಾಹಿನಿ | ರಾಮನಗರ

ರೈತರ ತೀವ್ರ ವಿರೋಧದ ನಡುವೆಯೂ ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ ಮೂರನೇ ಹಂತದ ಅಂತಿಮ ಅಧಿಸೂಚನೆ ಪ್ರಕಟಿಸಲಾಗಿದೆ. ರಾಮನಗರ ತಾಲೂಕಿನ ಕಂಚಗಾರನಹಳ್ಳಿ ಮತ್ತು ಬೈರಮಂಗಲ ಗ್ರಾಮಗಳ ಒಟ್ಟು 1,895 ಎಕರೆ ಭೂಮಿಯನ್ನು ಅಧಿಸೂಚನೆ ವ್ಯಾಪ್ತಿಗೆ ಸೇರಿಸಲಾಗಿದೆ. ಇದರೊಂದಿಗೆ ಯೋಜನೆಗಾಗಿ ಒಟ್ಟು 7,351 ಎಕರೆ ಭೂಮಿಗೆ ಅಂತಿಮ ಅಧಿಸೂಚನೆ ಹೊರಡಿಸಿದಂತಾಗಿದೆ.

ಮೂರನೇ ಹಂತದಲ್ಲಿ ಕಂಚಗಾರನಹಳ್ಳಿಯ 753 ಎಕರೆ ಹಾಗೂ ಬೈರಮಂಗಲದ 1,142 ಎಕರೆ ಭೂಮಿ ಸೇರಿದೆ. ಇದಕ್ಕೂ ಮೊದಲು ಜೂನ್ 11ರಂದು ಮೊದಲ ಹಂತದಲ್ಲಿ ಕೆಂಪಯ್ಯನಪಾಳ್ಯ, ವಡೇರಹಳ್ಳಿ ಮತ್ತು ಮಂಡಲಹಳ್ಳಿ ಗ್ರಾಮಗಳ 516 ಎಕರೆಗೆ ಅಧಿಸೂಚನೆ ಪ್ರಕಟಿಸಲಾಗಿತ್ತು.

ಎರಡನೇ ಹಂತದಲ್ಲಿ ಕೆ.ಜಿ. ಗೊಲ್ಲರಪಾಳ್ಯ, ಬನ್ನಿಗಿರಿ, ಅರಳಾಳುಸಂದ್ರ ಮತ್ತು ಹೊಸೂರು ಗ್ರಾಮಗಳ ಒಟ್ಟು 4,940 ಎಕರೆಗೆ ಅಂತಿಮ ಅಧಿಸೂಚನೆ ಹೊರಡಿಸಲಾಗಿತ್ತು. ಈ ಹಂತದಲ್ಲಿ 1,280 ರೈತರು ಸ್ವಯಂಪ್ರೇರಿತರಾಗಿ ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಿದ್ದು, 816 ರೈತರಿಗೆ ಪರಿಹಾರ ಮತ್ತು ನಿವೇಶನಗಳನ್ನು ವಿತರಿಸಲಾಗಿದೆ.

1,800 ಕೋಟಿ ರೂ. ಪರಿಹಾರ ವಿತರಣೆ: ಬಿಡದಿ ಟೌನ್‌ಶಿಪ್ ಯೋಜನೆಗೆ ಸಂಬಂಧಿಸಿದಂತೆ ಜಿಬಿಡಿಎ ಒಟ್ಟು 1,800 ಕೋಟಿ ರೂ. ಪರಿಹಾರ ನೀಡಿದೆ. ಈ ಪೈಕಿ 816 ರೈತರ ಖಾತೆಗಳಿಗೆ 1,236 ಕೋಟಿ ರೂ. ನಗದು ರೂಪದಲ್ಲಿ ಜಮೆ ಮಾಡಲಾಗಿದೆ. ಉಳಿದಂತೆ 250 ಎಕರೆ ಭೂಮಿಗೆ ಪ್ರತಿಯಾಗಿ 564 ಕೋಟಿ ರೂ. ಮೌಲ್ಯದ ನಿವೇಶನಗಳನ್ನು ನೀಡಲಾಗಿದೆ.

ರೈತರ ವಿರೋಧದ ನಡುವೆಯೇ ಸರ್ಕಾರ ಮೂರನೇ ಹಂತದ ಅಧಿಸೂಚನೆ ಪ್ರಕಟಿಸಿರುವುದು ಯೋಜನೆಯ ಭೂಸ್ವಾಧೀನ ಪ್ರಕ್ರಿಯೆಗೆ ಮತ್ತಷ್ಟು ವೇಗ ನೀಡಿದೆ.

ಯೋಜನೆಯಡಿ ಭೂಮಿ ಕಳೆದುಕೊಳ್ಳುವ ರೈತರಿಗೆ ಪರಿಹಾರ ಮತ್ತು ಪರ್ಯಾಯ ನಿವೇಶನ ವಿತರಿಸುವ ಪ್ರಕ್ರಿಯೆಯನ್ನು ಜಿಬಿಡಿಎ ಮುಂದುವರಿಸಿದೆ. ಸ್ವಯಂಪ್ರೇರಿತವಾಗಿ ಪರಿಹಾರ ಪಡೆಯಲು ಮುಂದೆ ಬಂದಿರುವ ರೈತರಿಗೆ ಆದ್ಯತೆ ನೀಡಲಾಗುತ್ತಿದ್ದು, ಉಳಿದ ರೈತರ ಮನವೊಲಿಕೆ ಹಾಗೂ ಭೂಸ್ವಾಧೀನಕ್ಕೆ ಸಂಬಂಧಿಸಿದ ಮುಂದಿನ ಕ್ರಮಗಳ ಬಗ್ಗೆ ಅಧಿಕಾರಿಗಳು ಗಮನಹರಿಸಿದ್ದಾರೆ. ಮೂರನೇ ಹಂತದ ಅಧಿಸೂಚನೆ ಪ್ರಕಟವಾಗಿರುವುದರಿಂದ ಯೋಜನೆಗೆ ಒಳಪಡುವ ಗ್ರಾಮಗಳಲ್ಲಿ ಭೂಸ್ವಾಧೀನ ಪ್ರಕ್ರಿಯೆ ಮತ್ತಷ್ಟು ಚುರುಕುಗೊಳ್ಳುವ ಸಾಧ್ಯತೆಯಿದೆ.

ಮೈತ್ರಿ ಬಲವರ್ಧನೆಗೆ ಒಗ್ಗಟ್ಟಿನ ಹೋರಾಟ: ಯಡಿಯೂರಪ್ಪ

ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ; ಬಿಜೆಪಿ-ಜೆಡಿಎಸ್ ಮೈತ್ರಿ ಮುಂದುವರಿಸುವ ವಿಶ್ವಾಸ

● ವಿಕ್ರಮ ವಾಹಿನಿ | ಬೆಂಗಳೂರು

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರನ್ನು ಭೇಟಿ ಮಾಡಿ ರಾಜ್ಯದ ಪ್ರಚಲಿತ ರಾಜಕೀಯ ವಿದ್ಯಮಾನಗಳು, ಕಾಂಗ್ರೆಸ್ ಸರ್ಕಾರದ ಆಡಳಿತ ಹಾಗೂ ಮುಂಬರುವ ರಾಜಕೀಯ ಬೆಳವಣಿಗೆಗಳ ಕುರಿತು ಸುದೀರ್ಘ ಚರ್ಚೆ ನಡೆಸಿರುವುದಾಗಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ತಿಳಿಸಿದರು.

ದೇವೇಗೌಡರು ರಾಜ್ಯದ ರಾಜಕೀಯ ಪರಿಸ್ಥಿತಿ ಕುರಿತು ಹಲವು ಮಹತ್ವದ ಸಲಹೆಗಳನ್ನು ನೀಡಿದ್ದಾರೆ. ಕರ್ನಾಟಕದಲ್ಲಿ ಉತ್ತಮ ಆಡಳಿತ ಮತ್ತು ರಾಜಕೀಯ ಸ್ಥಿರತೆ ನೆಲೆಸಬೇಕು ಎಂಬುದು ಎಲ್ಲರ ಆಶಯವಾಗಿದೆ. ಕಾಂಗ್ರೆಸ್ ಸರ್ಕಾರದ ಆಡಳಿತದ ಬಗ್ಗೆಯೂ ದೇವೇಗೌಡರಿಗೆ ಅಸಮಾಧಾನವಿದ್ದು, ಸರ್ಕಾರವನ್ನು ಅಧಿಕಾರದಿಂದ ಕೆಳಗಿಳಿಸಲು ಒಗ್ಗಟ್ಟಿನಿಂದ ಶ್ರಮಿಸಬೇಕೆಂಬ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ. ಅವರ ಸಲಹೆಗಳು ತಮ್ಮ ಅಭಿಪ್ರಾಯಕ್ಕೂ ಪೂರಕವಾಗಿವೆ. ಅರ್ಧ ಗಂಟೆಗೂ ಹೆಚ್ಚು ಕಾಲ ವಿವಿಧ ವಿಚಾರಗಳ ಕುರಿತು ಚರ್ಚೆ ನಡೆಸಿದ್ದೇವೆ ಎಂದರು.

ಮೈತ್ರಿ ಬಲಪಡಿಸುವ ಚರ್ಚೆ: ಮುಂಬರುವ ಚುನಾವಣೆಗಳ ಹಿನ್ನೆಲೆಯಲ್ಲಿ ಬಿಜೆಪಿ-ಜೆಡಿಎಸ್ ಮೈತ್ರಿಯನ್ನು ಮತ್ತಷ್ಟು ಬಲಪಡಿಸುವ ಕುರಿತು ಚರ್ಚೆ ನಡೆಯುತ್ತಿದೆ. ಈ ಬಗ್ಗೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ದೇವೇಗೌಡರು ಸೇರಿದಂತೆ ಪಕ್ಷದ ವರಿಷ್ಠರು ಅಂತಿಮ ತೀರ್ಮಾನ ಕೈಗೊಳ್ಳಲಿದ್ದಾರೆ. ಅವರ ನಿರ್ಧಾರಕ್ಕೆ ಎಲ್ಲರೂ ಬದ್ಧರಾಗಿರುತ್ತೇವೆ. ಈಗಾಗಲೇ ಎರಡೂ ಪಕ್ಷಗಳ ನಡುವೆ ಉತ್ತಮ ಸಂಬಂಧವಿದ್ದು, ಮೈತ್ರಿ ಮತ್ತಷ್ಟು ಬಲಗೊಳ್ಳುವ ವಿಶ್ವಾಸವಿದೆ ಎಂದು ಹೇಳಿದರು.

ಜಿಲ್ಲಾ ಪಂಚಾಯಿತಿ ಮತ್ತು ತಾಲೂಕು ಪಂಚಾಯಿತಿ ಚುನಾವಣೆಗಳಲ್ಲಿಯೂ ಮೈತ್ರಿ ಮುಂದುವರಿಸುವ ಆಶಯವಿದೆ. ಈ ಕುರಿತು ಜೆಡಿಎಸ್ ನಾಯಕರು ಹಾಗೂ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರೊಂದಿಗೆ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು. ಅನಿವಾರ್ಯ ಕಾರಣಗಳಿಂದ ಕುಮಾರಸ್ವಾಮಿ ಇಂದಿನ ಭೇಟಿಗೆ ಬರಲು ಸಾಧ್ಯವಾಗಿಲ್ಲ ಎಂದರು.

ದೇವೇಗೌಡರನ್ನು ಭೇಟಿಯಾದ ಯಡಿಯೂರಪ್ಪ

● ವಿಕ್ರಮ ವಾಹಿನಿ | ಬೆಂಗಳೂರು

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರನ್ನು ಪದ್ಮನಾಭನಗರದ ನಿವಾಸದಲ್ಲಿ ಭೇಟಿ ಮಾಡಿ ಮಾತುಕತೆ ನಡೆಸಿದರು.

ಈ ಸಂದರ್ಭದಲ್ಲಿ ಶಾಸಕ ಎಂ. ಕೃಷ್ಣಪ್ಪ, ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಹಾಗೂ ಶಾಸಕ ಸಿ.ಕೆ. ರಾಮಮೂರ್ತಿ, ಆಗ್ನೇಯ ಪದವೀಧರರ ಕ್ಷೇತ್ರದ ವಿಜೇತ ಅಭ್ಯರ್ಥಿ ಎ.ಪಿ. ರಂಗನಾಥ್ ಸೇರಿದಂತೆ ಹಲವು ಪ್ರಮುಖರು

ಕಾಂಗ್ರೆಸ್‌ನಲ್ಲಿ ಆಂತರಿಕ ಗೊಂದಲ: ರಾಜ್ಯ ಕಾಂಗ್ರೆಸ್‌ನಲ್ಲಿನ ಆಂತರಿಕ ಭಿನ್ನಮತ, ನಾಯಕತ್ವದ ಗೊಂದಲ ಹಾಗೂ ಕಚ್ಚಾಟದಿಂದ ಆಡಳಿತದ ಮೇಲೆ ಪರಿಣಾಮ ಉಂಟಾಗುತ್ತಿದೆ. ಯಾವ ಕ್ಷಣದಲ್ಲಿ ಏನು ಬೇಕಾದರೂ ಆಗಬಹುದು ಎಂಬ ಪರಿಸ್ಥಿತಿ ನಿರ್ಮಾಣವಾಗಿದೆ.

ಮುಖ್ಯಮಂತ್ರಿ ಬದಲಾವಣೆ ಅಥವಾ ಮಧ್ಯಂತರ ಚುನಾವಣೆಯ ಸಾಧ್ಯತೆಗಳ ಬಗ್ಗೆ ಈಗಲೇ ಹೇಳಲು ಸಾಧ್ಯವಿಲ್ಲ. ಕಾಂಗ್ರೆಸ್ ನಾಯಕರು ಪದೇಪದೇ ದೆಹಲಿಗೆ ತೆರಳಿ ರಾಹುಲ್ ಗಾಂಧಿ ಅವರನ್ನು ಭೇಟಿಯಾಗುತ್ತಿರುವುದು ಪಕ್ಷದೊಳಗಿನ ಗೊಂದಲವನ್ನು ತೋರಿಸುತ್ತದೆ ಎಂದರು.

ರಾಜ್ಯದ ಆರ್ಥಿಕ ಪರಿಸ್ಥಿತಿ ಹದಗೆಟ್ಟಿದ್ದು, ಸರ್ಕಾರಿ ಸಾರಿಗೆ ಬಸ್‌ಗಳಿಗೆ ಡೀಸೆಲ್ ಹಾಕಲೂ ಹಣವಿಲ್ಲದ ಸ್ಥಿತಿ ನಿರ್ಮಾಣವಾಗಿದೆ ಎಂಬ ಮಾತುಗಳು ಕೇಳಿಬರುತ್ತಿವೆ. ಜನರು ತೆರಿಗೆ ರೂಪದಲ್ಲಿ ನೀಡಿದ ಹಣ ಎಲ್ಲಿ ಹೋಗುತ್ತಿದೆ ಎಂಬುದಕ್ಕೆ ಸರ್ಕಾರ ಉತ್ತರಿಸಬೇಕು. ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಆಡಳಿತ ನಡೆಸುತ್ತಿರುವ ಸರ್ಕಾರ ರಾಜ್ಯದ ಅಭಿವೃದ್ಧಿ ಹಾಗೂ ಜನರ ಮೂಲಭೂತ ಸಮಸ್ಯೆಗಳ ಕಡೆಗೆ ಗಮನಹರಿಸುತ್ತಿಲ್ಲ ಎಂದು ಆರೋಪಿಸಿದರು.

ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿಲ್ಲ: ರಾಜ್ಯದ ರೈತರು, ಬಡವರು, ಕಾರ್ಮಿಕರು ಸೇರಿದಂತೆ ಸಾರ್ವಜನಿಕರು ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಆದರೆ ಅವುಗಳಿಗೆ ಪರಿಹಾರ ಕಂಡುಕೊಳ್ಳುವ ಬದಲು ಕಾಂಗ್ರೆಸ್ ನಾಯಕರು ಆಂತರಿಕ ಕಚ್ಚಾಟ ಮತ್ತು ಸ್ಟಿಂಗ್ ಆಪರೇಷನ್ ವಿಚಾರಗಳಲ್ಲಿಯೇ ಕಾಲ ಕಳೆಯುತ್ತಿದ್ದಾರೆ. ಜನರ ಸಮಸ್ಯೆಗಳ ಬಗ್ಗೆ ಚರ್ಚೆಯಾಗಬೇಕಾದ ಸಂದರ್ಭದಲ್ಲಿ ರಾಜಕೀಯ ಗೊಂದಲಗಳೇ ಮುನ್ನೆಲೆಗೆ ಬರುತ್ತಿರುವುದು ದುರದೃಷ್ಟಕರ. ಸರ್ಕಾರದ ಆಡಳಿತವನ್ನು ಜನರು ಗಮನಿಸುತ್ತಿದ್ದು, ಸೂಕ್ತ ಸಮಯದಲ್ಲಿ ತಮ್ಮ ತೀರ್ಮಾನ ಪ್ರಕಟಿಸಲಿದ್ದಾರೆ ಎಂದು ಯಡಿಯೂರಪ್ಪ ಹೇಳಿದರು.

ಇದೇ ಸಂದರ್ಭದಲ್ಲಿ ದೇವೇಗೌಡರು ಹಾಗೂ ನಾಡಿನ ಜನತೆಗೆ ದೀಪಾವಳಿ ಹಬ್ಬದ ಶುಭಾಶಯಗಳನ್ನು ತಿಳಿಸಿದರು.

ಕಾಂಗ್ರೆಸ್ ಮುಖಂಡರ ಪತ್ನಿ ಹೆಸರಿನಲ್ಲಿ ನಕಲಿ ಮತದಾನ: ಮಹೇಶ್ ಟೆಂಗಿನಕಾಯಿ ಆರೋಪ

● ವಿಕ್ರಮ ವಾಹಿನಿ | ಬೆಂಗಳೂರು

ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ನಕಲಿ ಮತದಾನ ನಡೆದಿದೆ ಎಂದು ಆರೋಪಿಸಿರುವ ಶಾಸಕ ಮಹೇಶ್ ಟೆಂಗಿನಕಾಯಿ, ಈ ಬಗ್ಗೆ ಮುಖ್ಯಮಂತ್ರಿ ಹಾಗೂ ಕಾಂಗ್ರೆಸ್ ನಾಯಕರು ಸ್ಪಷ್ಟನೆ ನೀಡಬೇಕು ಎಂದು ಆಗ್ರಹಿಸಿದ್ದಾರೆ. ಮಹಿಳೆಯರ ಗ್ಯಾರಂಟಿ ಹಣದ 5 ಸಾವಿರ ಕೋಟಿ ರೂ. ಲೆಕ್ಕವನ್ನೂ ಸರ್ಕಾರ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ವಿಧಾನಪರಿಷತ್ತಿನ ಕರ್ನಾಟಕ ಪಶ್ಚಿಮ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಹಾವೇರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರ ಪತ್ನಿ ಹೆಸರಿನಲ್ಲಿ ಬೇರೊಬ್ಬರು ಮತ ಚಲಾಯಿಸಿದ್ದಾರೆ ಎಂದು ಶಾಸಕ ಮಹೇಶ್ ಟೆಂಗಿನಕಾಯಿ ಆರೋಪಿಸಿದರು.

ಬಿಜೆಪಿ ಕಚೇರಿ ಜಗನ್ನಾಥ ಭವನದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬೂತ್ ಸಂಖ್ಯೆ 85ರಲ್ಲಿ ಹಾವೇರಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಂಜೀವ್‌ಕುಮಾರ್ ಪಾಟೀಲ್ ಅವರ ಪತ್ನಿ ಆಶಾ ಪಾಟೀಲ್ ಹೆಸರಿನಲ್ಲಿ ಮತದಾನ ನಡೆದಿದೆ. ಆದರೆ, ಆಶಾ ಪಾಟೀಲ್ ಅವರು ಮತಗಟ್ಟೆಗೆ ಬಂದು ಮತ ಚಲಾಯಿಸಿಲ್ಲ. ಅವರ ಬದಲಿಗೆ ಸಚಿವ ರುದ್ರಪ್ಪ ಲಮಾಣಿ ಅವರೊಂದಿಗೆ ಬಂದಿದ್ದ ಶಿಲ್ಪಾ ಬುಡೆಣ್ಣವರ ಎಂಬ ಮಹಿಳೆ ಮತ ಚಲಾಯಿಸಿದ್ದಾರೆ ಎಂದು ದೂರಿದರು.

ಈ ಸಂಬಂಧ ವಿಡಿಯೋ ಪ್ರದರ್ಶಿಸಿದ ಅವರು, ಮತದಾರರ ಪಟ್ಟಿಯಲ್ಲಿ ಆಶಾ ಪಾಟೀಲ್ ಅವರ ಹೆಸರು 50ನೇ ಕ್ರಮಸಂಖ್ಯೆಯಲ್ಲಿದೆ. ಶಿಲ್ಪಾ ಬುಡೆಣ್ಣವರ ಪದವೀಧರರೂ ಅಲ್ಲ ಎಂದು ಆರೋಪಿಸಿದರು. ಶಿಲ್ಪಾ ಅವರು ಸಂಜೀವ್‌ಕುಮಾರ್ ಪಾಟೀಲ್ ಹಾಗೂ ಕಾಂಗ್ರೆಸ್ ಕಾರ್ಯಕರ್ತರೊಂದಿಗೆ ತೆಗೆಸಿಕೊಂಡಿರುವ ಭಾವಚಿತ್ರವನ್ನೂ ಪ್ರದರ್ಶಿಸಿದರು. ಈ ವಿಡಿಯೋವನ್ನು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ವೀಕ್ಷಿಸಬೇಕು ಎಂದು ಆಗ್ರಹಿಸಿದರು.

ಮತಗಳ್ಳತನಕ್ಕೆ ಸ್ಪಷ್ಟನೆ ನೀಡಿ: ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಜೆಪಿ ಹಾವೇರಿಯಲ್ಲಿ ಪ್ರತಿಭಟನೆ ನಡೆಸಿದೆ. ಇದರ ಪರಿಣಾಮವಾಗಿ ಹಾವೇರಿಯ ಅಧಿಕಾರಿ ವಿ.ಜಿ. ಮಲ್ಲೂರ್ ಅವರನ್ನು ಅಮಾನತುಗೊಳಿಸಲಾಗಿದೆ ಎಂದು ತಿಳಿಸಿದರು. ಮತದಾನ ಅಕ್ರಮದ ಕುರಿತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಪ್ರದೇಶ ಕಾಂಗ್ರೆಸ್ ಅಧ್ಯಕ್ಷರು ಸ್ಪಷ್ಟನೆ ನೀಡಬೇಕು. ಪೊಲೀಸ್ ಇಲಾಖೆ ಮತ್ತು ಚುನಾವಣಾ ಆಯೋಗಕ್ಕೂ ದೂರು ಸಲ್ಲಿಸಲಾಗಿದೆ. ನಕಲಿ ಮತದಾನದಲ್ಲಿ ಭಾಗಿಯಾದವರ ವಿರುದ್ಧ ಕ್ರಮ ಕೈಗೊಂಡು, ನಕಲಿ ಮತದಾರರನ್ನು ಬಂಧಿಸಬೇಕು ಎಂದು ಒತ್ತಾಯಿಸಿದರು. ಶಿಲ್ಪಾ ಬುಡೆಣ್ಣವರ ಅವರು ಹಾವೇರಿ ಗ್ಯಾರಂಟಿ ಸಮಿತಿಯ ಸದಸ್ಯರಾಗಿದ್ದಾರೆ. ಅವರನ್ನು ಸಮಿತಿಯಿಂದ ವಜಾಗೊಳಿಸುತ್ತೀರಾ ಎಂದು ಪ್ರಶ್ನಿಸಿದ ಅವರು, ಕಾಂಗ್ರೆಸ್ ನಾಯಕರು ಮತಗಳ್ಳತನದ ಆರೋಪ ಮಾಡುವ ಮೊದಲು ತಮ್ಮ ಪಕ್ಷದಲ್ಲಿನ ಅಕ್ರಮಗಳ ಬಗ್ಗೆ ಉತ್ತರಿಸಬೇಕು ಎಂದರು.

ಕಾಂಗ್ರೆಸ್‌ನಿಂದ ಹಣಕಾಸು ನೆರವಿನ ಆರೋಪ

ಪ್ರಧಾನಿ ನರೇಂದ್ರ ಮೋದಿ ವಿರುದ್ಧ ಹೋರಾಟ ನಡೆಸುವವರಿಗೆ ಹಾಗೂ ಘೋಷಣೆ ಕೂಗುವವರಿಗೆ ಕಾಂಗ್ರೆಸ್ ಧನಸಹಾಯ ಮಾಡಲಿದೆ ಎಂದು ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಹರಿಪ್ರಸಾದ್ ಹೇಳಿರುವುದಾಗಿ ಉಲ್ಲೇಖಿಸಿದ ಟೆಂಗಿನಕಾಯಿ, ದೇಶದಲ್ಲಿ ಅಭದ್ರತೆ ಸೃಷ್ಟಿಸುವ ಸಂಘಟನೆಗಳಿಗೂ ಕಾಂಗ್ರೆಸ್ ಹಣಕಾಸು ನೆರವು ನೀಡುತ್ತಿದೆಯೇ ಎಂಬ ಅನುಮಾನ ವ್ಯಕ್ತಪಡಿಸಿದರು.

ವಿಧಾನಪರಿಷತ್ತಿನ ನಾಲ್ಕೂ ಸ್ಥಾನಗಳಲ್ಲಿ ಎನ್‌ಡಿಎ ಮೈತ್ರಿಕೂಟ ಗೆಲುವು ಸಾಧಿಸಿರುವುದು ಸಂತಸದ ಸಂಗತಿ. ನವೆಂಬರ್ 1ರಂದು ದೆಹಲಿಯಲ್ಲಿ ರಾಹುಲ್ ಗಾಂಧಿ ನೇತೃತ್ವದಲ್ಲಿ ನಡೆಯಲಿರುವ 'ವೋಟ್ ಬಚಾವೋ, ದೇಶ್ ಬಚಾವೋ' ಪ್ರತಿಭಟನೆಯ ಕುರಿತು ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ಪಕ್ಷದಲ್ಲೇ ಮತಗಳ್ಳತನ ರಕ್ತಗತವಾಗಿದೆ. ಆದರೆ, ಇತರರ ಮೇಲೆ ಆರೋಪ ಮಾಡುವ ಪ್ರಯತ್ನ ನಡೆಯುತ್ತಿದೆ ಎಂದು ಟೀಕಿಸಿದರು.

ಗ್ಯಾರಂಟಿ ಹಣದ ಲೆಕ್ಕ ಕೊಡಿ: ಮಹಿಳೆಯರಿಗೆ 2025ರ ಫೆಬ್ರವರಿ ಮತ್ತು ಮಾರ್ಚ್ ತಿಂಗಳ ಗ್ಯಾರಂಟಿ ಹಣ ಪಾವತಿಯಾಗಿಲ್ಲ. ಈ ಕುರಿತು ಬೆಳಗಾವಿ ಅಧಿವೇಶನದಲ್ಲಿ ಪ್ರಶ್ನಿಸಿದಾಗ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಸಮರ್ಪಕ ಉತ್ತರ ನೀಡಿರಲಿಲ್ಲ. ಸುಮಾರು 5 ಸಾವಿರ ಕೋಟಿ ರೂ. ಹಣದ ಲೆಕ್ಕ ಇನ್ನೂ ಸಿಕ್ಕಿಲ್ಲ. ಈ ಹಣ ಎಲ್ಲಿ ಹೋಗಿದೆ ಎಂಬುದನ್ನು ಮುಖ್ಯಮಂತ್ರಿ ಸ್ಪಷ್ಟಪಡಿಸಬೇಕು ಎಂದು ಮಹೇಶ್ ಟೆಂಗಿನಕಾಯಿ ಆಗ್ರಹಿಸಿದರು.

ಕೇದಾರನಾಥದಲ್ಲಿ ಋತುವಿನ ಮೊದಲ ಹಿಮಪಾತ

● ವಿಕ್ರಮ ವಾಹಿನಿ | ಕೇದಾರನಾಥ

ಉತ್ತರಾಖಂಡದ ಪ್ರಸಿದ್ಧ ಯಾತ್ರಾಸ್ಥಳ ಕೇದಾರನಾಥ ಧಾಮದಲ್ಲಿ ಈ ಋತುವಿನ ಮೊದಲ ಹಿಮಪಾತ ಸಂಭವಿಸಿದ್ದು, ಇಡೀ ಪ್ರದೇಶ ಹಿಮದ ಹೊದಿಕೆಯಿಂದ ಕಂಗೊಳಿಸುತ್ತಿದೆ. ಗುರುವಾರದಿಂದ ಸತತವಾಗಿ ಸುರಿಯುತ್ತಿರುವ ಹಿಮದಿಂದ ದೇವಾಲಯದ ಆವರಣ, ಭೈರವನಾಥ ಗುಡ್ಡ ಹಾಗೂ ಸುತ್ತಮುತ್ತಲಿನ ಹಿಮಾಲಯ ಪರ್ವತ ಶ್ರೇಣಿಗಳು ಬಿಳಿ ಹಿಮದಿಂದ ಆವೃತಗೊಂಡಿವೆ.

ನಿರಂತರ ಹಿಮಪಾತದೊಂದಿಗೆ ತಂಪಾದ ಗಾಳಿ ಬೀಸುತ್ತಿರುವುದರಿಂದ ಕೇದಾರನಾಥ ಕಣಿವೆಯಲ್ಲಿ ತಾಪಮಾನ ಗಣನೀಯವಾಗಿ ಇಳಿಕೆಯಾಗಿದೆ. ಉಷ್ಣಾಂಶ ಶೂನ್ಯಕ್ಕಿಂತ ಕೆಳಮಟ್ಟಕ್ಕೆ ಕುಸಿದಿದ್ದು, ಪ್ರದೇಶದಲ್ಲಿ ತೀವ್ರ ಚಳಿ ಆವರಿಸಿದೆ. ದೇವಾಲಯದ ಸುತ್ತಲಿನ ಪರ್ವತಗಳು ಹಿಮದಿಂದ ಆವೃತಗೊಂಡಿರುವ ದೃಶ್ಯ ಪ್ರವಾಸಿಗರು ಹಾಗೂ ಭಕ್ತರ ಗಮನ ಸೆಳೆದಿದೆ.

ಹಿಮಪಾತದಿಂದಾಗಿ ಕೇದಾರನಾಥದ ಪ್ರಕೃತಿಸೌಂದರ್ಯ ಮತ್ತಷ್ಟು ಹೆಚ್ಚಾಗಿದ್ದು, ಹಿಮದಿಂದ ಆವೃತಗೊಂಡ ದೇವಾಲಯ ಹಾಗೂ ಪರ್ವತಗಳ ದೃಶ್ಯವನ್ನು ಕಂಡು ಭಕ್ತರು ಮತ್ತು ಪ್ರವಾಸಿಗರು ಸಂಭ್ರಮಿಸುತ್ತಿದ್ದಾರೆ. ಹಿಮಪಾತದ ನಡುವೆ ಧಾಮದ ವಾತಾವರಣ ಸಂಪೂರ್ಣ ಬದಲಾಗಿದ್ದು, ಚಳಿಯ ತೀವ್ರತೆಯೂ ಹೆಚ್ಚಾಗಿದೆ.

ಹವಾಮಾನ ವೈಪರೀತ್ಯ ಹಾಗೂ ತಾಪಮಾನ ಕುಸಿತದ ಹಿನ್ನೆಲೆಯಲ್ಲಿ ಧಾಮಕ್ಕೆ ಆಗಮಿಸುವ ಯಾತ್ರಿಕರು ಮುನ್ನೆಚ್ಚರಿಕೆ ವಹಿಸುವಂತೆ ಸ್ಥಳೀಯ ಆಡಳಿತ ಮತ್ತು ಪೊಲೀಸ್ ಇಲಾಖೆ ಮನವಿ ಮಾಡಿವೆ. ಬೆಚ್ಚಗಿನ ಉಡುಪುಗಳನ್ನು ಧರಿಸುವುದರ ಜತೆಗೆ ಅಗತ್ಯ ವೈದ್ಯಕೀಯ ಸೌಲಭ್ಯಗಳನ್ನು ಹೊಂದಿರಬೇಕು ಎಂದು ಸೂಚಿಸಲಾಗಿದೆ. ಹವಾಮಾನ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಯಾತ್ರಿಕರು ಪ್ರಯಾಣದ ವೇಳೆ ಎಚ್ಚರಿಕೆ ವಹಿಸುವಂತೆ ಅಧಿಕಾರಿಗಳು ಸಲಹೆ ನೀಡಿದ್ದಾರೆ.

Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145
Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 202,